ಸಂಪುಟ: ೦೭/ ಸಂಚಿಕೆ: ೨೦೪/ ಶನಿವಾರ ದಿನಾಂಕ : ೦೪-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 204/SATURDAY Date : 04-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



## ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಚರ್ಚೆಯೇ ನಡೆದಿಲ್ಲ

**ಬೆಂಗಳೂರು:** ವಿಪಕ್ಷ ನಾಯಕ ಅಶೋಕ್ ಪದೇ ಪದೇ ಮುಖ್ಯಮಂತ್ರಿ ಬದಲಾವಣೆಯಾಗಲಿದೆ ಎಂಬ ಹೇಳಿಕೆ ಕೊಡುತ್ತಿದ್ದಾರೆ. ಇಂದು ಮತ್ತೆ ನವೆಂಬರ್ ಕ್ರಾಂತಿ ಆಗಲಿದೆ ಎಂದಿದ್ದಾರೆ. ಬಹುಶಃ ಅಶೋಕ್‌ರವರಿಗೆ ಅಸಂಬದ್ಧವಾಗಿ ಮಾತಾಡುವ ಬಾಯಿ ಚಪಲ ಇದ್ದಂತಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್‌ವೊಂದನ್ನು ಹಂಚಿಕೊಂಡಿರುವ ಅವರು, ಮುಖ್ಯಮಂತ್ರಿ ಬದಲಾವಣೆ ವಿಚಾರ ನಮ್ಮ ಪಕ್ಷಕ್ಕೆ ಸಂಬಂಧಿಸಿದ್ದು. ಅಶೋಕ್ ಸೇರಿದಂತೆ ಬಿಜೆಪಿ ನಾಯಕರಿಗ್ಯಾಕೆ ನಮ್ಮ ಪಕ್ಷದ ಚಿಂತೆ.? ಎಂದು ಪ್ರಶ್ನಿಸಿದ್ದಾರೆ. ಮುಖ್ಯಮಂತ್ರಿ ಬದಲಾವಣೆಯ ಬಗ್ಗೆ ನಮ್ಮ ಪಕ್ಷದಲ್ಲಿ ಚರ್ಚೆಯೇ ನಡೆದಿಲ್ಲ. ಆದರೆ ಅಶೋಕ್ ಕವಡೆ ಶಾಸ್ತ್ರ ಹೇಳುವವರಂತೆ ನವೆಂಬರ್ ಕ್ರಾಂತಿ ಆಗುತ್ತೆ ಎಂದು ಭವಿಷ್ಯ ಹೇಳುತ್ತಿದ್ದಾರೆ. ಆದರೆ ಅದು ಬುರುಡೆ ಭವಿಷ್ಯವಾಗಲಿದೆ. ನಮ್ಮ ಪಕ್ಷದಲ್ಲಿ ಏನೇ ಬದಲಾವಣೆ ಇದ್ದರೂ ಅದನ್ನು ನಮ್ಮ ಪಕ್ಷದ ಹೈಕಮಾಂಡ್ ನಿರ್ಧರಿಸಲಿದೆ. ನಮ್ಮ ಪಕ್ಷದ ಆಂತರಿಕ ವಿಚಾರದ ಬಗ್ಗೆ ಅಶೋಕ್‌ರವರಿಗೆ ಅಷ್ಟೊಂದು ಆಸಕ್ತಿ ಯಾಕೆ.? ಎಂದು ಕೇಳಿದ್ದಾರೆ.

# ತಾವೇ ಹೆಚ್ಚಿಸಿದ್ದ ಜಿಎಸ್‌ಟಿಯನ್ನು ಕಡಿತಗೊಳಿಸಿ ಕೇಂದ್ರ ಸರಕಾರ ಬೆನ್ನುತಟ್ಟಿಕೊಳ್ಳುತ್ತಿದೆ

**ಮೈಸೂರು:** ಬಿಹಾರ ಚುನಾವಣೆಯ ಹಿನ್ನಲೆಯಲ್ಲಿ ಜಿಎಸ್‌ಟಿಯನ್ನು ಸರಳೀಕರಣಗೊಳಿಸಿರುವ ಕೇಂದ್ರ ಸರಕಾರದ ಈ ನಿರ್ಧಾರದಿಂದ ರಾಜ್ಯಕ್ಕೆ ಅಂದಾಜು 15 ಸಾವಿರ ಕೋಟಿ ರೂ.ಗಳ ನಷ್ಟವಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಶುಕ್ರವಾರ ಮೈಸೂರಿನ ತಮ್ಮ ನಿವಾಸದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಜಿಎಸ್ ಟಿ ಉತ್ಸವ ಆಚರಿಸುವಂತೆ ಕೇಂದ್ರ ಸರಕಾರ ತಿಳಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, 2017 ರಲ್ಲಿ ಕೇಂದ್ರ ಸರಕಾರವೇ ಜಿಎಸ್ ಟಿ ಯನ್ನು ಜಾರಿಗೆ ತಂದು ಜಿಎಸ್ ಟಿ ದರ ನಿಗದಿಪಡಿಸಿದರು. ಕಳೆದ ಎಂಟು ವರ್ಷದಿಂದ ಹೆಚ್ಚಿನ ದರ ಪಡೆದಿರುವ ಕೇಂದ್ರ ಸರಕಾರ, ಆ ಹಣವನ್ನು ಮರಳಿ ನೀಡುವರೇ? ತಾವೇ ಹೆಚ್ಚಿಸಿದ ಜಿಎಸ್ ಟಿ ದರವನ್ನು ತಾವೇ ಕಡಿಮೆ ಮಾಡಿ, ತಮ್ಮ ಬೆನ್ನು ತಾವೇ ತಟ್ಟಿಕೊಳ್ಳುವ ಕೆಲಸದಲ್ಲಿ ಕೇಂದ್ರ ತೊಡಗಿದೆ. ಬಿಹಾರದ ಚುನಾವಣೆಯಿರುವ ಕಾರಣ, ಜಿಎಸ್ ಟಿ ಯನ್ನು ಸರಳೀಕರಣಗೊಳಿಸಿ, ಕಡಿತಗೊಳಿಸಿದ್ದೇವೆ ಎಂದು ಹೇಳಿಕೊಳ್ಳುವ ಅವಶ್ಯಕತೆಯಿಲ್ಲ ಎಂದು ತಿಳಿಸಿದರು.

**ರಾಜ್ಯಕ್ಕೆ ಕೇಂದ್ರದ ಸುಮಾರು 17000 ಕೋಟಿ ಅನುದಾನದಲ್ಲಿ ಖೋತಾ:** ಕೇಂದ್ರದಿಂದ ತೆರಿಗೆ ಹಣವಗಿ ಕೇವಲ 3200 ಕೋಟಿ ರೂ.ಗಳನ್ನು ರಾಜ್ಯಕ್ಕೆ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಉತ್ತರಪ್ರದೇಶಕ್ಕೆ ಶೇ.18 ರಷ್ಟು ನೀಡುತ್ತಿದ್ದು, ರಾಜ್ಯಕ್ಕೆ ಕೇವಲ ಶೇ. 3.5 ರಷ್ಟು ನೀಡುತ್ತಿರುವುದು ಅನ್ಯಾಯ. ಕರ್ನಾಟಕ 4.5 ಲಕ್ಷ ಕೋಟಿ ತೆರಿಗೆ ರೂಪದಲ್ಲಿ ಕೇಂದ್ರಕ್ಕೆ ನೀಡಿದರೆ , ನಮಗೆ ರೂಪಾಯಿಗೆ ಕೇವಲ 14 ಪೈಸೆ ಮಾತ್ರ ರಾಜ್ಯ ದೊರೆಯುತ್ತದೆ. 15 ನೇ ಹಣಕಾಸು ಆಯೋಗದಲ್ಲಿ ರಾಜ್ಯಕ್ಕೆ ನೀಡಲಾಗಿದ್ದ ವಿಶೇಷ ಅನುದಾನವನ್ನು ಕೇಂದ್ರ ವಿತ್ತಸಚಿವರು ರದ್ದುಪಡಿಸಿದರು. ಆಯೋಗದ ಶಿಫಾರಸ್ಸಿನಂತೆ 5490 ಕೋಟಿ ಹಾಗೂ ಕೆರೆಗಳ ಅಭಿವೃದ್ಧಿ 3000 ಕೋಟಿ, ರಸ್ತೆ ನಿರ್ಮಾಣಕ್ಕೆ 3000 ಕೋಟಿ, ಭದ್ರಾ ಮೇಲ್ದಂಡೆ ಯೋಜನೆಗೆ 5000 ಕೋಟಿ ರೂ.ಗಳ ಅನುದಾನವನ್ನು ನಮಗೆ ನೀಡಲಾಗಿಲ್ಲ. ಒಟ್ಟಾರೆ 17000 ಕೋಟಿ ರೂ. ಬರಬೇಕಾಗಿದ್ದ ಅನುದಾನ ಖೋತಾ ಆಗಿದೆ. ಕಳೆದ ಬಾರಿಯಂತೆ ಈ ಬಾರಿಯೂ ಅಗತ್ಯಬಿದ್ದರೆ ನ್ಯಾಯಾಲಯದ ನೆರವು ಪಡೆದು ಕೇಂದ್ರದ ಅನುದಾನ ಪಡೆಯಲಾಗುವುದು ಎಂದರು.



**ಅಕ್ಟೋಬರ್ 7 ರೊಳಗೆ ಸಮೀಕ್ಷೆ ಪೂರ್ಣಗೊಳ್ಳುವ ಭರವಸೆಯಿದೆ:** ರಾಜ್ಯದಲ್ಲಿ ಜಾತಿಸಮೀಕ್ಷೆ ಕಾರ್ಯದ ಪ್ರಗತಿ ಬಗ್ಗೆ ಪ್ರತಿಕ್ರಿಯೆ ನೀಡಿ, ರಾಜ್ಯದಲ್ಲಿ ಈಗಾಗಲೇ ಸುಮಾರು 80 ಲಕ್ಷ ಮನೆಗಳಿಂದ 3 ಕೋಟಿ ಜನಸಂಖ್ಯೆಯ ಸಮೀಕ್ಷೆ ಪೂರ್ಣಗೊಂಡಿದ್ದು, ಅಕ್ಟೋಬರ್ 7ರೊಳಗೆ ಸಮೀಕ್ಷೆ ಕಾರ್ಯ ಮುಗಿಯುವ ಭರವಸೆಯಿದೆ. 1.80 ಕೋಟಿ ಕುಟುಂಬಗಳ ಸಮೀಕ್ಷೆ ನಡೆಯಬೇಕಿದೆ. ಸಮೀಕ್ಷೆಯ ಪ್ರಗತಿಯನ್ನು ಗಮನಿಸಿ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

**ಬಿಜೆಪಿ ಜನರ ದಾರಿ ತಪ್ಪಿಸುತ್ತಿದೆ:** ಮತಾಂತರ ಹಾಗೂ ಜಾತಿಒಡೆಯುವ ದೃಷ್ಟಿಯಿಂದ ಸಮೀಕ್ಷೆಯನ್ನು ಸರಕಾರ ಮಾಡುತ್ತಿದೆ ಎಂಬ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿಯವರ ಹೇಳಿಕೆಗೆ ಪ್ರತಿಕ್ರಿಯೆ ನೀಡಿ, ಪ್ರಹ್ಲಾದ್ ಜೋಷಿಯವರು ಕೇಂದ್ರ ಸಚಿವರಾಗಿದ್ದು, ಕೇಂದ್ರ ನಡೆಸಲಿರುವ ಜಾತಿಸಮೀಕ್ಷೆಯ ಉದ್ದೇಶವನ್ನು ತಿಳಿಸಬೇಕು.

ಕೇಂದ್ರ ಸರಕಾರಕ್ಕೆ ಜಾತಿ, ಧರ್ಮ ಒಡೆಯುವ ಉದ್ದೇಶವಿದೆಯೇ? ಕರ್ನಾಟಕದಲ್ಲಿ ಆರ್ಥಿಕ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ನಡೆಯುತ್ತಿದ್ದು, ಜನರ ಸ್ಥಿತಿಗತಿ ಬಗ್ಗೆ ಮಾಹಿತಿ ಪಡೆಯುವ ಉದ್ದೇಶವಿದೆ. ಕಾಂತರಾಜು ವರದಿಯಲ್ಲಿ ಬ್ರಾಹ್ಮಣ ಕ್ರಿಶ್ಚಿಯನ್, ಎಂಬಿತ್ಯಾದಿ ಜಾತಿಗಳನ್ನು ನಮೂದಿಸಲಾಗಿತ್ತು. ಜನರು ತಮ್ಮ ಜಾತಿಯನ್ನು ಸ್ವಯಂಪ್ರೇರಿತರಾಗಿ ನಮೂದಿಸಿದರೆ ಅದಕ್ಕೆ ಸರಕಾರ ಜವಾಬ್ದಾರವಾಗುವುದಿಲ್ಲ. ಆದರೆ ಆಯೋಗ, ಈ ಜಾತಿಗಳನ್ನು ಪಟ್ಟಿಯಿಂದ ತೆಗೆದುಹಾಕಿದೆ. ಆದ್ದರಿಂದ ಜನರು ಸ್ವಯಂಪ್ರೇರಿತವಾಗಿ ಹೇಳುವ ಜಾತಿಯ ಮಾಹಿತಿಯನ್ನು ಆಯೋಗ ಪಡೆಯಲಿದೆ ಎಂದರು.

### ಬಿಜೆಪಿ ಸಂಸದರಿಗೆ ರಾಜ್ಯದ ಹಿತ ಬೇಕಾಗಿಲ್ಲ

ಕೇಂದ್ರದ ಕಡಿಮೆ ಅನುದಾನದ ನಡುವೆ ಗ್ಯಾರಂಟಿಗಳ ವೆಚ್ಚವನ್ನು ಭರಿಸುವುದು ಸರಕಾರಕ್ಕೆ ಸವಾಲಾಗಿದ್ದರೂ, ಸವಾಲನ್ನು ದಿಟ್ಟತನದಿಂದ ಎದುರಿಸಲಾಗುವುದು. ಜಿಎಸ್ ಟಿ ಸರಳೀಕರಣ ದಿಂದ ರಾಜ್ಯ ಸರಕಾರಗಳು ಹೆಚ್ಚು ನಷ್ಟ ಎದುರಿಸಲಿವೆ. ಕರ್ನಾಟಕಕ್ಕೆ ಇದರಿಂದ ವಾರ್ಷಿಕ ಅಂದಾಜು 15 ಸಾವಿರ ಕೋಟಿ ನಷ್ಟವಾಗಲಿದೆ. ಕೇಂದ್ರ ಸರಕಾರ, ಎನ್‌ಡಿಎಗೆ ಬರುವ ರಾಜ್ಯಗಳ ಅನುಕೂಲಕ್ಕೆ ತಕ್ಕಂತೆ ಜಿಎಸ್ ಟಿ ಪರಿಹಾರವನ್ನು ನೀಡುತ್ತಿದೆ. ಕರ್ನಾಟಕದ ಬಿಜೆಪಿ ಸಂಸದರಿಗೆ ಮೋದಿಯವರನ್ನು ಹೊಗಳುವುದೇ ಕೆಲಸವಾಗಿದ್ದು, ರಾಜ್ಯದ ಹಿತಚಿಂತನೆ ಮಾಡುತ್ತಿಲ್ಲ.

## ಭಾರತದ ಕೃಷಿ ಉತ್ಪನ್ನ, ಔಷಧಿ ಖರೀದಿಗೆ ರಷ್ಯಾ ನಿರ್ಧಾರ



**ಮಾಸ್ಕೋ:** ನವದೆಹಲಿಯಿಂದ ಭಾರೀ ಕಚ್ಚಾ ತೈಲ ಆಮದು ಉಂಟಾಗಿರುವುದರಿಂದ ಭಾರತದೊಂದಿಗೆ ವ್ಯಾಪಾರ ಅಸಮತೋಲನವನ್ನು ತಗ್ಗಿಸಲು ಭಾರತದಿಂದ ಹೆಚ್ಚಿನ ಕೃಷಿ ಉತ್ಪನ್ನಗಳು ಮತ್ತು ಔಷಧಿಗಳನ್ನು ಖರೀದಿಸುವುದು ಸೇರಿದಂತೆ ಇನ್ನಿತರ ಕ್ರಮಗಳನ್ನು ರೂಪಿಸಲು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಆದೇಶಿಸಿದ್ದಾರೆ. ಡಿಸೆಂಬರ್ ಆರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ವಾರ್ಷಿಕ ಶೃಂಗಸಭೆಗಾಗಿ ಭಾರತಕ್ಕೆ ಭೇಟಿ ನೀಡುವ ವಾರಗಳ ಮೊದಲು ಪುಟಿನ್ ಅವರ ಘೋಷಣೆ ಬಂದಿದೆ.

ದಕ್ಷಿಣ ರಷ್ಯಾದ ಸೋಚಿಯ ಕಪ್ಪು ಸಮುದ್ರದ ರೆಸಾರ್ಟ್‌ನಲ್ಲಿ ಭಾರತ ಸೇರಿದಂತೆ 140 ದೇಶಗಳ ಭದ್ರತಾ ಮತ್ತು ಭೌಗೋಳಿಕ ರಾಜಕೀಯ ತಜ್ಞರ ಅಂತರರಾಷ್ಟ್ರೀಯ ವಾಲ್ಡೈ ಚರ್ಚಾ ವೇದಿಕೆಯಲ್ಲಿ ರಷ್ಯಾದ ಅಧ್ಯಕ್ಷರು ಮಾತನಾಡುತ್ತಿದ್ದರುಅಮೆರಿಕದ ದಂಡನಾತ್ಮಕ ಸುಂಕಗಳಿಂದಾಗಿ ಭಾರತ ಎದುರಿಸುತ್ತಿರುವ ನಷ್ಟಗಳನ್ನು ರಷ್ಯಾದಿಂದ ಕಚ್ಚಾ ತೈಲ ಆಮದುಗಳಿಂದ ಸಮತೋಲನಗೊಳಿಸಲಾಗುತ್ತದೆ, ಜೊತೆಗೆ ಅದು ಸಾರ್ವಭೌಮ ರಾಷ್ಟ್ರವಾಗಿ ಪ್ರತಿಷ್ಠೆಯನ್ನು ಪಡೆಯುತ್ತದೆ ಎಂದು ಪುಟಿನ್ ಹೇಳಿದರು.

ಅಮೆರಿಕ ಅಧ್ಯಕ್ಷ ಡೊನಾಲ್ಡ ಟ್ರಂಪ್ ನವದೆಹಲಿಯ ಮೇಲೆ ವಿಧಿಸಿದ ಹೆಚ್ಚುವರಿ 25 ಪ್ರತಿಶತ ಸುಂಕವನ್ನು ರಷ್ಯಾದ ತೈಲ ಖರೀದಿಗೆ ದಂಡವಾಗಿ ಉಲ್ಲೇಖಿಸುತ್ತಿದ್ದರು, ಇದು ಭಾರತದ ಮೇಲೆ ಅಮೆರಿಕ ವಿಧಿಸಿದ ಒಟ್ಟು ಸುಂಕಗಳನ್ನು ಶೇಕಡಾ 50 ಕ್ಕೆ ತರುತ್ತದೆ.ವ್ಯಾಪಾರ ಅಸಮತೋಲನವನ್ನು ತೆಗೆದುಹಾಕಲು, ರಷ್ಯಾ ಭಾರತದಿಂದ ಹೆಚ್ಚಿನ ಕೃಷಿ ಉತ್ಪನ್ನಗಳು ಮತ್ತು ಔಷಧಿಗಳನ್ನು ಖರೀದಿಸಬಹುದು ಎಂದು ಪುಟಿನ್ ಹೇಳಿದರು.

ಭಾರತದಿಂದ ಹೆಚ್ಚಿನ ಕೃಷಿ ಉತ್ಪನ್ನಗಳನ್ನು ಖರೀದಿಸಬಹುದು. ಔಷಧೀಯ ಉತ್ಪನ್ನಗಳು, ಔಷಧಗಳಿಗೆ ಸಂಬಂಧಿಸಿದಂತೆ ನಮ್ಮ ಕಡೆಯಿಂದ ಕೆಲವು ಕ್ರಮಗಳನ್ನು ಕೈಗೊಳ್ಳಬಹುದು ಎಂದು ಪುಟಿನ್ ಹೇಳಿದರು.



## ಹಿರಿಯ ಪತ್ರಕರ್ತ ಟಿ.ಜೆ.ಎಸ್. ಜಾರ್ಜ್ ನಿಧನ

**ಬೆಂಗಳೂರು:** ಹಿರಿಯ ಪತ್ರಕರ್ತ, ಲೇಖಕ ಹಾಗೂ ಸಂಪಾದಕ ಟಿ.ಜೆ.ಎಸ್. ಜಾರ್ಜ್ ಅವರು ಶುಕ್ರವಾರ ಬೆಂಗಳೂರಿನಲ್ಲಿ 97ನೇ ವಯಸ್ಸಿನಲ್ಲಿ ನಿಧನರಾದರು.

ಆರು ದಶಕಗಳಿಗೂ ಹೆಚ್ಚು ಕಾಲ ತೀಕ್ಷ್ಣ ಲೇಖನಿಗಳ ಮೂಲಕ ಭಾರತೀಯ ಹಾಗೂ ಅಂತರರಾಷ್ಟ್ರೀಯ ಪತ್ರಿಕೋದ್ಯಮವನ್ನು ಶ್ರೀಮಂತಗೊಳಿಸಿದ ಅವರು, ತನ್ನ ಧೈರ್ಯಶಾಲಿ ಧ್ವನಿ ಮತ್ತು ಅಸಾಧಾರಣ ಸಂಪಾದಕೀಯ ದೃಷ್ಟಿಕೋನಕ್ಕಾಗಿ ಹೆಸರುವಾಸಿಯಾಗಿದ್ದರು. 1975ರಲ್ಲಿ ಹಾಂಗ್‌ಕಾಂಗ್‌ನಲ್ಲಿ ಏಷ್ಯಾವೀಕ್ ಇಂಗ್ಲಿಷ್ ವಾರಪತ್ರಿಕೆಯನ್ನು ಸ್ಥಾಪಿಸಿ ಅದರ ಸ್ಥಾಪಕ ಸಂಪಾದಕರಾಗಿದ್ದ ಜಾರ್ಜ್, ಏಷ್ಯಾದ ಆಗುಹೋಗುಗಳನ್ನು ಜಾಗತಿಕ ಮಟ್ಟದಲ್ಲಿ ತಲುಪಿಸುವಲ್ಲಿ ಪ್ರಮುಖ ಪಾತ್ರವಹಿಸಿದರು. ಭಾರತಕ್ಕೆ ಮರಳಿದ ನಂತರ, ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್‌ನಲ್ಲಿ "ಪಾಯಿಂಟ್ ಆಫ್ ವ್ಯೂ" ಎಂಬ ತಮ್ಮ ಜನಪ್ರಿಯ ಅಂಕಣದ ಮೂಲಕ ಭ್ರಷ್ಟಾಚಾರ, ಸಾಮಾಜಿಕ ಅನ್ಯಾಯ ಮತ್ತು ಧಾರ್ಮಿಕ ಅಸಹಿಷ್ಣುತೆಯ ವಿರುದ್ಧ ನಿರಂತರವಾಗಿ ಧ್ವನಿ ಎತ್ತಿದರು. 25 ವರ್ಷಗಳ ಕಾಲ (ಜೂನ್ 2022ರವರೆಗೆ) ಅವರು ಅಂಕಣಕಾರರಾಗಿ ಸೇವೆ ಸಲ್ಲಿಸಿದರು.

# ಎಲ್ಲಾ ಚುನಾವಣೆಗಳಲ್ಲೂ ಬಿಜೆಪಿ-ಜೆಡಿಎಸ್ ಮೈತ್ರಿ

**ಬೆಂಗಳೂರು:** ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಬಗ್ಗೆ ಯಾವುದೇ ಕಾರಣಕ್ಕೂ ಆತಂಕ ಪಡುವ ಅಗತ್ಯವಿಲ್ಲ. ಎಲ್ಲ ಹಂತದ ಚುನಾವಣೆಗಳಲ್ಲೂ ಉಭಯ ಪಕ್ಷಗಳ ಮೈತ್ರಿ ಮುಂದುವರೆಯುತ್ತದೆ ಎಂದು ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡ ಘೋಷಿಸಿದ್ದಾರೆ.

ಶುಕ್ರವಾರ ಬೆಂಗಳೂರಿನ ಜೆಡಿಎಸ್ ಕಚೇರಿ ಜೆ.ಪಿ.ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ಐದು ಮಹಾನಗರ ಪಾಲಿಕೆ ಸೇರಿದಂತೆ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಮುಂದಿನ ವಿಧಾನಸಭೆ ಚುನಾವಣೆಗಳಲ್ಲೂ ಬಿಜೆಪಿ–ಜೆಡಿಎಸ್ ಮೈತ್ರಿ ಮುಂದುವರೆಯುತ್ತದೆ ಎಂದು ಸಷ್ಟಪಡಿಸಿದರು.

ಪ್ರಧಾನಮಂತ್ರಿ ಮೋದಿ ಅವರೊಂದಿಗಿನ ಒಡನಾಟದಲ್ಲಿ ಯಾವುದೇ ಬದಲಾವಣೆ ಇಲ್ಲ. ನನ್ನ ಬಗ್ಗೆ ಪ್ರಧಾನಿಯವರು ಒಂದೇ ಒಂದು ಮಾತನ್ನೂ ಲಘುವಾಗಿ ಆಡಿಲ್ಲ. ಎರಡೂ ಪಕ್ಷಗಳ ನಡುವಿನ ಸಂಬಂಧ ಚೆನ್ನಾಗಿದೆ ಎಂದು ದೇವೇಗೌಡ ಸ್ಪಷ್ಟಪಡಿಸಿದರು. ಬಿಡದಿ ಟೌನ್‌ಶಿಪ್ ವಿರೋಧಿಸಿ ರೈತರು ಪ್ರತಿಭಟನೆ ಮಾಡುತ್ತಿರುವ ವಿಚಾರದ ಬಗ್ಗೆ ಪ್ರತಿಕ್ರಿಯಿಸಲು ನಿರಾಕರಿಸಿದ ದೇವೇಗೌಡರು, ಈ ವಿಚಾರದಲ್ಲಿ ಯಾರ ಹೆಸರನ್ನೂ ಪ್ರಸ್ತಾಪಿಸುವುದಿಲ್ಲ. ನಮ್ಮದು ಸಣ್ಣ ರಾಜಕೀಯ ಪಕ್ಷವಾಗಿದ್ದು, ಅದನ್ನು ಉಳಿಸಿ–ಬೆಳೆಸಲು ಶಕ್ತಿಮೀರಿ ಕೆಲಸ ಮಾಡುತ್ತೇವೆ. ಚುನಾವಣೆ ಬಂದಾಗ ಜನರು ತೀರ್ಪು ನೀಡುತ್ತಾರೆ. ಅಲ್ಲಿಯವರೆಗೂ ಕಾಯಲೇಬೇಕು ಎಂದು ಮಾರ್ಮಿಕವಾಗಿ ನುಡಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದಾಗಿ ರಾಜ್ಯ ಸರಕಾರದ ಹಣಕಾಸಿನ ಪರಿಸ್ಥಿತಿ ಹದಗೆಟ್ಟಿದೆ ಎಂದು ಕಾಂಗ್ರೆಸ್ ಶಾಸಕರೇ ಹೇಳುತ್ತಿದ್ದಾರೆ. ಅವರಲ್ಲೇ ಗೊಂದಲವಿದೆ. ಇಂತಹ ಪರಿಸ್ಥಿತಿ ಉಂಟಾದಾಗ ರಾಜ್ಯ ಸರಕಾರ ಶಕ್ತಿ ಮೀರಿ ಜನರಿಗೆ ಸಹಾಯ ಮಾಡುವ ಜವಾಬ್ದಾರಿ ಇದೆ ಎಂದು ದೇವೇಗೌಡರು ಹೇಳಿದರು.

ಜೆಡಿಎಸ್ ಪಕ್ಷ ಸಂಘಟನೆಗೆ ನಾನು ಶ್ರಮ ಹಾಕುತ್ತೇನೆ. ಹಿಂದಿನಂತೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಸಕ್ರಿಯವಾಗಿ ಕೆಲಸ ಮಾಡಲಿದ್ದಾರೆ. ಅವರ ಆರೋಗ್ಯ ಉತ್ತಮವಾಗಿದೆ. ನಿಖಿಲ್ ಕುಮಾರಸ್ವಾಮಿ ಅವರು ಪಕ್ಷ ಸಂಘಟನೆಯನ್ನು ಮಾಡುತ್ತಿದ್ದಾರೆ. ಮೂರು ಸಲ ಅವರು ಚುನಾವಣೆಯಲ್ಲಿ ಸೋತರೂ ಮನೆಯಲ್ಲಿ ಕೂರದೆ 60 ರಿಂದ 65 ಕ್ಷೇತ್ರಗಳಲ್ಲಿ ಸಂಘಟನೆ ಕೆಲಸದಲ್ಲಿ ನಿರತರಾಗಿದ್ದಾರೆ ಎಂದು ದೇವೇಗೌಡರು ಮೆಚ್ಚುಗೆ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಪರಿಷತ್ ಸದಸ್ಯ ಟಿ.ಎನ್.ಜವರಾಯಿಗೌಡ, ಮಾಜಿ ಸಚಿವೆ ಲೀಲಾದೇವಿ ಆರ್. ಪ್ರಸಾದ್, ಮಾಜಿ ಶಾಸಕ ಎಚ್.ನಿಂಗಪ್ಪ, ನಗರ ಜೆಡಿಎಸ್ ಘಟಕದ ಅಧ್ಯಕ್ಷ ಎಚ್.ಎಂ.ರಮೇಶ್‌ಗೌಡ, ಮಾಜಿ ಸದಸ್ಯರಾದ ಕೆ.ಎನ್.ತಿಪ್ಪೇಸ್ವಾಮಿ, ಕೆ.ಟಿ.ಶ್ರೀಕಂಠೇಗೌಡ, ಮತ್ತಿತರರಿದ್ದರು.

### ಅ.12ಕ್ಕೆ ಮಹಿಳಾ ಸಮಾವೇಶ

ನಿಖಿಲ್ ಕುಮಾರಸ್ವಾಮಿ ರಾಜ್ಯ ವ್ಯಾಪಿ ನಡೆಸುತ್ತಿರುವ ಸದಸ್ಯ ಅಭಿಯಾನ ಮತ್ತು ಸಂಘಟನಾ ಪ್ರವಾಸ ಯಶಸ್ವಿಯಾಗಿದೆ. ಅಲ್ಲದೆ, ಬೆಂಗಳೂರು ನಗರದಲ್ಲಿ ಪಕ್ಷವನ್ನು ಕಟ್ಟುತ್ತೇವೆ. ಈ ನಿಟ್ಟಿನಲ್ಲಿ ಅ.12ರಂದು ಜೆಡಿಎಸ್ ಮಹಿಳಾ ಸಮಾವೇಶವನ್ನು ಆಯೋಜಿಸಲಾಗುವುದು. ಕನಿಷ್ಠ 50 ಸಾವಿರದಿಂದ 60ಸಾವಿರ ಮಹಿಳೆಯರು ಭಾಗವಹಿಸಲಿದ್ದಾರೆ.ಪಕ್ಷವನ್ನು ತಳಮಟ್ಟದಿಂದ ಸಂಘಟಿಸಲಾಗುವುದು. ಸಾಧ್ಯವಾದರೆ ಅರಮನೆ ಮೈದಾನದಲ್ಲೇ ಈ ಸಮಾವೇಶ ನಡೆಸಲಾಗುವುದು ಎಂದರು



### ಕರೂರ್ ಕಾಲ್ತುಳಿತ ಪ್ರಕರಣದ ತನಿಖೆಗೆ ಎಸ್‌ಐಟಿ ರಚನೆ

# ವಿಜಯ್‌ಗೆ ಮದ್ರಾಸ್ ಹೈಕೋರ್ಟ್ ತರಾಟೆ

**ಚೆನ್ನೈ:** ಕಳೆದ ಸೆಪ್ಟೆಂಬರ್ 27 ರಂದು ತಮಿಳುನಾಡಿನ ಕರೂರಿನ ವೇಲುಸಾಮಿಪುರಂನಲ್ಲಿ ಟಿವಿಕೆ ನಾಯಕ ಮತ್ತು ನಟ ವಿಜಯ್ ಅವರ ರೋಡ್ ಶೋ ವೇಳೆ ಸಂಭವಿಸಿದ ಕಾಲ್ತುಳಿತದಲ್ಲಿ 41 ಜನ ಸಾವನ್ನಪ್ಪಿದ ಪ್ರಕರಣದ ತನಿಖೆಗೆ ಮದ್ರಾಸ್ ಹೈಕೋರ್ಟ್ ಶುಕ್ರವಾರ ವಿಶೇಷ ತನಿಖಾ ತಂಡ(ಎಸ್‌ಐಟಿ) ರಚನೆ ಮಾಡಿದೆ.

ರಾಜ್ಯವನ್ನು ಮಾತ್ರವಲ್ಲದೆ ಇಡೀ ರಾಷ್ಟ್ರವನ್ನೇ ಬೆಚ್ಚಿಬೀಳಿಸಿದ ದುರಂತ ಘಟನೆಗೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ತಮಿಳುನಾಡು ಸರ್ಕಾರ ವಿಫಲವಾದ ಬಗ್ಗೆ ಮದ್ರಾಸ್ ಹೈಕೋರ್ಟ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ ಮತ್ತು ರಾಜ್ಯ ಸರ್ಕಾರ, ವಿಜಯ್ ಅವರ ಬಗ್ಗೆ ಮೃದು ಧೋರಣೆ ತೋರುತ್ತಿದೆ ಎಂದು ನ್ಯಾಯಾಲಯ ಆತಂಕ ವ್ಯಕ್ತಪಡಿಸಿದೆ.

ತಮಿಳುನಾಡು ಉತ್ತರ ವಲಯದ ಪೊಲೀಸ್ ಮಹಾನಿರ್ದೇಶಕಿ ಆಸ್ರಾ ಗಾರ್ಗ್ ಅವರನ್ನು ಎಸ್‌ಐಟಿಯ ಮುಖ್ಯಸ್ಥರನ್ನಾಗಿ ಹೈಕೋರ್ಟ್ ನೇಮಿಸಿದ್ದು, ತನಿಖೆಯನ್ನು ತಕ್ಷಣ ಪ್ರಾರಂಭಿಸುವಂತೆ ಸೂಚಿಸಿದೆ. ಚೆನ್ನೈನ ಪಿಎಚ್ ದಿನೇಶ್ ಅವರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎನ್. ಸೆಂಥಿಲ್‌ಕುಮಾರ್ ಅವರು ಎಸ್‌ಐಟಿ ರಚನೆ ಮಾಡಿ ಆದೇಶ ಹೊರಡಿಸಿದ್ದಾರೆ.

ದುರಂತಕ್ಕೆ ಕಾರಣರಾದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಮತ್ತು ಅಂತಹ ಕಾರ್ಯಕ್ರಮಗಳನ್ನು ನಿಯಂತ್ರಿಸಲು ಎಸ್‌ಒಪಿ ರೂಪಿಸುವವರೆಗೆ ರಾಜಕೀಯ ಪಕ್ಷಗಳ ರೋಡ್ ಶೋಗಳಿಗೆ ಅನುಮತಿ ನೀಡುವುದನ್ನು ತಡೆಯುವಂತೆ ಅರ್ಜಿದಾರರು ಕೋರಿದ್ದಾರೆ. ವಿಚಾರಣೆ ವೇಳೆ, "ನ್ಯಾಯಾಲಯವು ಕಣ್ಣು ಮುಚ್ಚಿಕೊಳ್ಳಲು ಅಥವಾ ಮೂಕ ಪ್ರೇಕ್ಷಕರಾಗಿ ಉಳಿಯಲು ಅಥವಾ ತನ್ನ ಜವಾಬ್ದಾರಿಯಿಂದ ನುಣುಚಿಕೊಳ್ಳಲು ಸಾಧ್ಯವಿಲ್ಲ" ಎಂದು ಹೈಕೋರ್ಟ್ ಹೇಳಿದೆ. ಕಾರ್ಯಕ್ರಮಕ್ಕೆ ವಿಧಿಸಿದ್ದ ಷರತ್ತುಗಳನ್ನು ಉಲ್ಲಂಘಿಸಿದ್ದಕ್ಕಾಗಿ ಟಿವಿಕೆಯನ್ನು ಹೈಕೋರ್ಟ್ "ಬಲವಾಗಿ ಖಂಡಿಸಿದೆ". "ಜನರು ಅಪಾಯದಲ್ಲಿದ್ದಾಗ ಅವರನ್ನು ರಕ್ಷಿಸುವುದು ಅವರ ಜವಾಬ್ದಾರಿ; ಮಕ್ಕಳು ಮತ್ತು ಮಹಿಳೆಯರು ಪ್ರಾಣ ಕಳೆದುಕೊಂಡರು. ಆದರೆ ಅವರು ಸ್ಥಳದಿಂದ ಓಡಿ ಹೋದರು ಮತ್ತು ಘಟನೆ ಬಗ್ಗೆ ಅವರಿಗೆ ಯಾವುದೇ ಪಶ್ಚಾತ್ತಾಪವಿಲ್ಲ" ಎಂದು ನ್ಯಾಯಾಧೀಶ ಸೆಂಥಿಲ್‌ಕುಮಾರ್ ಅವರು, ಟಿವಿಕೆ ಸಂಸ್ಥಾಪಕ, ನಟ ವಿಜಯ್ ಅವರನ್ನು ತರಾಟೆಗೆ ತೆಗೆದುಕೊಂಡರು.



ವಿಶೇಷವಾಗಿ ಮಹಿಳೆಯರು ಮತ್ತು ಮಕ್ಕಳು ಸಾವನ್ನಪ್ಪಿದಾಗ ಇಂತಹ ವರ್ತನೆ ಸರಿಯಲ್ಲ. ಇದು ನಟ, ರಾಜಕಾರಣಿ ವಿಜಯ್ ಅವರ ಮಾನಸಿಕ ಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಹೈಕೋರ್ಟ್ ಕಿಡಿ ಕಾರಿದೆ.

### 25 ಲಕ್ಷ ಬಿಹಾರ ಮಹಿಳಾ ರೋಝ್‌ಗಾರ್ ಯೋಜನೆ

# 25ಲಕ್ಷ ಮಹಿಳೆಯರ ಖಾತೆಗಳಿಗೆ ತಲಾ 10ಸಾವಿರ ರೂ.ವರ್ಗಾವಣೆ

**ಪಾಟ್ನಾ:** ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ರಾಜ್ಯದಲ್ಲಿ ಇತ್ತೀಚೆಗೆ ಆರಂಭಿಸಲಾದ ಮುಖ್ಯಮಂತ್ರಿ ಮಹಿಳಾ ರೋಝ್‌ಗಾರ್ ಯೋಜನೆಯಡಿ 25 ಲಕ್ಷ ಮಹಿಳೆಯರ ಬ್ಯಾಂಕ್ ಖಾತೆಗಳಿಗೆ ತಲಾ 10 ಸಾವಿರ ರೂ.ಗಳನ್ನು ಶುಕ್ರವಾರ ವರ್ಗಾಯಿಸಿದ್ದಾರೆ. ಒಟ್ಟಾರೆಯಾಗಿ 2, 500 ಕೋಟಿ ರೂ.ಗಳನ್ನು ನೇರ ಫಲಾನುಭವಿ ವರ್ಗಾವಣೆ (ಯುಬಿಟಿ) ಮೂಲಕ ವರ್ಗಾಯಿಸಲಾಗಿದೆ.

ರಾಜ್ಯದ ವಿವಿಧ ಭಾಗಗಳ ಫಲಾನುಭವಿ ಮಹಿಳೆಯರೊಂದಿಗೆ ನಿತೀಶ್ ಕುಮಾರ್ ಅವರು ವೀಡಿಯೋ ಕಾನ್ಫರೆನ್ಸ್ ಮೂಲಕ ಮಾತುಕತೆಯನ್ನು ಕೂಡ ನಡೆಸಿದರು. ಸ್ವ ಉದ್ಯೋಗ ಹಾಗೂ ಸಣ್ಣ ಉದ್ಯಮಗಳನ್ನು ನಡೆಸಲು ಆಸಕ್ತರಾಗಿರುವ ಮಹಿಳೆಯರಿಗೆ ಆರ್ಥಿಕ ನೆರವನ್ನು ಒದಗಿಸುವುದೇ ಈ ಯೋಜನೆಯ ಉದ್ದೇಶವಾಗಿದೆಯೆಂದು ಅವರು ಹೇಳಿದರು. ಯಶಸ್ವಿಯಾಗಿ ತಮ್ಮ ಉದ್ಯಮಗಳನ್ನು ನಡೆಸುವ ಮಹಿಳೆಯರಿಗೆ ಹೆಚ್ಚುವರಿ ಎರಡು ಲಕ್ಷ ರೂ.ಗಳನ್ನು ನೀಡಲಾಗುವುದೆಂದು ಅವರು ತಿಳಿಸಿದರು.

ಈಗಾಗಲೇ 1 ಕೋಟಿ ಫಲಾನುಭವಿಗಳು ಸಣ್ಣ ಉದ್ಯಮಗಳನ್ನು ಆರಂಭಿಸಲು 10 ಸಾವಿರ ಕೋಟಿ ರೂ.ಗಳನ್ನು ಪಡೆದುಕೊಂಡಿದ್ದಾರೆ. ತಮ್ಮ ಉದ್ಯಮಗಳನ್ನು ಯಶಸ್ವಿಯಾಗಿ ನಡೆಸುವವರು, ಹೆಚ್ಚುವರಿಯಾಗಿ ಎರಡು ಲಕ್ಷ ರೂ.ಗಳ ನೆರವನ್ನು ಪಡೆಯಲು ಅರ್ಹರಾಗಿದ್ದಾರೆಂದು ಅವರು ತಿಳಿಸಿದರು.



'ಬಿಹಾರದ ಅತಿ ದೊಡ್ಡ ಸ್ವಸಹಾಯ ಸಂಘದ ಉಪಕ್ರಮ 'ಜೀವಿಕಾ'ದ ಸದಸ್ಯರ ಸಂಖ್ಯೆ ಗ್ರಾಮಾಂತರ ಪ್ರದೇಶಗಳಲ್ಲಿ 40 ಲಕ್ಷವನ್ನು ದಾಟಿದೆ. ಗ್ರಾಮಾಂತರ ಪ್ರದೇಶಗಳಲ್ಲೂ ಇದು ಯಶಸ್ವಿಯಾಗಿದ್ದು, ಸ್ವಸಹಾಯ ಸಂಘಗಳ 3.85 ಲಕ್ಷ ಮಂದಿ ಜೀವಿಕಾ ದೀದಿಯರಾಗಿ ಕೆಲಸ ಮಾಡುತ್ತಿದ್ದಾರೆ. ಒಂದು ವೇಳೆ ತಾನು ಮತ್ತೆ ಅಧಿಕಾರಕ್ಕೆ ಮರಳಿದಲ್ಲಿ ಎನ್‌ಡಿಎ ಸರಕಾರವು ಈ ಯೋಜನೆಯನ್ನು ಇನ್ನಷ್ಟು ಬಲಪಡಿಸಲಿದೆ ಹಾಗೂ ವಿಸ್ತರಿಸಲಿದೆ" ಎಂದು ನಿತೀಶ್ ಕುಮಾರ್ ಹೇಳಿದರು.

# ಸಿನಿಮಾ ಟಿಕೆಟ್ ದರ ಮಿತಿ ತಡೆಯಾಜ್ಞೆ ವಿಸ್ತರಿಸಿದ ಹೈಕೋರ್ಟ್

**ಬೆಂಗಳೂರು:** ಸಿನಿಮಾ ಟಿಕೆಟ್ ದರ ಮಿತಿ ಮೇಲಿನ ತಡೆಯಾಜ್ಞೆಯನ್ನು ವಿಸ್ತರಣೆ ಮಾಡಿರುವ ಕರ್ನಾಟಕ ಹೈಕೋರ್ಟ್ ಮಾರಾಟ, ಮರುಪಾವತಿಗೆ ಮಹತ್ವದ ನಿರ್ದೇಶನಗಳನ್ನು ನೀಡಿದೆ. ಕರ್ನಾಟಕ ಹೈಕೋರ್ಟ್ ರಾಜ್ಯದ ಮಲ್ಟಿಪ್ಲೆಕ್ಸ್‌ಗಳಲ್ಲಿ ಸಿನಿಮಾ ಟಿಕೆಟ್ ಬೆಲೆಗಳ ಮೇಲೆ ವಿಧಿಸಲಾದ ರೂ. 200 ಮಿತಿಯ ಮೇಲಿನ ತಡೆಯಾಜ್ಞೆಯನ್ನು ವಿಸ್ತರಿಸಿದೆ.

ಕರ್ನಾಟಕ ಉಚ್ಚ ನ್ಯಾಯಾಲಯದ ಪ್ರಧಾನ ಪೀಠದಲ್ಲಿ ದಾಖಲಾಗಿದ್ದ, ರಿಟ್ ಅರ್ಜಿ ಕುರಿತ ಪ್ರಕರಣದಲ್ಲಿ ನ್ಯಾಯಾಲಯವು ಸಿನಿಮಾ ಟಿಕೆಟ್‌ಗಳ ಮೇಲೆ ವಿಧಿಸಿದ್ದ ರೂ.200/–ಗಳ ಮಿತಿಗೆ ನೀಡಿದ್ದ ತಡೆಯಾಜ್ಞೆಯನ್ನು ಶುಕ್ರವಾರ ಮುಂದುವರೆಸುವ ಜೊತೆಗೆ ಮಾರಾಟ, ಮರುಪಾವತಿಗೆ ಮಹತ್ವದ ನಿರ್ದೇಶನಗಳನ್ನು ನೀಡಿದೆ. ಮಾಹಿತಿ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ (ಡಿಐಪಿಆರ್) ಅಧಿಕೃತ ಹೇಳಿಕೆಯ ಪ್ರಕಾರ, ಕರ್ನಾಟಕ ರಾಜ್ಯ ಚಲನಚಿತ್ರ ವಾಣಿಜ್ಯ ಮಂಡಳಿಯು ಮಲ್ಟಿಪ್ಲೆಕ್ಸ್ ಅಸೋಸಿಯೇಷನ್‌ಆಫ್ ಇಂಡಿಯಾ ವಿರುದ್ಧ ಸಲ್ಲಿಸಿದ ರಿಟ್ ಮೇಲ್ಮನವಿಯ ಮೇರೆಗೆ ಪ್ರಧಾನ ಪೀಠವು ಸೆಪ್ಟೆಂಬರ್ 23 ರಂದು ನೀಡಲಾದ ತಡೆಯಾಜ್ಞೆಯನ್ನು ಎತ್ತಿಹಿಡಿದಿದೆ. ಅಂತೆಯೇ ಸೆಪ್ಟೆಂಬರ್ 30 ರ ತನ್ನ ಆದೇಶದಲ್ಲಿ ಟಿಕೆಟ್ ಮಾರಾಟ ಮತ್ತು ಮರುಪಾವತಿಗಳ ಕುರಿತು ವಿವರವಾದ ನಿರ್ದೇಶನಗಳನ್ನು ನೀಡಿದೆ. "ಪ್ರತಿವಾದಿ ಸಂಖ್ಯೆ 1 ರ ಅಡಿಯಲ್ಲಿರುವ ಎಲ್ಲಾ ಮಲ್ಟಿಪ್ಲೆಕ್ಸ್‌ಗಳು ಮಾರಾಟವಾದ ಪ್ರತಿ ಟಿಕೆಟ್‌ಗೆ ಸಮಗ್ರ ಮತ್ತು ಲೆಕ್ಕಪರಿಶೋಧಿಸಬಹುದಾದ ದಾಖಲೆಗಳನ್ನು ನಿರ್ವಹಿಸಲು ನಿರ್ದೇಶಿಸಲಾಗಿದೆ. ಈ ದಾಖಲೆಗಳು ಈ ಕೆಳಗಿನವುಗಳನ್ನು ಒಳಗೊಂಡಿರಬೇಕು ಮಾರಾಟದ ದಿನಾಂಕ ಮತ್ತು ಸಮಯ, ಬುಕಿಂಗ್ ವಿಧಾನ (ಆನ್‌ಲೈನ್ ಅಥವಾ ಭೌತಿಕ ಕೌಂಟರ್), ಪಾವತಿ ವಿಧಾನ (ಕ್ರೆಡಿಟ್/ಡೆಬಿಟ್ ಕಾರ್ಡ್, ಯುಪಿಐ, ನೆಟ್ ಬ್ಯಾಂಕಿಂಗ್ ಅಥವಾ ನಗದು), ಜಿಎಸ್‌ಟಿ ಸೇರಿದಂತೆ ಸಂಗ್ರಹಿಸಿದ ಮೊತ್ತ, ಎಲ್ಲಾ ನಗದು ವಹಿವಾಟುಗಳಿಗೆ ಡಿಜಿಟಲ್ ಆಗಿ ಪತ್ತೆಹಚ್ಚಬಹುದಾದ ರಶೀದಿಗಳು ಮತ್ತು ವ್ಯವಸ್ಥಾಪಕರು ಕೌಂಟರ್ ಸಹಿ ಮಾಡಿದ ದೈನಂದಿನ ನಗದು ರಿಜಿಸ್ಟರ್," ಎಂದು ತಿಳಿಸಲಾಗಿದೆ.



# ಹೊರ್ತಿ ಕೆರೆಗೆ ಚಾನಲ್ ನಿರ್ಮಾಣ

## ಕೆರೆಯಲ್ಲಿ 10 ಅಡಿ ನೀರಿನ ಮಟ್ಟ ಇಳಿಕೆ

**ವಿಜಯಪುರ:** ಜಿಲ್ಲೆಯ ಇಂಡಿ ತಾಲೂಕಿನ ಹೊರ್ತಿ ಕೆರೆಯ ಮುಂದಿರುವ ಕೃಷಿ ಜಮೀನುಗಳಿಗೆ ಮತ್ತು ಕೆರೆ ಏರಿಯ ಹಾನಿಯನ್ನು ತಡೆಯಲು ಮುನ್ನೆಚ್ಚರಿಕೆ ಕ್ರಮವಾಗಿ ಚಾನಲ್ ನಿರ್ಮಾಣ ಮಾಡಿ, ನೀರು ಹೊರಹಾಕಿರುವುದರಿಂದ ನೀರಿನ ಮಟ್ಟವು 10 ಅಡಿಗಳಷ್ಟು ಕಡಿಮೆಯಾಗಿದೆ. ಇನ್ನು ಮುಂದೆ ಯಾವುದೇ ಅಪಾಯ ಕಂಡುಬರುವುದಿಲ್ಲವೆಂದು ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ ಅವರು ತಿಳಿಸಿದ್ದಾರೆ.ವಿಜಯಪುರ ಜಿಲ್ಲೆ ಇಂಡಿ ತಾಲೂಕಿನ ಹೊರ್ತಿ ಕೆರೆಯನ್ನು 1972 ರಲ್ಲಿ ನಿರ್ಮಾಣ ಮಾಡಲಾಗಿದ್ದು.ಈ ಕೆರೆಯ ಸಾಮರ್ಥ್ಯವು 19.50 ಎಂ.ಸಿ.ಎಫ್.ಟಿ. ಇದ್ದು, ಕೆರೆಯ ವಿಸ್ತೀರ್ಣ 18 ಹೆಕ್ಟೆರ್ ಇರುತ್ತದೆ. ಏರಿಯ ಎತ್ತರ 11 ಮೀಟರ ಹಾಗೂ ಉದ್ದ 400 ಮೀ ಇದ್ದು, ಪ್ರಸ್ತುತ ಈ ಕೆರೆಯನ್ನು ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇಲಾಖೆಯ ವತಿಯಿಂದ ಕೆರೆ ತುಂಬವ ಯೋಜನೆಯಡಿ ಕೆರೆ ತುಂಬಿಸಲಾಗಿರುತ್ತದೆ.

ಹೆಚ್ಚಿನ ಪ್ರಮಾಣದಲ್ಲಿ ಮಳೆ ಆಗಿರುವುದರಿಂದ ಈ ಕೆರೆಯ ಕೋಡಿಯಿಂದ ಸುಮಾರು ಒಂದು ತಿಂಗಳಿಂದ ನೀರು ಹರಿದು ಹೋಗಿರುತ್ತದೆ. ಸೆಪ್ಟೆಂಬರ 28 ಸಂಜೆ 7 ಗಂಟೆಗೆ ಕೆರೆಯ ಏರಿಯಾ 30 ಮೀಟರ ಉದ್ದದಷ್ಟು ಹಾಗೂ 0.30 ಮೀಟರದಷ್ಟು ಕುಸಿದಿರುವುದು ಕಂಡು ಬಂದಿರುತ್ತದೆ. ತದನಂತರ ಕೋಡಿಯನ್ನು ಇಳಿಸಲು ಸೆಪ್ಟೆಂಬರ 29 ರಂದು ಜೆಸಿಬಿ ಮತ್ತು ಹಿಟಾಚಿ ಬ್ರೇಕರ್ ಮೂಲಕ ಹೆಚ್ಚಿನ ಪ್ರಮಾಣದಲ್ಲಿ ನೀರನ್ನು ಹೊರಹಾಕಲು ಸತತ ಮೂರು ದಿನಗಳ ಕಾಲ ಕೆರೆಯಲ್ಲಿ ಎರಡು ಅಡಿಯಷ್ಟು ನೀರನ್ನು ಇಳಿಸಲಾಯಿತು. ಆದಾಗ್ಯೂ ಕೂಡಾ ಪ್ರತಿದಿನ ನೀರಿನ ಒತ್ತಡದಿಂದಾಗಿ ಕ್ರಮೇಣವಾಗಿ ಏರಿಯು ಕುಸಿಯುವುದು ಕಂಡುಬಂದಿರುತ್ತದೆ.

ಇದರಿಂದಾಗಿ ಅಕ್ಟೋಬರ 2 ರಂದು ಹೆಚ್ಚಿನ ಪ್ರಮಾಣದ ಏರಿಯ ಕುಸಿತ ಕಂಡ ಕಾರಣ ಹೊರ್ತಿ ಕೆರೆಯ ಕೆಳಭಾಗದಲ್ಲಿ ಒಟ್ಟು ಮೂರು ಕೆರೆಗಳಿದ್ದು, ಅವುಗಳು ಕೂಡಾ ಈಗಾಗಲೇ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇಲಾಖೆಯ ವತಿಯಿಂದ ಭರ್ತಿ ಮಾಡಲಾಗಿರುತ್ತದೆ.



# ಗಾಂಧೀಜಿ 156ನೇ ಜಯಂತಿ

**ರಾಮದುರ್ಗ:** ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರು ಸ್ವಚ್ಛ ಭಾರತ ಪರಿಕಲ್ಪನೆಯನ್ನು ಸರಕಾರಗೊಳ್ಳಬೇಕಿದ್ದರೆ ತಾವು ವಾಸಿಸುವ ಪ್ರದೇಶ ನೈರ್ಮಲ್ಯದಿಂದ ಕೂಡಿರುವಂತೆ ನೋಡಿಕೊಳ್ಳಬೇಕಾದರೆ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಧಾರವಾಡ ಹಾಗೂ ಬೆಳಗಾವಿ ಹಿರಿಯ ಅಂಚೆ ಅಧೀಕ್ಷಕ ಎ.ಕೊರಕೊಪ್ಪ ನಾಯ್ಕ ಹೇಳಿದರು.

ಸ್ಥಳೀಯ ಪ್ರಧಾನ ಅಂಚೆ ಕಚೇರಿಯಲ್ಲಿ ಮಹಾತ್ಮ ಗಾಂಧೀ 156ನೇ ಜಯಂತಿ ಕಾರ್ಯಕ್ರಮದ ನಿಮಿತ್ಯ ಸಸಿ ನೆಡುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ಸುತ್ತಲಿನ ಪರಿಸರ ಸ್ವಚ್ಛವಾಗಿದ್ದರೆ ಸಾಲದು ಅಗತ್ಯಕ್ಕೆ ತಕ್ಕಂತೆ ಗಿಡಮರಗಳನ್ನು ಪೋಷಿಸಿ ಬೆಳೆಸಬೇಕೆಂದು ಹೇಳಿದರು.

ಸ್ಥಳಿಯ ಅಂಚೆ ನಿರೀಕ್ಷಕ ನಾಗರಾಜ ಮಳ್ಳಿ, ಪೋಸ್ಟ್ ಮಾಸ್ಟರ್ ಮಹಾಂತೇಶ ಹೊಸಮನಿ, ದಾವಲಸಾಬ ಅಣ್ಣಿಗೇರಿ, ಮಂಜುನಾಥ ಶಿಸಂಗಿ, ಅರುಣ ಮಾನಪ್ಪಗೋಳ, ರವಿ ಬಡಿಗೇರ, ಗಣೇಶ ತೆಳಗಡೆ, ಉದಯ ಕುರಡಣ್ಣವರ, ದರ್ಶನ ಚಿಟ್ನಿಸ್ ಉಪಸ್ಥಿತರಿದ್ದರು.

### ಚನ್ನಾಮ್ಮಾಜಿ ಸಮಾಧಿಯ ಸನ್ನಿಧಿಯಲ್ಲಿ ಯೋಧರಿಗೆ ಗೌರವ

# ಮಹಾನ್ ದಾರ್ಶನಿಕ ಬಸವಣ್ಣ ಗ್ರಂಥ ಲೋಕಾರ್ಪಣೆ

**ಬೈಲಹೊಂಗಲ:** ಕೇಂದ್ರ ಬಸವ ಸಮಿತಿ ಪ್ರಕಟಿಸಿರುವ ಮಹಾನ್ ದಾರ್ಶನಿಕ ಬಸವಣ್ಣ ಗ್ರಂಥ ಲೋಕಾರ್ಪಣೆ ಕಾರ್ಯಕ್ರಮವು ಪಟ್ಟಣದ ವೀರರಾಣಿ ಕಿತ್ತೂರು ಚನ್ನಮ್ಮ ಸಮಾಧಿ ಆವರಣದಲ್ಲಿ ಸಂಭ್ರಮ ಪ್ರತಿಷ್ಠಾನ ಮತ್ತು ತಾಲೂಕಾ ಕನ್ನಡ ಜಾನಪದ ಪರಿಷತ್ತಿನ ಸಹಯೋಗದೊಂದಿಗೆ ಕನ್ನಡ ಸಾಹಿತ್ಯ ಪರಿಷತ್ತಿ ನ ಮಾಜಿ ಜಿಲ್ಲಾಧ್ಯಕ್ಷ ಮೋಹನ ಬಸನಗೌಡ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಬುಧವಾರ ನಡೆಯಿತು.

ಗ್ರಂಥ ಲೋಕಾರ್ಪಣೆ ಗೊಳಿಸಿದ ಬೈಲಹೊಂಗಲದ ನಿವೃತ್ತ ಯೋಧ ಗುರುನಾಥ ಶಿದ್ದಲಿಂಗಪ್ಪ ಮುತವಾಡ ಅವರು ಮಾತನಾಡಿ, ಕೇಂದ್ರ ಬಸವ ಸಮಿತಿ ಪ್ರಕಟಿಸಿರುವ *ಮಹಾನ್ ದಾರ್ಶನಿಕ ಬಸವಣ್ಣ* ಗ್ರಂಥ ಬಸವಣ್ಣನವರ ಜನನ, ಕಪ್ಪಡಿ ಸಂಗಮದಲ್ಲಿ ಬಸವಣ್ಣನವರ ವಿದ್ಯಾಭ್ಯಾಸ, ಕಾಯಕ ಜೀವನ, ಕಲ್ಯಾಣದಲ್ಲಿ ಬಸವಣ್ಣನವರ ಸಾಧನೆಗಳು, ಬಸವ ಮಹಾಮನೆ, ಪ್ರಸಾದ– ದಾಸೋಹ, ಅನುಭವ ಮಂಟಪದ ಸ್ಥಾಪನೆ, ಬಸವ ಪೂರ್ವದ ಪರಿಸ್ಥಿತಿ ಹಾಗೂ ನಂತರದ ಸಾಮಾಜಿಕ, ಆರ್ಥಿಕ, ಸಾಹಿತ್ಯಕ,



ಶೈಕ್ಷಣಿಕ ಪರಿಸ್ಥಿತಿ ವಿವರದೊಡನೆ ಬಸವಣ್ಣನವರ ಘನ ವ್ಯಕ್ತಿತ್ವ ಹಾಗೂ ಜೀವನದ ಘಟನೆಗಳನ್ನು ಒಳಗೊಂಡು ಜನರಿಗೆ ಒಳ್ಳೆಯ ಸಂದೇಶಗಳನ್ನು ತಲುಪಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಧಾರವಾಡ ಜಿಲ್ಲಾ ಹಡಪದ ಅಪ್ಪಣ್ಣ ಸಮಾಜದ ಮುಖಂಡರಾದ, ಉದ್ಯಮಿ ಮೈಲಾರ ವೀರುಪಾಕ್ಷಪ್ಪ ಹಡಪದ ಅವರು ಮಾತನಾಡಿ, ಸಕಲ ಜೀವಾತ್ಮರಿಗೆ ಲೇಸನೆ ಬಯಸಿದ ಮಹಾನ್ ಮಾನವತಾವಾದಿ, ಕಲ್ಯಾಣಕ್ಕಾಗಿ ಹಗಲಿಗಳು ಶ್ರಮಿಸಿದ ವಿಶ್ವದ ಯುಗಪುರುಷ ಬಸವಣ್ಣನವರು ಮಹಾ ಮಾನವತಾವಾದಿ, ಸ್ವತಂತ್ರ ವಿಚಾರವಾದಿ, ಸಮತಾವಾದಿ, ದಲಿತೋದ್ಧಾರಕ, ಶ್ರೇಷ್ಠ ಅರ್ಥಶಾಸ್ತ್ರಜ್ಞ, ಸ್ತ್ರೀಕುಲೋದ್ಧಾರಕ, ಪ್ರಾಮಾಣಿಕ ಬದುಕಿನ ಪಾರದರ್ಶಕ ವ್ಯಕ್ತಿತ್ವದ ಮಹಾನ್ ದಾರ್ಶನಿಕರಾಗಿದ್ದರು. ಇಂದಿನ ವಿದ್ಯಾರ್ಥಿಗಳಲ್ಲಿ ಇಂತಹ ಕಲ್ಪನೆ ಬಿತ್ತುವುದು ನಮ್ಮ ಜವಾಬ್ದಾರಿಯಾಗಿದೆ ಎಂದರು. ಕನ್ನಡ ಜಾನಪದ ಪರಿಷತ್ತಿನ ಮಾಧ್ಯಮ ಕಾರ್ಯದರ್ಶಿ ಮಹಾಂತೇಶ ಮಲ್ಲಪ್ಪ ರಾಜಗೋಳಿ ಅವರು ಮಾತನಾಡಿ, ಬಸವ ಸಮಿತಿಯು ಈಗಾಗಲೇ 50 ಭಾಷೆಗಳಲ್ಲಿ ವಚನಗಳನ್ನು ಭಾಷಾಂತರಿಸಿದೆ. ಶಾಲೆಯಿಂದ ಶಾಲೆಗೆ, ಕಾಲೇಜಿನಿಂದ ಕಾಲೇಜಿಗೆ, ವಚನಕಾರರು ಮತ್ತು ವ್ಯಕ್ತಿತ್ವ ಕಾರ್ಯಕ್ರಮವನ್ನು ಹಮ್ಮಿಕೊಂಡು ಲಕ್ಷಾಂತರ ವಿದ್ಯಾರ್ಥಿಗಳಿಗೆ ವ್ಯಕ್ತಿತ್ವ ವಿಕಸನವಾಗಿದೆ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಜಿಲ್ಲಾಧ್ಯಕ್ಷ ಮೋಹನ ಬಸನಗೌಡ ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ಭಾರತೀಯ ಸೈನ್ಯದಲ್ಲಿ ಸುಮಾರು 24 ವರ್ಷಗಳ ಕಾಲ ಸೇವೆ ಸಲ್ಲಿಸಿ ಸೇವಾ ನಿವೃತ್ತರಾದ ಯೋಧ ಗುರುನಾಥ ಮುತವಾಡ ಭವಿಷ್ಯದಲ್ಲೂ ಅವರ ಜೀವನ –ಬದುಕು ಸದಾ ಕ್ರಿಯಾಶೀಲತೆಯಿಂದ ಕೂಡಿರಲಿ ಎಂದರು. ಶಂಕರಗೌಡ ಪಾಟೀಲ, ಪಾರ್ವತೆವ್ವಾ ಮುತವಾಡ, ಆಶಾ ಕಾರ್ಯಕರ್ತೆ ಲಕ್ಷ್ಮೀ ಹಡಪದ, ಕೆಂಚಮ್ಮ ಹಡಪದ, ಸಿದ್ಧಾರ್ಥ್ ಮುತವಾಡ, ಶ್ರೀ ಶೈಲ ಮುತವಾಡ, ಪ್ರಕಾಶ ಮುತವಾಡ, ಫಕ್ಕೀರಪ್ಪ ಹಡಪಡ, ದೀಪಕ ಮುತವಾಡ, ಮತ್ತಿತರರು ಉಪಸ್ಥಿತರಿದ್ದರು. ಜಯಶ್ರೀ ಹಡಪದ ಸ್ವಾಗತಿಸಿದರು, ಪುಷ್ಪಾ ಮುತವಾಡ ನಿರೂಪಿಸಿದರು. ಶರತ ಮುತವಾಡ ವಂದಿಸಿದರು.

## ಇಂದು ನಾಟಕ ಪ್ರದರ್ಶನ

**ಗೋಕಾಕ:** ಪ್ರಸಿದ್ಧ ರಂಗ ಕಲಾವಿದ ಜೇವರ್ಗಿ ರಾಜಣ್ಣ ಅವರು ರಚಿಸಿ ನಿರ್ದೇಶನ ಮಾಡಿರುವ "ಶೆರೆ ಅಂಗಡಿ ಸಂಗವ್ವ " ಎಂಬ ಹಾಸ್ಯಭರಿತ ಕೌಟುಂಬಿಕ ನಾಟಕವು ಗೋಕಾಕ ನಗರದಲ್ಲಿ ಶನಿವಾರ ದಿನಾಂಕ 04 ರಿಂದ ವೈಭವದಿಂದ ಪ್ರದರ್ಶನಗೊಳ್ಳಲಿದೆ.
ನಗರದ ಬಸ್ ನಿಲ್ದಾಣ ಹತ್ತಿರ ವಿಶ್ವಜ್ಯೋತಿ ಶ್ರೀ ಪಂಚಾಕ್ಷರ ನಾಟ್ಯ ಸಂಘ ಜೇವರ್ಗಿ ಇವರು ಹಾಕಿರುವ ರಂಗ ಮಂದಿರದಲ್ಲಿ ಪ್ರತಿ ದಿನ, 3 ಪ್ರದರ್ಶನ ನಡೆಯಲಿದ್ದು, ಕಾಮಿಡಿ ಕಿಲಾಡಿಗಳು ಖ್ಯಾತಿಯ ಸುಜಾತಾ ಗುಬ್ಬಿ ಹಾಗೂ ಗಿಜ್ಜಿಗಿಲಿಗಿಲಿ ಖ್ಯಾತಿಯ ನೀಲಾ ಜೇವರ್ಗಿ ಇವರು ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಖ್ಯಾತ ರಂಗ ಕಲಾವಿದ ಮಾರುತಿ ಶೆಟ್ಟಿ ಹಾಸ್ಯ ಪಾತ್ರ ನಿರ್ವಹಿಸುವರು.. ಕಲಾಭಿಮಾನಿಗಳು ಆಗಮಿಸಿ ಪ್ರೋತ್ಸಾಹ ನೀಡಿ ರಂಗ ಕಲೆಯನ್ನು ಉಳಿಸುವುದರೊಂದಿಗೆ ಬಡ ಕಲಾವಿದರ ಬದುಕಿಗೆ ಆಸರೆಯಾಗಬೇಕೆಂದು ನಾಟ್ಯ ಸಂಘದ ಮಾಲೀಕರಾದ ಜೇವರ್ಗಿ ರಾಜಣ್ಣ ಪ್ರಕಟಣೆ ಮೂಲಕ ವಿನಂತಿಸಿಕೊಂಡಿದ್ದಾರೆ.

# ಪ್ರತಿಯೊಬ್ಬರೂ ಆಹಾರ ಪದ್ಧತಿಯಲ್ಲಿ ಬದಲಾವಣೆ ತರಬೇಕು

**ಮುದ್ದೇಬಿಹಾಳ:** ಪ್ರತಿನಿತ್ಯ ಬಳಸುವ ಅಹಾರ ಪದಾರ್ಥಗಳಲ್ಲಿಯೇ ಸಾಕಷ್ಟು ಔಷಧೀಯ ಗುಣಗಳಿರುತ್ತವೆ. ಸುಲಭವಾಗಿ, ಕೈಗೆಟುವ ಬೆಲೆಯಲ್ಲಿ ಸಿಗುವಜನತೆಯ ಆರೋಗ್ಯಕರ ಪದಾರ್ಥಗಳನ್ನು ಬಿಟ್ಟು, ಕಲುಷಿತ ಪದಾರ್ಥಗಳನ್ನು ಸೇವಿಸಿ ಜನತೆ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ ಎಂದು ಇಲ್ಲಿನ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸಚಿನ್ ಕೌಶಿಕ್ ಅವರು ಬೇಸರ ವ್ಯಕ್ತಪಡಿಸಿದರು.

ಇಲ್ಲಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ, ತಾಲೂಕು ಕಾನೂನು ಸೇವಾ ಸಮತಿ, ನ್ಯಾಯವಾದಿಗಳ ಸಂಘ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಆರೋಗ್ಯ ಇಲಾಖೆ, ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಇತರೆ ಎಲ್ಲ ಸರ್ಕಾರಿ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಪೌಷ್ಟಿಕಾಂಶ ದಿನಾಚರಣೆ, ರಾಷ್ಟ್ರೀಯ ಪೋಷಣಾ ಮಾಸಾಚರಣೆ ಮತ್ತು ಅಂತರಾಷ್ಟ್ರೀಯ ಹೆಣ್ಣುಮಗುವಿನ ದಿನಾಚರಣೆ ಸಂಯುಕ್ತ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅನಾರೋಗ್ಯಕ್ಕೆ ಕಾರಣವಾಗುತ್ತಿರುವುದು ಆಹಾರದ ಕೊರತೆಯಲ್ಲ, ಅಜಾಗರೂಕ ಆಹಾರ ಪದ್ಧತಿ ಎಂಬುದನ್ನ ಪ್ರತಿಯೊಬ್ಬರೂ ಅರಿಯಬೇಕು.



ಗ್ರಾಮೀಣ ಪ್ರದೇಶಗಳಲ್ಲಿ ಸುಲಭವಾಗಿ ದೊರೆಯುವ ತಾಜಾ ಹಣ್ಣು, ತರಕಾರಿ, ಧಾನ್ಯ, ಕಾಳುಬೇಳೆಗಳನ್ನು ಉಪಯೋಗಿಸುವುದರಿಂದ ಶೇ.90 ರಷ್ಟು ಕಾಯಿಲೆಗಳನ್ನು ತಡೆಗಟ್ಟಬಹುದು. ಹಾಗಾಗಿ ಇಂದಿನಿಂದಲೇ ಪ್ರತಿಯೊಬ್ಬರೂ ತಮ್ಮ ಅಹಾರ ಪದ್ಧತಿಯಲ್ಲಿ ಬದಲಾವಣೆ ತರಬೇಕು ಎಂದು ತಿಳಿ ಹೇಳಿದರು. ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರೂ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರವೀಂದ್ರಕುಮಾರ ಕಟ್ಟಿಮನಿ ಅವರು ಮಾತನಾಡಿ, ಮನುಷ್ಯನ ಆರೋಗ್ಯಕ್ಕೆ ಅಹಾರ ಪದ್ಧತಿ ಅತೀ ಮುಖ್ಯ. ಪೌಷ್ಟಿಕ ಅಹಾರ ಸೇವಿಸುವದರಿಂದ ದೇಹದ ಬೆಳವಣಿಗೆ, ಬುದ್ಧಿವಂತಿಕೆ, ಮಾನಸಿಕ ಸಾಮರ್ಥ ಹೆಚ್ಚುತ್ತದೆ. ಅಪೌಷ್ಟಿಕತೆ ಬೆಳವಣಿಗೆಯನ್ನು ತಡೆಯುತ್ತದೆ. ಅಲ್ಲದೇ ರಕ್ತಹೀನತೆ, ದೌರ್ಬಲ್ಯ ಹಾಗೂ ಅನೇಕ ರೋಗಗಳಿಗೆ ಕಾರಣವಾಗುತ್ತದೆ ಹಾಗಾಗಿ ಪೌಷ್ಟಿಕ ಅಹಾರ ಸೇವಿಸಲು ಪ್ರತಿಯೊಬ್ಬರೂ ಮುಂದಾಗಬೇಕು ಎಂದರು.

ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳೂ ಹಾಗೂ ಸಿವಿಲ್ ನ್ಯಾಯಾಧೀಶರಾದ ರಾಮಮೂರ್ತಿ ಎನ್ ಅವರು ಮಾತನಾಡಿ, ಇವತ್ತಿನ ದಿನಾಚರಣೆ ಈ ದಿನಕ್ಕೆ ಮಾತ್ರ ಸೀಮಿತವಾಗಬಾರದು. ಪ್ರತಿದಿನವೂ ಆಚರಣೆಯಲ್ಲಿರಬೇಕು. ಭಾರತ ಸಂವಿಧಾನವು ಪ್ರತಿಯೊಬ್ಬ ನಾಗರಿಕನಿಗೂ ಆರೋಗ್ಯಕರ ಜೀವನ ನಡೆಸುವ ಹಕ್ಕು ನೀಡಿದೆ. ಸರ್ಕಾರ ಬಿಸಿಯೂಟ ಯೋಜನೆ, ಅಂಗನವಾಡಿ ಯೋಜನೆಗಳಂತಹ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಅಹಾರ ಸುರಕ್ಷತಾ ಅಧಿನಿಯಮ, ರಾಷ್ಟ್ರೀಯ ಅಹಾರ ಭದ್ರತಾ ಅಧಿನಿಯಮಗಳಂತಹ ಕಾನೂನುಗಳನ್ನೂ ಜಾರಿಗೆ ತರಲಾಗಿದೆ. ಸಮಾಜದ ಪ್ರತಿಯೊಬ್ಬ ಸದಸ್ಯನಿಗೂ ಪೌಷ್ಟಿಕ ಅಹಾರ ಒದಗಿಸುವದು ಕೇವಲ ಸರ್ಕಾರದ ಹೊಣೆಗಾರಿಕೆ ಮಾತ್ರವಲ್ಲ. ನಮ್ಮೆಲ್ಲರ ಜವಾಬ್ದಾರಿಯೂ ಹೌದು ಎಂದರು.

ನ್ಯಾಯವಾದಿಗಳ ಸಂಘದ ಅಧ್ಯಕ್ಷ ಶಶಿಕಾಂತ ಮಾಲಗತ್ತಿ, ಆರೋಗ್ಯ ಇಲಾಖೆಯ ಅನಸೂಯಾ ತೇರದಾಳ ಮಾತನಾಡಿದರು. ಸಿಡಿಪಿಓ ಕಚೇರಿಯ ಮೇಲ್ವಿಚಾರಕಿ ರಾಜಶ್ರೀ ಶೀಳಿನ ವಿಶೇಶ ಉಪನ್ಯಾಸ ನೀಡಿದರು. ಇದೇ ವೇಳೆ ಹೆಣ್ಣು ಮಕ್ಕಳ ಹುಟ್ಟುಹಬ್ಬ, ಅನ್ನ ಪ್ರಾಶನ, ಶ್ರೀಮಂತ ಕಾರ್ಯಕ್ರಮಗಳೂ ಕೂಡ ಜರುಗಿದವು. ಕಿರಿಯ ಸರ್ಕಾರಿ ಸಹಾಯಕ ಅಭಿಯೋಜಕ ಬಸವರಾಜ ಆಹೇರಿ, ನ್ಯಾ.ಸಂಘದ ಸಹ ಕಾರ್ಯದರ್ಶಿ ಬಿ.ಪಿ.ಮ್ಯಾಗೇರಿ, ನ್ಯಾಯವಾದಿ ಚೇತನ ಶಿವಶಿಂಪಿ, ತಾಲೂಕು ಸೇವಾ ಸಮಿತಿಯ ಆಡಳಿತ ಸಹಾಯಕ ಅರವಿಂದ ಕುಂಬಾರ, ದಲಾಯತ್ ಮಹಾಂತೇಶ ಹಚರೆಡ್ಡಿ ಸೇರಿದಂತೆ ಹಲವರು ಭಾಗಿಯಾಗಿದ್ದರು. ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಿವುಮೂರ್ತಿ ಕುಂಬಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಲಾವತಿ ಬಳುಂಡಗಿ ಕಾರ್ಯಕ್ರಮವನ್ನು ನಿರ್ವಹಿಸಿದರು.

## ಹಾನಗಲ್ಲ ಶ್ರೀಗಳ ಜಯಂತಿ ಕಾರ್ಯಕ್ರಮ

**ಬೆಳಗಾವಿ:** ಶಿವಬಸವನಗರ ಕಾರಂಜಿಮಠದ ಶಿವಾನುಭವ ಮಂಟಪದಲ್ಲಿ 292ನೇ ಶಿವಾನುಭವ ಹಾಗೂ ಹಾನಗಲ್ಲ ಶ್ರೀ ಕುಮಾರ ಶಿವಯೋಗಿಗಳ ಜಯಂತಿ ಕಾರ್ಯಕ್ರಮವು ಸೋಮವಾರ ದಿನಾಂಕ 6 ಅಕ್ಟೋಬರ್ 2025ರಂದು ಸಾಯಂಕಾಲ 6 ಗಂಟೆಗೆ ಜರುಗುವುದು.



ಕಾರ್ಯಕ್ರಮದ ಸಾನ್ನಿಧ್ಯವನ್ನು ಪೂಜ್ಯ ಶ್ರೀ ಮ.ನಿ.ಪ್ರ. ಗುರುಸಿದ್ಧ ಮಹಾಸ್ವಾಮಿಗಳು, ಸಮ್ಮುಖವನ್ನು ಡಾ. ಶಿವಯೋಗಿ ದೇವರು ವಹಿಸಲಿದ್ದು, ಹಾನಗಲ್ಲ ಶ್ರೀ ಕುಮಾರ ಶಿವಯೋಗಿಗಳು ಎಂಬ ವಿಷಯ ಕುರಿತು ಚಿಂಚಣಿ ಅಲ್ಲಮಪ್ರಭು ಸಿದ್ಧಸಂಸ್ಥಾನಮಠದ ನೂತನ ಉತ್ತರಾಧಿಕಾರಿಗಳಾದ ಪೂಜ್ಯ ಶ್ರೀ ಶಿವಪ್ರಸಾದ ದೇವರು ವಿಶೇಷ ಉಪನ್ಯಾಸ ನೀಡುವರು. ಶ್ರೀ ಮಿಥುನ ಅಂಕಲಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಇದೇ ಸಂದರ್ಭದಲ್ಲಿ ಸಂಗೀತದಲ್ಲಿ ಅಪರೂಪದ ಸಾಧನೆ ಮಾಡಿದ ಕು. ಪ್ರಣವ ವಿನಾಯಕ ಮತ್ತು ವೇದಪ್ರಕಾಶ ಅವರಿಗೆ ಶ್ರೀಮಠದಿಂದ ಗೌರವ ಸನ್ಮಾನ ಮತ್ತು ಸಂಗೀತ ಕಾರ್ಯಕ್ರಮ ಜರುಗುವುದು. ಶ್ರೀ ಕಾರಂಜಿಮಠದ ಕುಮಾರೇಶ್ವರ ಸಂಗೀತ ಪಾಠಶಾಲೆಯ ಮಕ್ಕಳಿಂದ ಪ್ರಾರ್ಥನೆ ಜರುಗುವುದು ಎಂದು ಶ್ರೀಮಠದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.




## ಪೌರಕಾರ್ಮಿಕರಿಗೆ ಪಿಪಿಇ ಕಿಟ್ ವಿತರಣೆ

**ಬಸವನಬಾಗೇವಾಡಿ:** ಪಟ್ಟಣದ ಪುರಸಭೆ ಕಾರ್ಯಾಲಯದಲ್ಲಿ ಗುರುವಾರ ಮಹಾತ್ಮಾ ಗಾಂಧೀಜಿ ಹಾಗೂ ಲಾಲಬಹಾದ್ದೂರ ಶಾಸ್ತ್ರೀಜಿಯವರ ಜನ್ಮ ದಿನಾಚರಣೆ ಹಾಗೂ ಸ್ವಚ್ಛತೆಯೇ ಸೇವೆ 2025 ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಉಪಾಧ್ಯಕ್ಷ ಅಶೋಕ ಹಾರಿವಾಳ ಅವರು ಮಹಾತ್ಮಾ ಗಾಂಧೀಜಿ ಹಾಗೂ ಲಾಲ್ ಬಹಾದ್ದೂರ ಶಾಸ್ತ್ರೀಜಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಮನ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಸ್ವಚ್ಛತೆಯೇ ಸೇವೆ 2025 ಕಾರ್ಯಕ್ರಮದಂಗವಾಗಿ ಪುರಸಭೆಯ ಪೌರಕಾರ್ಮಿಕರಿಗೆ ಪಿಪಿಇ ಕಿಟ್? ವಿತರಣೆ ಮಾಡಿದರು. ನಂತರ ಬಸವ ಭವನದಿಂದ ಬಸವಜನ್ಮ ಸ್ಮಾರಕದವರೆಗೆ ಸ್ವಚ್ಛತೆಯೇ ಸೇವೆ–2025 ಜಾಥಾ ಜರುಗಿತು. ಪೊಲೀಸ್ ಸ್ಟೇಶನ್ ಆವರಣದಲ್ಲಿರುವ ಮಹಾತ್ಮಾ ಗಾಂಧೀಜಿ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು.ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ನಜೀರ ಗಣಿ, ಅಬ್ದುಲರೆಹಮಾನ ಚೌಧರಿ, ಪುರಸಭೆ ಮುಖ್ಯಾಧಿಕಾರಿ ವಿದ್ಯಾಧರ ಕಲಾದಗಿ, ವ್ಯವಸ್ಥಾಪಕ ಸುರೇಶ ಬಾಗೇವಾಡಿ, ಆರೋಗ್ಯ ನಿರೀಕ್ಷಕರಾದ ವಿಜಯಕುಮಾರ ವಂದಾಲ, ಬಸವರಾಜ ಬೋಳಶೆಟ್ಟಿ, ಮಹೇಶ ಹಿರೇಮಠ, ಅಭಿಯಂತರ ಮಹಾದೇವ ಜಂಬಗಿ, ಗುರುರಾಜ ಮಾಗಾವಿ, ಶ್ರೀಧರ ಕಟ್ಟಿ, ಸಿದ್ರಾಮಗೌಡ ಪಾಟೀಲ, ಡೇ ನಲ್ಮದ ಸಿಬ್ಬಂದಿ ನೀಲಮ್ಮ ಬಳವಾಟ, ಮಹಿಳಾ ಸಂಘದ ಸದಸ್ಯರು, ಪುರಸಭೆ ಪೌರಕಾರ್ಮಿಕರು ಇದ್ದರು.

# ಕುಡಿಯುವ ನೀರಿಗಾಗಿ ಗ್ರಾ.ಪಂ.ಗೆ ಮುತ್ತಿಗೆ



**ಯರಗಟ್ಟಿ:** ಕುಡಿಯುವ ನೀರು ಪೂರೈಸಲು ಆಗ್ರಹಿಸಿ ಕುರುಬಗಟ್ಟಿ ಗ್ರಾಮಸ್ಥರು ಶುಕ್ರವಾರ ತಾಲೂಕಿನ ಮಾಡಮಗೇರಿ ಗ್ರಾಮ ಪಂಚಾಯಿತಿಗೆ ಮುತ್ತಿಗೆ ಹಾಕಿ ಪ್ರತಿಭಟಿಸಿದರು.

ಗ್ರಾಮದ ಮಹಿಳೆಯರು ಸೇರಿದಂತೆ ಅನೇಕರು ಸಮಸ್ಯೆ ಹೇಳಿಕೊಳ್ಳಲು ಪಂಚಾಯಿತಿ ಕಚೇರಿಗೆ ಹೋದರು. ಆದರೆ ಸಮಸ್ಯೆಗೆ ಸ್ಪಂದನ ಸಿಗದ ಕಾರಣ ಸ್ಥಳದಲ್ಲೇ ಕೆಲ ಹೊತ್ತು ಧರಣಿ ಕುಳಿತು ಸಂಬಂಧಿತ ಅಧಿಕಾರಿಗಳ ಹಾಗೂ ಪಂಚಾಯತ ಅಭಿವೃದ್ಧಿ ಅಧಿಕಾರಿ ಜಯಗೌಡ ಪಾಟೀಲ ವಿರುದ್ಧ ಆಕ್ರೋಶ ಹೊರ ಹಾಕಿದರು.

ಗ್ರಾಮದಲ್ಲಿ ಹಾಕಿದ ಪೈಪ್ ಲೈನ್ ಕಾಮಗಾರಿ ಕಳಪೆ ಯಾಗಿದೆ. ಹೀಗಾಗಿ ಟ್ಯಾಂಕಿಗೆ ನೀರು ಹೋಗುತ್ತಿಲ್ಲ. ಇದರಿಂದ ನಮ್ಮ ಗಲ್ಲಿಗೆ ಮೂರು ತಿಂಗಳುಗಳಿಂದ ನೀರು ಬರುತ್ತಿಲ್ಲ. ಪಂಚಾಯಿತಿಯವರಿಗೆ ಸಾಕಷ್ಟು ಸಲ ಹೇಳಿದರೂ ಪ್ರಯೋಜನವಾಗಿಲ್ಲ' ಎಂದು ಸುಭಾಷ ನಾಯ್ಕರ ದೂರಿದರು.

ವಿಷಯ ತಿಳಿದ ಗ್ರಾ. ಪಂ. ಅಧ್ಯಕ್ಷ ಲಕ್ಕಪ್ಪ ಸನ್ನಿಂಗವನ್ನರ ಸ್ಥಳಕ್ಕೆ ಆಗಮಿಸಿ ಪ್ರತಿಭಟನಾ ನಿರತರನ್ನು ಸಮಾಧಾನ ಮಾಡಿ ಆದಷ್ಟು ಬೇಗ ನೀರಿನ ವ್ಯವಸ್ಥೆ ಮಾಡಲು ಭರವಸೆ ನೀಡಿದರು.

ಈರಣ್ಣಾ ನಾವಿ, ರಮೇಶ ಗಸ್ತಿ, ಪುಂಡಲೀಕ ಪೂಜಾರ, ಸತ್ಯೆಪ್ಪ ಗಸ್ತಿ, ಪ್ರಕಾಶ ದೊಡ್ಡಲಿಂಗನ್ನವರ, ಮಾರುತಿ ರುದ್ರಾಪೂರ, ಮಾರುತಿ ಯರಝರ್ವಿ, ಫಕ್ಕೀರಪ್ಪ ಗಸ್ತಿ, ಬಸವರಾಜ ಅಡಿ, ಮಲ್ಲಿಕಸಾಬ ನದಾಫ, ಪ್ರಕಾಶ ಗಸ್ತಿ, ಪ್ರಕಾಶ ನಾವಿ, ಭೀಮಪ್ಪ ಪಾಟೀಲ, ಸುರೇಶ ಸಕ್ರಿ, ಶಿವಕ್ಕ ಹಟ್ಟಿ, ಲಕ್ಮವ್ವ ತಳವಾರ, ಮಹಾನಿಂಗವ್ವ ನಾವಿ, ಸಾವಕ್ಕ ಗಸ್ತಿ, ಸುವರ್ಣಾ ದೊಡ್ಡಲಿಂಗನ್ನವ ಸೇರಿದಂತೆ ಹಿಳೆಯರು ಹಾಜರಿದ್ದರು.

### ಬನಶಂಕರಿ ದೇವಸ್ಥಾನದ ಮಹಾದ್ವಾರ ಉದ್ಘಾಟನೆ, ಕಳಸಾರೋಹಣ ಕಾರ್ಯಕ್ರಮ

# ದೇವ ನಿರ್ಮಿತ ದೇವಾಲಯ ದೇಹವೇ ಆಗಿದೆ

**ಮಹಾಲಿಂಗಪುರ:** ದೇವಾಲಯಗಳಲ್ಲಿ ಎರಡು ಬಗೆ ಇದ್ದು ಗುಡಿ ಗುಂಡಾರಗಳು ಮಾನವ ನಿರ್ಮಿತ ದೇವಾಲಯವಾದರೆ, ಮಾನವ ದೇಹವೇ ದೇವ ನಿರ್ಮಿತ ದೇವಾಲಯ ಎಂದು ಶ್ರೀಶೈಲ ಜಗದ್ಗುರು ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಹೇಳಿದರು.

ಪಟ್ಟಣದ ಬನಶಂಕರಿ ದೇವಸ್ಥಾನದ ಮಹಾದ್ವಾರ ಉದ್ಘಾಟಿಸಿ, ಕಳಸಾರೋಹಣ ನೆರವೇರಿಸಿ ಮಾತನಾಡಿ, ದೇಹವೆಂಬ ದೇವಾಲಯಕ್ಕೆ ಕಿವಿಗಳೇ ಮಹಾದ್ವಾರವಿದ್ದಂತೆ. ಶ್ರವಣ ಮಾಡುವುದರಿಂದ ಜ್ಞಾನ ಪ್ರವೇಶವಾಗಿ ದೇವಸ್ಥಾನದ ಪರಿಚಯವಾಗುತ್ತದೆ ಎಂದರು. ಸಿದ್ಧಾರೂಢ ಬ್ರಹ್ಮವಿದ್ಯಾಶ್ರಮದ ಸಹಜಾನಂದ ಸ್ವಾಮೀಜಿ ಮಾತನಾಡಿ, ಪ್ರವಚನ ಆಲಿಸುವುದರಿಂದ ಧರ್ಮ ಸಂಸ್ಕಾರ ಬೆಳೆಯುತ್ತದೆ. ನಾವೆಲ್ಲರೂ ಧರ್ಮವನ್ನು ಎತ್ತಿ ಹಿಡಿಯಬೇಕು ಎಂದರು. ಲಕ್ಕಪ್ಪ ಚವಕೇರಿ ಮಾತನಾಡಿದರು. ಮಹಾದ್ವಾರ ನಿರ್ಮಿಸಿದ ಕಲಾವಿದರನ್ನು ಸನ್ಮಾನಿಸಲಾಯಿತು. ಬನಹಟ್ಟಿ ಹಿರೇಮಠದ ಶರಣಬಸವ ಶಿವಾಚಾರ್ಯರು, ಜಮಖಮಡಿ ಕಲ್ಯಾಣಮಠದ ಗೌರಿಶಂಕರ ಶಿವಾಚಾರ್ಯರು, ಸೊಲ್ಲಾಪುರ ಮೈಂದರಗಿಯ ಸಿದ್ದರಾಮ ವಿರಕ್ತಮಠದ ಮೃತ್ಯುಂಜಯ ಸ್ವಾಮೀಜಿ ರನ್ನಬೆಳಗಲಿ ಋಷಿಯೋಗಾಶ್ರಮದ ಸದಾಶಿವ ಗುರೂಜಿ, ಪುರಸಭೆ ಉಪಾಧ್ಯಕ್ಷೆ ಶೀಲಾ ಬಾವಿಕಟ್ಟಿ ಇದ್ದರು.



# ಗೃಹಲಕ್ಷ್ಮೀ ಹಣದಿಂದ ಬಾಗಿಲ ಮೇಲೆ ಸಿದ್ದರಾಮಯ್ಯ ಭಾವಚಿತ್ರ

**ಬಸವನಬಾಗೇವಾಡಿ:** ತಾಲೂಕಿನ ಇವಣಗಿ ಗ್ರಾಮದ ನರಸಲಗಿ ಗ್ರಾಮ ಪಂಚಾಯಿತಿ ಸದಸ್ಯ ಕಾಂತಪ್ಪ ಹಿರೇಕುರುಬರ ಅವರ ನೂತನ ಮನೆಯ ದ್ವಾರಬಾಗಿಲಿಗೆ ಸಿಎಂ ಸಿದ್ದರಾಮಯ್ಯನವರ ಭಾವಚಿತ್ರದ ಕೆತ್ತನೆ ಮಾಡಿರುವದು ಜನರ ಗಮನ ಸೆಳೆಯುತ್ತಿದೆ. ಗುರುವಾರ ಗೃಹಪ್ರವೇಶ ವಿವಿಧ ಧಾರ್ಮಿಕ ಕಾರ್ಯಕ್ರಮದೊಂದಿಗೆ ಜರುಗಿತು. ದ್ವಾರಬಾಗಿಲ ಮೇಲೆ ಸಿಎಂ ಸಿದ್ದರಾಮಯ್ಯನವರ ಭಾವಚಿತ್ರದ ಕೆತ್ತನೆಯೊಂದಿಗೆ ಸನ್ಮಾನ್ಯಶ್ರೀ ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹಲಕ್ಷ್ಮೀ ಯೋಜನೆಯೆಂದು ಬರೆಸಲಾಗಿದೆ. ಈ ಸಂಭ್ರಮಕ್ಕೆ ವಿವಿಧ ಕಾಂಗ್ರೆಸ್ ಮುಖಂಡರು, ಗ್ಯಾರಂಟಿ ಯೋಜನೆಯ ತಾಲೂಕಾಧ್ಯಕ್ಷರು, ಸದಸ್ಯರು ಇತರರು ಸಾಕ್ಷಿಯಾದರು.

ಕಾಂತಪ್ಪ ಹಿರೇಕುರುಬರ ಅವರ ಪತ್ನಿ ಯಲ್ಲಮ್ಮ ಹಿರೇಕುರುಬರ ಅವರು ತಮ್ಮ ಮನೆಯ ದ್ವಾರ ಬಾಗಿಲ ಮೇಲೆ ಸಿಎಂ ಸಿದ್ದರಾಮಯ್ಯನವರ ಭಾವಚಿತ್ರ ಕೆತ್ತನೆ ಮಾಡಲು ತಮಗೆ ಗೃಹಲಕ್ಷ್ಮೀ ಯೋಜನೆಯಿಂದ ಬಂದ ಹಣವನ್ನು ನೀಡುವ ಮೂಲಕ ಸಿಎಂ ಸಿದ್ದರಾಮಯ್ಯನವರ ಮೇಲಿರುವ ತಮ್ಮ ಅಭಿಮಾನವನ್ನು ಮೆರೆದಿದ್ದಾರೆ.

ಈ ಸಂದರ್ಭದಲ್ಲಿ ಯಲ್ಲಮ್ಮ ಹಿರೇಕುರುಬರ ಅವರನ್ನು ಮಾತನಾಡಿಸಿದಾಗ, ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯನವರು ಅನೇಕ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಜನರಿಗೆ ತುಂಬಾ ಅನುಕೂಲ ಮಾಡಿಕೊಟ್ಟಿದ್ದಾರೆ. ಮಹಿಳೆಯರಿಗೆ ಗೃಹಲಕ್ಷ್ಮೀ ಯೋಜನೆ, ಶಕ್ತಿ ಯೋಜನೆ ಸೇರಿದಂತೆ ಅನೇಕ ಯೋಜನೆಗಳನ್ನು ನೀಡುವ ಮೂಲಕ ಮಹಿಳೆಯರಿಗೆ ಅನುಕೂಲ ಮಾಡಿಕೊಟ್ಟಿದ್ದಾರೆ. ಇವರ ಮೇಲಿನ ಅಭಿಮಾನದಿಂದಾಗಿ ನನಗೆ ಗೃಹಲಕ್ಷ್ಮೀ ಯೋಜನೆಯಿಂದ ಬಂದ ಹಣದಲ್ಲಿ ನಮ್ಮ ಮನೆಯ ದ್ವಾರಬಾಗಿಲ ಮೇಲೆ ಅವರ ಭಾವಚಿತ್ರ ಕೆತ್ತನೆ ಮಾಡಲು ನನ್ನ ಪತಿಗೆ ರೂ.28 ಸಾವಿರ ಹಣವನ್ನು ನೀಡಿರುವುದಾಗಿ ಹೇಳಿದರು.



ತಾಲೂಕಿನ ಗ್ಯಾರಂಟಿ ಯೋಜನೆಯ ತಾಲೂಕಾಧ್ಯಕ್ಷ ಮಹಿಬೂಬ ನಾಯ್ಕೋಡಿ ಅವರು ಮಾತನಾಡಿ, ನಮ್ಮ ತಾಲೂಕಿನಲ್ಲಿ ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳು ಒಟ್ಟು 41,250 ಇದ್ದಾರೆ. ಇದರಲ್ಲಿ ಇವಣಗಿ ಗ್ರಾಮದ ಗೃಹಲಕ್ಷ್ಮೀ ಯೋಜನೆಯ ಫಲಾನುಭವಿ ಯಲ್ಲಮ್ಮ ಹಿರೇಕುರುಬರ ಅವರು ಈ ಹಣದಿಂದ ನಾಡು ಕಂಡ ಭಾಗ್ಯಗಳ ಸರದಾರ ಸಿಎಂ ಸಿದ್ದರಾಮಯ್ಯನವರ ಮೇಲಿನ ಅಭಿಮಾನದಿಂದ ಅವರ ಭಾವಚಿತ್ರದ ಕೆತ್ತನೆ ತಮ್ಮ ದ್ವಾರಬಾಗಿಲ ಮೇಲೆ ಮಾಡಿರುವದು ಸಂತಸ ತಂದಿದೆ. ಗೃಹಲಕ್ಷ್ಮೀ ಯೋಜನೆಯು ಅನೇಕ ಮಹಿಳೆಯರಿಗೆ ತುಂಬಾ ಅನುಕೂಲ ಕಲ್ಪಿಸಿದೆ. ಯೋಜನೆಯಿಂದಾಗಿ ಮಹಿಳೆಯರು ಸ್ವಾವಲಂಬಿ ಜೀವನ ನಡೆಸಲು ಪೂರಕವಾಗಿದೆ. ನಮ್ಮ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಪಂಚಗ್ಯಾರಂಟಿ ಯೋಜನೆಗಳು ನಾಡಿನ ಜನರಿಗೆ ತುಂಬಾ ಅನುಕೂಲವಾಗಿವೆ. ಜನರು ಇದರ ಸದುಪ ಯೋಗ ಪಡಿಸಿಕೊಂಡು ತಮ್ಮ ಜೀವನ ಉಜ್ವಲಗೊಳಿಸಿಕೊಳ್ಳುತ್ತಿದ್ದಾರೆ ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಹಾರಿವಾಳ ಮಾತನಾಡಿ, ಗೃಹಲಕ್ಷ್ಮೀ ಯೋಜನೆಯು ಮಹಿಳೆಯರ ಸಬಲೀಕರಣಕ್ಕೆ ಪೂರಕವಾಗಿದೆ. ಎಲ್ಲ ಮಹಿಳೆಯರಿಗೆ ಶಕ್ತಿ ಯೋಜನೆಯು ಉಪಯೋಗವಾಗುತ್ತಿದೆ. ಸರ್ಕಾರದ ಎಲ್ಲ ಗ್ಯಾರಂಟಿ ಯೋಜನೆಗಳು ಜನರ ಬದುಕಿಗೆ ಪೂರಕವಾಗಿವೆ ಎಂದರು.

ಈ ಸಂದರ್ಭದಲ್ಲಿ ತಾಲೂಕು ಗ್ಯಾರಂಟಿ ಯೋಜನೆಯ ಸದಸ್ಯರಾದ ಶಂಕರ ಚಕ್ರಮನಿ, ಕೃಷ್ಣಾ ಶಿಲ್ಪಿ, ಅಭಿಷೇಕ ಪಾಟೀಲ, ಬಂಡೆಪ್ಪ ನಾಟೀಕಾರ, ಗ್ರಾಮ ಪಂಚಾಯಿತಿ ಸದಸ್ಯ ಕಾಂತಪ್ಪ ಹಿರೇಕುರುಬರ, ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಮುಖಂಡರಾದ ಶೇಖರ ಗೊಳಸಂಗಿ, ಸಂಗಪ್ಪ ವಾಡೇದ, ಸಂಗಮೇಶ ಓಲೇಕಾರ, ಬಸಣ್ಣ ದೇಸಾಯಿ, ಚಂದ್ರಶೇಖರಗೌಡ ಪಾಟೀಲ, ಎಂ.ಜಿ.ಆದಿಗೊಂಡ, ಮುತ್ತು ಗುಂಡಳ್ಳಿ, ಸುಭಾಸ ಚಕ್ರಮನಿ, ಮಲ್ಲು ಶೇಬಗೊಂಡ, ಕಲ್ಲನಗೌಡ ಬಿರಾದಾರ, ಮಹಾಂತೇಶ ಹಾರಿವಾಳ, ಸಂಗಮೇಶ ಜಾಲಗೇರಿ, ಬಸವರಾಜ ಪೂಜಾರಿ, ಶಾಂತಯ್ಯ ಸರೂರ, ಯಲ್ಲಪ್ಪ ಪೂಜಾರಿ, ಹಣಮಂತ ಪೂಜಾರಿ, ಬಸವರಾಜ ಕಳ್ಳಿಗುಡ್ಡ, ರಾವುತ ಬಳೋಜಿ, ಅಮರಯ್ಯ ಹಿರೇಮಠ ಇತರರು ಇದ್ದರು.

# ಬೆಳಗಾವಿ ಜಿಲ್ಲೆಯ ರೈತ ಬಾಂಧವರ ಗಮನಕ್ಕೆ

**ಬೆಳಗಾವಿ:** 2025–26 ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯ ಅಡಿಯಲ್ಲಿ ರಾಜ್ಯದ ರೈತರಿಂದ ಸರ್ಕಾರವು ಭತ್ತ ಮತ್ತು ಬಿಳಿಜೋಳವನ್ನು ವಿವಿಧ ದರದಲ್ಲಿ ಖರೀದಿಸಲು ಆದೇಶಿಸಲಾಗಿರುತ್ತದೆ.

ಸಾಮಾನ್ಯ (ಕಾಮನ್) ಭತ್ತದ ಬೆಳೆಗೆ ಪ್ರತಿ ಕ್ವಿಂಟಾಲಗೆ 2369 ರೂ ದರದಲ್ಲಿ ಹಾಗೂ 'ಎ' ಗ್ರೇಡ್ ಭತ್ತದ ಪ್ರತಿ ಕ್ವಿಂಟಾಲ್ 2389 ರೂ ದರದಲ್ಲಿ ಮತ್ತು ಹೈಬ್ರಿಡ್ ಜೋಳದ ಪ್ರತಿ ಕ್ವಿಂಟಾಲಗೆ 3699 ರೂ ಹಾಗೂ ಮಾಲ್ದಂಡಿ ಜೋಳದ ಬೆಳೆಯ ಪ್ರತಿ ಕ್ವಿಂಟಾಲಗೆ 3749 ರೂ ದರಗಳನ್ನು ನಿಗಧಿ ಪಡಿಸಲಾಗಿದೆ. ರೈತ ರಿಂದ ಪ್ರತಿಎಕರೆಗೆ 25 ಕ್ವಿಂಟಲ್ ರಂತೆ ಗರಿಷ್ಠ 50 ಕ್ವಿಂಟಲ್‌ರವೆಗೆ ಭತ್ತ ಖರೀದಿಸಲಾಗುವುದು. ಆಸಕ್ತರು ಅಕ್ಟೋಬರ, 31, 2025 ರ ಒಳಗಾಗಿ ಕೃಷಿ ಇಲಾಖೆಯಿಂದ ಜಾರಿಗೊಳಿಸಿರುವ ಫ್ರುಟ್ಸ್ ಐಡಿಯೊಂದಿಗೆ ಖರೀದಿ ಕೇಂದ್ರಗಳಲ್ಲಿ ತಮ್ಮ ಹೆಸರನ್ನು ನೋಂದಯಿಸಿಕೊಳ್ಳಬಹುದಾಗಿದೆ. ಭತ್ತದ ಬೆಳೆ ಖರೀದಿಗಾಗಿ ನವೇಂಬರ, 01. 2025 ರಿಂದ ಪೇಬ್ರುವರಿ, 28, 2026 ರ ವರೆಗೆ ಕಾಲಾವಕಾಶ ಕಲ್ಪಿಸಲಾಗಿರುತ್ತದೆ.

ಬಿಳಿ ಜೋಳವನ್ನು ರೈತರಿಂದ ಪ್ರತಿ ಎಕರೆಗೆ 15 ಕ್ವಿಂಟಲ್‌ರಂತೆ ಗರಿಷ್ಠ 150 ಕ್ವಿಂಟಲ್ ಬಿಳಿ ಜೋಳ (ಹೈಬ್ರಿಡ್&ಮಾಲ್ದಂಡಿ) ಖರೀದಿಸಲಾಗುವುದು. ಆಸಕ್ತರು ಮಾರ್ಚ, 01, 2026 ರ ಒಳಗಾಗಿ ಕೃಷಿ ಇಲಾಖೆಯಿಂದ ಜಾರಿಗೊಳಿಸಿರುವ ಫ್ರುಟ್ಸ್ ಐಡಿಯೊಂದಿಗೆ ಖರೀದಿ ಕೇಂದ್ರಗಳಲ್ಲಿ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಬಹುದಾಗಿದೆ. ಜೋಳದ ಬೆಳೆಗಳ ಖರೀದಿಗಾಗಿ ಜನೇವರಿ, 01. 2026 ರಿಂದ ಮಾರ್ಚ, 31, 2026 ರ ವರೆಗೆ ಕಾಲಾವಕಾಶ ಕಲ್ಪಿಸಲಾಗಿರುತ್ತದೆ. ಜಿಲ್ಲಾ ರೈತರಿಂದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಭತ್ತ ಮತ್ತು ಬಿಳಿ ಜೋಳ ಖರೀದಿಸಲು ಕನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತವನ್ನು ಖರೀದಿ ಏಜನ್ಸಿಯಾಗಿ ನೇಮಿಸಲಾಗಿದೆ.

ಸಾಮಾನ್ಯ & ಗ್ರೇಡ್"ಎ" ಭತ್ತ ಬೆಳೆಗಳಿಗಾಗಿ ಬೆಳಗಾವಿ ತಾಲೂಕಿನ KFCSC¸¸ÀUÀlÄ ಮಳಿಗೆ, ಟಿ.ಎ.ಪಿ.ಸಿ.ಎಂ.ಎಸ್, ಗೋದಾಮು ಎ.ಪಿ.ಎಂ.ಸಿ. ಯಾರ್ಡ, ಖರೀದಿ ಕೇಂದ್ರದ ದೂರವಾಣಿ ಸಂಖ್ಯೆ 9739386787, ಹಾಗೂ ಖಾನಾಪುರ ತಾಲೂಕಿನ KFCSC ಸಗಟು ಮಳಿಗೆ, ಎ.ಪಿ.ಎಂ.ಸಿ. ಯಾರ್ಡ, ಖರೀದಿ ಕೇಂದ್ರದ ದೂರವಾಣಿ ಸಂಖ್ಯೆ 8884757311 ಗೆ ಸಂಪರ್ಕಿಸಬಹುದಾಗಿದೆ.

ಹೈಬ್ರಿಡ್ & ಮಾಲ್ದಂಡಿ ಜೋಳದ ಬೆಳೆಗಳಿಗಾಗಿ ರಾಮದುರ್ಗ ತಾಲೂಕಿನ KFCSC ಸಗಟು ಮಳಿಗೆ, ಎ.ಪಿ.ಎಂ.ಸಿ. ಯಾರ್ಡ ಖರೀದಿ ಕೇಂದ್ರದ ದೂರವಾಣಿ ಸಂಖ್ಯೆ 9844499672 ಹಾಗೂ ಬೈಲಹೊಂಗಲ ತಾಲೂಕಿನ KFCSC ಸಗಟು ಮಳಿಗೆ, ಎ.ಪಿ.ಎಂ.ಸಿ. ಯಾರ್ಡ ಖರೀದಿ ಕೇಂದ್ರದ ದೂರವಾಣಿ ಸಂಖ್ಯೆ 8884757311 ಮತ್ತು ಸವದತ್ತಿ ತಾಲೂಕಿನ KFCSC ಸಗಟು ಮಳಿಗೆ, ಎ.ಪಿ.ಎಂ.ಸಿ. ಯಾರ್ಡ ಖರೀದಿ ಕೇಂದ್ರದ ದೂರವಾಣಿ ಸಂಖ್ಯೆ 9844499672, ಅಥಣಿ ತಾಲೂಕಿನ KFCSC ಸಗಟು ಮಳಿಗೆ, ಎ.ಪಿ.ಎಂ.ಸಿ. ಯಾರ್ಡ ಖರೀದಿ ಕೇಂದ್ರದ ದೂರವಾಣಿ ಸಂಖ್ಯೆ 9739386787 ಗೆ ಸಂಪರ್ಕಿಸಬಹುದಾಗಿದೆ.

## ಅ.7ರಂದು ವಾಲ್ಮೀಕಿ ಜಯಂತಿ

**ವಿಜಯಪುರ:** ಜಿಲ್ಲಾಡಳಿತದ ವತಿಯಿಂದ ಅಕ್ಟೋಬರ್ 7ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಿಸಲಾಗುವುದು. ಅಂದು ಬೆಳಿಗ್ಗೆ 9.30ಗಂಟೆಗೆ ನಗರದ ಶ್ರೀ ದೇವಸ್ಥಾನದ ಆವರಣದಿಂದ ಶ್ರೀ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರದ ಮೆರವಣಿಗೆ ವಿವಿಧ ಕಲಾತಂಡಗಳೊಂದಿಗೆ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದ ಆವರಣವರೆಗೆ ಮೆರವಣಿಗೆ ನಡೆಯಲಿದೆ.

ಅಂದು ಬೆಳಿಗ್ಗೆ 10.30ಗಂಟೆಗೆ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಈ ಕಾರ್ಯಕ್ರಮದಲ್ಲಿ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿ, ಸಿಬ್ಬಂದಿ ಹಾಗೂ ಜಿಲ್ಲೆಯ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಸಾರ್ವಜನಿಕರು,ಎಲ್ಲಾ ಸಮುದಾಯದ ಗಣ್ಯರು ಭಾಗವಹಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಮಹೇಶ ಪೋತದಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಿತ್ತೂರು ಉತ್ಸವ ಪೂರ್ವಭಾವಿ ಸಭೆ

**ಬೆಳಗಾವಿ:** ಭಾರತ ಸ್ವಾತಂತ್ರ್ಯ ಹೋರಾಟದ ವೀರರಾಣಿ " ಕಿತ್ತೂರು ಚೆನ್ನಮ್ಮ" ನವರ ಗೌರವಾರ್ಥ ಪ್ರತಿ ವರ್ಷದಂತೆ, ಈ ವರ್ಷವೂ ಸಹ ಕಿತ್ತೂರಿನ ಕೋಟೆ ಆವರಣದಲ್ಲಿ ಬೆಳಗಾವಿ ಜಿಲ್ಲಾಡಳಿತದಿಂದ ಕಿತ್ತೂರು ಉತ್ಸವವನ್ನು ಆಚರಿಸುವ ವಿಷಯವನ್ನು ಚರ್ಚಿಸಲು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಲ. ಜಾರಕಿಹೊಳಿ ಇವರ ಅಧ್ಯಕ್ಷತೆಯಲ್ಲಿ " ಶ್ರೀ ವೀರಭದ್ರೇಶ್ವರ ಕಲ್ಯಾಣ ಮಂಟಪ" (ಅರಳಿಕಟ್ಟಿ ಸರ್ಕಲ್) ಕಿತ್ತೂರಿನಲ್ಲಿ ದಿನಾಂಕ: 06.10.2025 ರಂದು ಮಧ್ಯಾಹ್ನ 02.30 ಗಂಟೆಗೆ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ.

ಕಿತ್ತೂರು ಹಾಗೂ ಸುತ್ತಮುತ್ತಲಿನ ನಾಗರಿಕರು, ವಿವಿಧ ಸಂಘಟಣೆಗಳು ಹಾಗೂ ವಿವಿಧ ಸಂಸ್ಥೆಗಳ ಪದಾಧಿಕಾರಿಗಳು, ಜನ ಪ್ರತಿನಿಧಿಗಳು, ಮಹಿಳಾ ಸಂಘ ಸಂಸ್ಥೆಗಳು, ಸರ್ಕಾರದ ನಾಮನಿರ್ದೇಶಿತ ಸದಸ್ಯರುಗಳು, ಪಟ್ಟಣ ಪಂಚಾಯತಿ, ಗ್ರಾಮ ಪಂಚಾಯತಿಗಳ ಜನಪ್ರತಿನಿಧಿಗಳು ಎಲ್ಲರೂ ಸಭೆಯಲ್ಲಿ ಭಾಗಿಯಾಗಿ ಉತ್ಸವದ ರೂಪರೇಷಗಳ ಕುರಿತು ತಮ್ಮ ಸಲಹೆ ಸೂಚನೆಗಳನ್ನು ನಿಡುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಕುಕನೂರು ಮಾರುಕಟ್ಟೆಯಲ್ಲಿ ವಾರದಲ್ಲಿ 2 ದಿನ ಇ-ಟೆಂಡರ್ ಪ್ರಕ್ರಿಯೆ

**ಕೊಪ್ಪಳ:** ಯಲುಬುರ್ಗಾ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕುಕನೂರು ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಸರ್ಕಾರಿ ರಜೆ ದಿನಗಳನ್ನು ಹೊರತುಪಡಿಸಿ ಸೋಮವಾರ ಮತ್ತು ಗುರುವಾರ (ವಾರದಲ್ಲಿ 2 ದಿನ ಮಾತ್ರ) ಅಧಿಸೂಚಿತ ಕೃಷಿ ಉತ್ಪನ್ನಗಳಿಗೆ ಇ-ಟೆಂಡರ್ ನಡೆಸಲಾಗುವುದು.

ಬೆಳಗ್ಗೆ10.30 ರಿಂದ 12.30 ಗಂಟೆವರೆಗೆ ಲಾಟ್ ಎಂಟ್ರಿ ಹಾಗೂ ಮಧ್ಯಾಹ್ನ 12.30 ರಿಂದ 1.30 ಗಂಟೆವರೆಗೆ ಟೆಂಡರ್ ಹಾಕಲಾಗುವುದು. 1.30 ಗಂಟೆ ನಂತರ ಟೆಂಡರ್ ತೆರೆಯುವುದು ಅಥವಾ ಘೋಷಿಸಲಾಗುವುದು. ಅಧಿಸೂಚಿತ ಕೃಷಿ ಉತ್ಪನ್ನಗಳಿಗೆ ಕೂಡಲೇ ಇ-ಟೆಂಡರ್ ಪ್ರಾರಂಭ ಮಾಡುವಂತೆ ತೀರ್ಮಾನಿಸಲಾಗಿರುತ್ತದೆ.

ಆದ್ದರಿಂದ ರೈತ ಬಾಂಧವರು ತಮ್ಮ ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ಕುಕನೂರು ಮುಖ್ಯ ಮಾರುಕಟ್ಟೆ ಪ್ರಾಂಗಣಕ್ಕೆ ತಂದು, ಮಾರಾಟ ಮಾಡುವ ಮೂಲಕ ಸ್ಪರ್ಧಾತ್ಮಕ ಬೆಲೆಯನ್ನು ಪಡೆಯಲು ಹಾಗೂ ಸಮಿತಿಯಿಂದ ಲೈಸೆನ್ಸ್ ಹೊಂದಿದ ದಲಾಲರು ಮತ್ತು ಕೃಷಿ ಮಾರಾಟ ಇಲಾಖೆಯಿಂದ ಲೈಸೆನ್ಸ್ ಹೊಂದಿದ ಖರೀದಿದಾರರು ಈ ಟೆಂಡರ್‌ನಲ್ಲಿ ಭಾಗವಹಿಸಲು, ಸಕಾರಾತ್ಮಕವಾಗಿ ಸ್ಪಂದಿಸಿ ಯಶಸ್ವಿಗೊಳಿಸುವಂತೆ ಯಲಬುರ್ಗಾ ಎಪಿಎಂಸಿಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಗಾಂಧೀಜಿಯವರ ಧೈರ್ಯ ಎಲ್ಲರಿಗೂ ಮಾದರಿ

**ಕಾರವಾರ:** ಮಹಾತ್ಮ ಗಾಂಧೀಜಿಯವರು ಬ್ರಿಟೀಷರ ವಿರುದ್ದ ಧೈರ್ಯವಾಗಿ ಎದುರು ನಿಂತು ಇಡೀ ಭಾರತವನ್ನು ಒಂದುಗೂಡಿಸಿ ಸ್ವಾತಂತ್ರ್ಯ ಹೋರಾಟದಲ್ಲಿ ಮುನ್ನಡೆಸಿದ್ದರು, ಅನ್ಯಾಯದ ವಿರುದ್ಧ ಏಕಾಂಗಿಯಾಗಿ ದನಿಯೆತ್ತುವ ಅವರ ಧೈರ್ಯದ ಗುಣ ಪ್ರತಿಯೊಬ್ಬರಿಗೂ ಮಾದರಿಯಾಗಬೇಕು ಎಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಹೇಳಿದರು.

ಅವರು ಗುರುವಾರ ನಗರಸಭೆಯ ಮಹಾತ್ಮ ಗಾಂಧೀ ಉದ್ಯಾನವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ನಗರಸಭೆ ಕಾರವಾರ ವತಿಯಿಂದ ಆಯೋಜಿಸಿದ್ದ ಮಹಾತ್ಮ ಗಾಂಧೀಜಿ ಜಯಂತಿ ಹಾಗೂ ಮಾಜಿ ಪ್ರಧಾನ ಮಂತ್ರಿ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಕಾರ್ಯಕ್ರಮದಲ್ಲಿ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಮಹಾತ್ಮ ಗಾಂಧೀಜಿಯವರಲ್ಲಿದ್ದ ಪ್ರಾಮಾಣಿಕತೆಯ ಗುಣವನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅಹಿಂಸೆಯ ಮೂಲಕ ಏನು ಬೇಕಾದರು ಸಾಧಿಸಬಹುದು ಎಂದು ಇಡೀ ಜಗತ್ತಿಗೆ ತಿಳಿಸಿದ ಮಹಾನ್ ಚೇತನ ಗಾಂಧೀಜಿ, ಅವರ ಅಹಿಂಸೆಯ ತತ್ವದ ಪಾಲನೆ ಇಂದು ಇಡೀ ವಿಶ್ವಕ್ಕೆ ಅಗತ್ಯವಿದೆ, ಸರಳ ವ್ಯಕ್ತಿತ್ವ ಹೊಂದಿದ್ದ ಗಾಂಧೀಜಿ ಅವರ ಬಗ್ಗೆ ಪೋಷಕರು ತಮ್ಮ ಮಕ್ಕಳಿಗೆ ತಿಳಿಸಬೇಕು, ಸಮಾಜದಲ್ಲಿ ಬದಲಾವಣೆ ಮಾಡಲು ದೊಡ್ಡ ಕೆಲಸಗಳನ್ನು ಮಾತ್ರ ಮಾಡಬೇಕಾದ ಅಗತ್ಯವಿಲ್ಲ ಬದಲಾಗಿ ಸಮಾಜಮುಖಿಯಾದ ಸಣ್ಣ ಸಣ್ಣ ಕಾರ್ಯಗಳ ಮೂಲಕ ಕೂಡ ಉತ್ತಮ ಬದಲಾವಣೆ ತರಲು ಸಾಧ್ಯ ಎಂಬುದನ್ನು ಗಾಂಧೀಜಿ ತಿಳಿಸಿದ್ದು,



ಅವರ ತತ್ವ ಮತ್ತು ಸಂದೇಶಗಳನ್ನು ನಾವೆಲ್ಲರೂ ಪಾಲಿಸಬೇಕು ಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ. ದೀಲಿಷ್ ಶಶಿ ಮಾತನಾಡಿ, ಗಾಂಧೀಜಿ ಅವರು ನನ್ನ ಜೀವನವೇ ನನ್ನ ಸಂದೇಶ ಎಂಬುದಕ್ಕೆ ಪೂರಕವಾಗಿ ಅವರ ತತ್ವಗಳನ್ನು ಜೀವನ ಪರ್ಯಾಂತ ತಮ್ಮ ಜೀವನದಲ್ಲಿ ಅಳವಡಿಸಿಕೊಂಡ ಸರಳ ವ್ಯಕ್ತಿತ್ವದ ನಾಯಕ. ದೇಶದ ಪ್ರತಿ ಹಳ್ಳಿ ಹಳ್ಳಿಗೂ ಭೇಟಿ ನೀಡಿ ಎಲ್ಲಾ ಜಾತಿ ಧರ್ಮದವರನ್ನು ಒಗ್ಗೂಡಿಸಿ ಬ್ರಿಟಿಷರಿಂದ ಸ್ವಾತಂತ್ರ್ಯವನ್ನು ತಂದುಕೊಟ್ಟರು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಲಿಪ್ ಎಂ. ಎನ್ ಮಾತನಾಡಿ, ಗಾಂಧೀಜಿ ಅವರು ರಾಜಕೀಯ, ಧಾರ್ಮಿಕ ವಿಷಯಗಳು ಹಾಗೂ ಪರಿಸರದ ಮೇಲೆ ಅಪಾರ ಪ್ರೀತಿ ಹೊಂದಿದ್ದರು. ಅವರ ಅಚಾರ ವಿಚಾರಗಳು ಎಲ್ಲ ಕಾಲ ಘಟ್ಟಗಳಿಗೂ ಪ್ರಸ್ತುತ ಎಂದರು.

ನಗರಸಭೆ ಅಧ್ಯಕ್ಷ ರವಿರಾಜ ಅಕೋಲೇಕರ ಮಾತನಾಡಿ, ಗಾಂಧೀಜಿ ಅವರ ಬಗ್ಗೆ ತಿಳಿಯಬೇಕಾದ ಸಾಕಷ್ಟು ವಿಷಯಗಳಿದ್ದು, ಅವರು ಪ್ರತಿಪಾದಿಸಿದ ಜೀವನ ಮೌಲ್ಯಗಳು, ಸತ್ಯ, ಅಹಿಂಸೆ ಹಾಗೂ ಆತ್ಮಬಲದ ಕುರಿತು ಪ್ರತಿಯೊಬ್ಬರೂ ತಿಳಿಯಬೇಕಿರುವುದು ಬಹಳಷ್ಟು ಇದೆ. ಸತ್ಯ, ಅಹಿಂಸೆ ಮತ್ತು ಶಾಂತಿ ಮಾರ್ಗದ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹಾನ್ ನಾಯಕ ಗಾಂಧೀಜಿ ಅವರು ಎಂದರು

ಗಾಂಧೀಜಿ ಅವರ ಜೀವನ ಚರಿತ್ರೆ ಕುರಿತು ವಿಶೇಷ ಉಪನ್ಯಾಸ ನೀಡಿದ ಅಂಕೋಲಾದ ನಿವೃತ್ತ ಪ್ರಾಚಾರ್ಯರು ಹಾಗೂ ಸಾಹಿತಿಗಳಾದ ಮೋಹನ್ ಹಬ್ಬು , ಗಾಂಧೀಜಿ ಅವರು ಏರಿದ ಎತ್ತರಕ್ಕೆ ಯಾವ ನಾಯಕರೂ ಇದುವರೆಗೆ ಏರಿಲ್ಲ, ಏರಲೂ ಆಗುವುದಿಲ್ಲ, ನನ್ನ ಜೀವನವೇ ನನ್ನ ಸಂದೇಶ ಎನ್ನುವ ಅರ್ಹತೆ ಇದ್ದ ಏಕೈಕ ವ್ಯಕ್ತಿ ಅವರು. ಪ್ರಪಂಚದ 175 ದೇಶಗಳು ಅಂಚೆ ಚೀಟಿ ಹೊರ ತಂದ, ಮರಣೋತ್ತರ ಗೌರವವಾಗಿ ವಿಶ್ವ ಸಂಸ್ಥೆ ತನ್ನೆಲ್ಲಾ ದೇಶಗಳ ಧ್ವಜಗಳನ್ನು ಅರ್ಧಕ್ಕಿಳಿಸಿದ ಜಗತ್ತಿನ ಏಕೈಕ ನಾಯಕರಾಗಿದ್ದಾರೆ. ಅಹಿಂಸಾ ತತ್ವವನ್ನು ಪಾಲಿಸಿದ ಗಾಂಧೀಜಿ ಯಾರನ್ನೂ ದ್ವೇಷಿಸಲಿಲ್ಲ, ಸ್ವಾವಲಂಬನೆಗೆ ಒತ್ತು ನೀಡಿದ್ದ ಅವರು ಒಬ್ಬ ಸಂತರಾಗಿದ್ದರು, ಆದ್ಯಾತ್ಮಕ ಸಾಧಕರಾಗಿದ್ದರು ಎಂದರು.

ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ, ತರಬೇತಿ ನಿರತ ಐಎಎಸ್ ಅಧಿಕಾರಿ, ಝೂಪೀಶನ್ ಹಕ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಜಹೀರ್ ಅಬ್ಬಾಸ್, ನಗರಸಭೆಯ ಪೌರಾಯುಕ್ತ ಜಗದೀಶ ಹುಲಗೆಜ್ಜಿ, ಜಿಲ್ಲಾ ವಾರ್ತಾಧಿಕಾರಿ ಬಿ.ಶಿವಕುಮಾರ್, ನಗರಸಭೆಯ ಸ್ಥಾಯಿ ಸಮಿತಿ ಅಧ್ಯಕ್ಷೆ ಮಾಲಾ ಹುಲಸ್ವಾರ ಹಾಗೂ ನಗರಸಭೆ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು ಸಿಬ್ಬಂದಿಗಳು ಮತ್ತಿತರರು ಇದ್ದರು.

### ಬಹುಮಾನ ವಿತರಣೆ

ಇದೇ ಸಂದರ್ಭದಲ್ಲಿ ಗಾಂಧಿ ಜಯಂತಿ ಪ್ರಯುಕ್ತ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಏರ್ಪಡಿಸಿಲಾದ ಜಿಲ್ಲಾ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ಪ್ರೌಢ ಶಾಲಾ ವಿಭಾಗದಲ್ಲಿ ದಿಶಾ. ಜೆ, ದೀಕ್ಷಾ ಮಂಜುನಾಥ ನಾಯ್ಕ, ಅಲೇಖಾ ಎಂ ನಾಯ್ಕ, ಪದವಿ ಪೂರ್ವ ಶಿಕ್ಷಣ ವಿಭಾಗದಲ್ಲಿ ಸೃಷ್ಟಿ ಆರ್ ಪಟಗಾರ, ನಯನಾ ಕೃಷ್ಣಾ ಗೌಡ, ಸಂಜನಾ ಭಾಸ್ಕರ ನಾಯ್ಕ, ಪದವಿ ಮತ್ತು ಸ್ನಾತಕೋತ್ತರ ವಿಭಾಗದಲ್ಲಿ ಕಿರಣ ಧುಮಾಲಿ, ಅಂಕಿತಾ ಡಿ ದಳವಿ, ರಕ್ಷಿತಾ ಆರ್ ಗೌಡ, ವಿದ್ಯಾರ್ಥಿಗಳಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು.

# ಪ್ರಾಧಿಕಾರ ಅಧ್ಯಕ್ಷರಾಗಿ ಹುಲಜತ್ತಿ ಅಧಿಕಾರ ಸ್ವೀಕಾರ

**ರಬಕವಿ-ಬನಹಟ್ಟಿ:** ಅವಧಿಗೂ ಮುಂಚೆ ಬುಧವಾರ ರಬಕವಿ-ಬನಹಟ್ಟಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಸ್ಥಾನಕ್ಕೆ ಬನಹಟ್ಟಿಯ ದಾನಪ್ಪ ಹುಲಜತ್ತಿ ಅಧಿಕಾರ ಸ್ವೀಕರಿಸುವ ಮೂಲಕ ಗಮನ ಸೆಳೆಯುವಲ್ಲಿ ಕಾರಣವಾಯಿತು.

ಬುಧವಾತ ಪ್ರಾಧಿಕಾರ ಕಚೇರಿಯಲ್ಲಿ ಅಧ್ಯಕ್ಷ ಸ್ಥಾನ ಸ್ವೀಕರಿಸಿ ಮಾತನಾಡಿದ ಅವರು, ಪ್ರಾಮಾಣಿಕತೆಯಿಂದ ಜಾತಿ, ಪಕ್ಷ ಬೇಧವಿಲ್ಲದೆ ಸಾಮಾನ್ಯ ಜನತೆಗೂ ಸರ್ಕಾರದ ಸೌಲಭ್ಯ ಒದಗಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುವದಾಗಿ ತಿಳಿಸಿದರು. ಈ ಹುದ್ದೆ ನನಗೆ ಬಯಸದೇ ಬಂದ ಭಾಗ್ಯವಾಗಿದ್ದು, ವಿಧಾನ ಪರಿಷತ್ ಸದಸ್ಯೆ ಉಮಾಶ್ರೀ ಹಾಗು ಕಾಂಗ್ರೆಸ್ ಮುಖಂಡ ಸಿದ್ದು ಕೊಣ್ಣೂರ ನೇತೃತ್ವದಲ್ಲಿ ಇಡೀ ಬನಹಟ್ಟಿಯ ಜನತೆಯ ಆಶೀರ್ವಾದದಿಂದ ಅಧ್ಯಕ್ಷ ಸ್ಥಾನ ಅಲಂಕರಿಸುವಲ್ಲಿ ಯಶಸ್ವಿಯಾಗಿರುವದು ಹೆಮ್ಮೆಯೆಂದರು.

ವಿಧಾನಪರಿಷತ್ ಸದಸ್ಯೆ ಉಮಾಶ್ರೀ, ಕಾಂಗ್ರೆಸ್ ಮುಖಂಡ ಸಿದ್ದು ಕೊಣ್ಣೂರ, ಡಾ. ಎ.ಆರ್. ಬೆಳಗಲಿ, ನಾಮನಿರ್ದೇಶಿತ ಸದಸ್ಯರಾದ ಶಂಕರ ಚಿತ್ತರಗಿ, ಹಾರೂನ ಬೇವೂರ, ಪಿಂಟು ಕುಂಬಾರ, ಲಕ್ಷ್ಮಣ ದೇಸಾರಟ್ಟಿ, ರಾಜು ಭದ್ರನ್ನವರ, ಭೀಮಶಿ ಮಗದುಮ್, ಸಿದ್ಧನಗೌಡ ಪಾಟೀಲ, ಮಲ್ಲು ಬಾಣಕಾರ, ರಾಜು ಅಂಬಲಿ, ಬಸು ಗುಡ್ಡೋಡಗಿ, ನೀಲಕಂಠ ಮುತ್ತೂರ, ಚಿದಾ ಗಾಳಿ, ದುಂಡಪ್ಪ ಕರಿಗಾರ, ರಾಹುಲ್ ಕಲಾಲ, ರಾಜು ನಂದೆಪ್ಪನವರ, ಸುಕುಮಾರ ಪಾಟೀಲ, ಈಶ್ವರ ಚಮಕೇರಿ, ಗಂಗಪ್ಪ ಶಿರಗಾರ, ಹರ್ಷವರ್ಧನ ಪಟವರ್ಧನ, ಸತ್ಯಪ್ಪ ಮಗದುಮ್, ಸಂಗಪ್ಪ ಕುಂದಗೋಳ, ಶೆಟ್ಟೆಪ್ಪ ಸುಣಗಾರ, ಆಶಾ ಭೂತಿ ಸೇರಿದಂತೆ ಅನೇಕರಿದ್ದರು.



### ಅವಧಿಗೂ ಮುಂಚೆ ಆಯ್ಕೆ ಬೇಸರ

ಇತಿಹಾಸದಲ್ಲಿಯೇ ಮೊದಲ ಬಾರಿಗೆ ರಬಕವಿ ಹಾಗು ಬನಹಟ್ಟಿ ಪಟ್ಟಣ ಹೊರತುಪಡಿಸಿ ಹೊಸೂರಿಗೆ ಪ್ರಪ್ರಥಮ ಬಾರಿಗೆ ಪ್ರಾಧಿಕಾರ ಅಧ್ಯಕ್ಷ ಸ್ಥಾನ ದೊರಕಿತ್ತು. ಒಂದು ವರ್ಷಕ್ಕೆ ಇನ್ನೂ ಒಂದು ವಾರ ಅವಧಿಯಿರುವಾಗಲೇ ಮುಂಚೆಯೇ ಯಾರ ಗಮನಕ್ಕೂ ತರದೆ ಅಧ್ಯಕ್ಷ ಸ್ಥಾನ ಬದಲಿಸುವಲ್ಲಿ ಕಾರಣವಾಗಿದ್ದು, ಇಡೀ ಹೊಸೂರಿನ ಕಾಂಗ್ರೆಸ್ ಮುಖಂಡ ಹಾಗು ಕಾರ್ಯಕರ್ತರಲ್ಲಿ ತೀವ್ರ ಬೇಸರ ತರುವಲ್ಲಿ ಕಾರಣವಾಗಿದೆಯೆಂದು ನಿಕಟಪೂರ್ವ ಅಧ್ಯಕ್ಷ ವೆಂಕನಗೌಡ ಪಾಟೀಲ ಪತ್ರಿಕೆಗೆ ತಿಳಿಸಿದರು.

## ನಾಗನಗೌಡ ಪಾಟೀಲಗೆ ಪಿಎಚ್.ಡಿ ಪದವಿ

**ಬೆಳಗಾವಿ:** ಜಿಲ್ಲೆಯ ಸಂಶೋಧನಾ ವಿದ್ಯಾರ್ಥಿಯಾದ ನಾಗನಗೌಡ ಪ್ರಭುಗೌಡ ಪಾಟೀಲ. ಇವರು ಅರ್ಥಶಾಸ್ತ್ರ ವಿಷಯದಲ್ಲಿ ಮಂಡಿಸಿದ ಸಂಶೋಧನಾ ಮಹಾಪ್ರಬಂದಕ್ಕೆ ಪಿಎಚ್.ಡಿ ಪದವಿಯನ್ನು ಪ್ರಧಾನ ಮಾಡಲಾಗಿದೆ.



ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಅಭಿವೃದ್ಧಿ ಅಧ್ಯಯನ ವಿಭಾಗದಲ್ಲಿ ಸಂಶೋಧನಾ ವಿದ್ಯಾರ್ಥಿಯಾಗಿ ಅರ್ಥಶಾಸ್ತ್ರ ವಿಷಯದಲ್ಲಿ "ಬೆಳಗಾವಿ ಇಂಡಸ್ಟ್ರಿಯಲ್ ಎಸ್ಟೇಟ್ ಅರ ಕೇ ಸ್ಟಡಿ ಆಫ್ ಮೋಟಾರ್ ಪೇರ್ ಪಾರ್ಟ್ಸ್ ಯೂನಿಟ್ಸ್" ಎಂಬ ವಿಷಯದ ಮೇಲೆ ಸಂಶೋಧನೆ ನಡೆಸಿ, ಸಲ್ಲಿಸಿದ ಮಹಾಪ್ರಬಂದಕ್ಕೆ ಪಿಎಚ್.ಡಿ ಪದವಿಯನ್ನು ಪ್ರಧಾನ ಮಾಡಲಾಗಿದೆ.

ಇವರು ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯರಾದ ಡಾ. ತಿಪ್ಪಣ್ಣ ಬಸಪ್ಪ ಕೋಲಕಾರ ಅವರ ಮಾರ್ಗದರ್ಶನದಲ್ಲಿ ಈ ಮಹಾ ಪ್ರಬಂಧವನ್ನು ಮಂಡಿಸಲಾಯಿತು. ನಾಗನಗೌಡ ಪ್ರಭುಗೌಡ ಪಾಟೀಲ ಇವರು ಸಿದ್ದರಾಮೇಶ್ವರ ಶಿಕ್ಷಣ ಸಂಸ್ಥೆಯ ಆರ್.ಎ.ಪರ್ವತೆ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಇವರಿಗೆ ತಂದೆ ಪ್ರಭುಗೌಡ, ಪಾಟೀಲ, ತಾಯಿ ಸುವರ್ಣ ಪಾಟೀಲ, ಸಹೋದರ ಈರನಗೌಡ ಪಾಟೀಲ,ಸಹೋದರಿ ಭಾರತಿ ಪಾಟೀಲ, ಹಾಗೂ ಸಿದ್ದರಾಮೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು,ಕಾರ್ಯದರ್ಶಿಗಳು, ಬೋಧಕವೃಂದ, ಬೋಧಕ್ಕೆ ತರವೃಂದ, ಕುಟುಂಬದ ಸಂಬಂಧಿಕರು ಮತ್ತು ಗುರು ಹಿರಿಯರು ಹಾಗೂ ಆಪ್ತಮಿತ್ರರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

## ಆರ್‌ಎಸ್‌ಎಸ್ ಶಿಸ್ತು ದೇಶಾಭಿಮಾನ ಒಳಗೊಂಡಿದೆ

**ತಾಳಿಕೋಟೆ:** ರಾಷ್ಟ್ರೀಯ ಸ್ವಯಂ ಸೇವಕ ಸಂಘ ದೇಶಾಭಿಮಾನವನ್ನು ರೂಡಿಸಿಕೊಂಡು ನಡೆಯುವದರೊಂದಿಗೆ ದೇಶ ವಿದೇಶಗಳಲ್ಲಿಯೂ ತನ್ನ ವರ್ಚಸ್ಸು ಘನತೆ ಗೌರವದಿಂದ ಮುನ್ನಡೆದಿದೆ ಈ ಸಂಘಟನೆ ಸೂರ್ಯ ಚಂದ್ರ ಇರುವವರೆಗೂ ಬೆಳೆಯುತ್ತಾ ಸಾಗಲಿದ್ದು ಅಲ್ಲಿಯವರೆಗೂ ಭಾರತ ಮಾತೆಯ ಭಕ್ತಿ ಶ್ರದ್ದೆ ಎಂಬುದು ಇದ್ದೇ ಇರುತ್ತದೆ ಎಂದು ಶ್ರೀ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಶ್ರೀ ಸಿದ್ದಲಿಂಗ ದೇವರು ನುಡಿದರು.

ಗುರುವಾರರಂದು ವಿಜಯ ದಶಮಿಯ ನಿಮಿತ್ಯವಾಗಿ ಕನ್ನಡ ಶಾಲಾ ಮೈಧಾನದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘ ನಗರ ಘಟಕದ ವತಿಯಿಂದ ಸಂಘದ ಶತಾಬ್ದಿವರ್ಷದ ಅಂಗವಾಗಿ ಭೌಧಿಕ ಕಾರ್ಯಕ್ರಮದ ದಿವ್ಯ ಸಾನಿದ್ಯ ವಹಿಸಿ ಮಾತನಾಡುತ್ತಿದ್ದ ಶ್ರೀಗಳು ರಾಷ್ಟ್ರೀಯ ಸ್ವಯಂ ಸೇವಕ ಸಂಘ ದಿನನಿತ್ಯ ಕಲಿಸುತ್ತಿರುವದು ಸಮಯ ಪ್ರಜ್ಞೆ, ಸಿಸ್ತು ಹಾಗೂ ದೇಶಾಭಿಮಾನವನ್ನು ರೂಡಿಸಿಕೊಳ್ಳುವಂತಹದ್ದಾಗಿದೆ ಜನತೆಯಾಗಲಿ ಸ್ವಯಂ ಸೇವಕರಂತೆ ಮುಂದುವರೆಯುತ್ತಾ ದಿನನಿತ್ಯ ಅಲ್ಲಿ ನಡೆಯುತ್ತಿರುವ ಶಾಖೆಗಳಲ್ಲಿ ಪಾಲ್ಗೊಂಡು ಹಿತ ನುಡಿಗಳನ್ನು ಕೇಳುವದರೊಂದಿಗೆ ದೇಶಾಭಿಮಾನವನ್ನು ರೂಡಿಸಿಕೊಳ್ಳಬೇಕೆಂದರು. ಹಿಂದೂ ಒಂದು ಎಂಬುದರಲ್ಲಿ ಅರ್ಥ ಗರ್ಭಿತವಾಗಿದೆ ಆದರೆ ಜಾತಿ ಜಾತಿ ಎನ್ನುವಂತಹದ್ದು ಮುನ್ನಡೆದಿದೆ ಇದರಿಂದ ಒಗ್ಗಟ್ಟೆಂಬ ಭಲ ಎದ್ದು ಕಾಣುತ್ತಿಲ್ಲಾ ಒಗ್ಗಟ್ಟೆಂಬುದು ಇದ್ದರೆ ಬೇಕಾದುದ್ದನ್ನು ಸಾದಿಸಬಹುದಾಗಿದೆ ಎಂದ ಶ್ರೀಗಳು ಸಂಘ ಒಗ್ಗಟ್ಟೆಂಬುದನ್ನು ಸೃಷ್ಠಿ ಮಾಡಿಕೊಂಡು ದೇಶದ ಇತಿಹಾಸ ಕಾಪಾಡಲು ಮುಂದಾಗಿದೆ ಎಂದರು.



ಇನ್ನೋರ್ವ ಮುಖ್ಯ ವಕ್ತಾರರಾಗಿ ಆಗಮಿಸಿದ ಕರ್ನಾಟಕ ಉತ್ತರ ಪ್ರಾಂಥ ಪ್ರಚಾರಕ ಶ್ರೀನಿವಾಸಜಿ ಅವರು ಮಾತನಾಡಿದರು.ಇದೇ ಸಮಯದಲ್ಲಿ ಸಂಘದ ನಗರ ಘಟಕದ ವತಿಯಿಂದ ಸಿದ್ದಲಿಂಗಶ್ರೀಗಳಿಗೆ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.ಕಾರ್ಯಕ್ರಮದ ಮೊದಲಿಗೆ ಭಗವಾದ್ವಜಾರೋಹಣ ಹಾಗೂ ಪ್ರಾರ್ಥನೆ ಜರುಗಿತು.

ಈ ಸಮಯದಲ್ಲಿ ವಿಜಯಪುರ ವಿಭಾಗದ ಸಂಘ ಚಾಲಕರಾದ ಚಿದಂಬರ ಕರಮರಕರ ಹಾಗೂ ಗಣವೇಶದಾರಿ ಸ್ವಯಂ ಸೇವಕರು ಪಾಲ್ಗೊಂಡಿದ್ದರು.

## ಇಂದು ರಸ್ತೆ ಕಾಮಗಾರಿಗಳ ಶಂಕುಸ್ಥಾಪನೆ

**ಬೆಳಗಾವಿ:** ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಹಿರೇಬಾಗೇವಾಡಿ ಹೊಸ ಆವರಣದಲ್ಲಿ ಪಿ .ಎಂ ಉಷಾ ( ಮೇರು) ವಿವಿಧ ಕಟ್ಟಡಗಳ ಹಾಗೂ ರಾಷ್ಟ್ರೀಯ ಹೆದ್ದಾರಿಯಿಂದ ರಾ.ಚ.ವಿ ನೂತನ ಆವರಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿಗಳ ಶಂಕುಸ್ಥಾಪನೆಯನ್ನು ಅಕ್ಟೋಬರ, 04, 2025 ರಂದು ಬೆಳಿಗ್ಗೆ 11 ಗಂಟೆಗೆ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಹಿರೇಬಾಗೇವಾಡಿಯ ನೂತನ ಆವರಣದಲ್ಲಿ ಆಯೋಜಿಸಲಾಗಿದೆ. ವೇದಿಕೆ ಕಾರ್ಯಕ್ರಮವು ಬಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆವರಣದಲ್ಲಿ ಜರುಗಲಿದೆ. ಮುಖ್ಯಮಂತ್ರಿಗಳಾದ ಸಿದ್ಧಾರಾಮಯ್ಯ ಅವರು ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ ಶಿವಕುಮಾರ ಅವರುಗಳು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಗೌರವ ಉಪಸ್ಥಿತಿ ವಾಗಿಸಲಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ ಸುಧಾಕರ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರಾದ ಡಾ. ಎಂ. ಬಿ ಪಾಟೀಲ ಹಾಗೂ ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್. ಪಾಟೀಲ ಅವರು ವಿಶೇಷ ಅತಿಥಿಗಳಾಗಿ ಆಗಮಿಸಲಿದ್ದಾರೆ.

ರಾಜ್ಯ ಸಭೆ ಸಂಸದರಾದ ಈರಣ್ಣ ಕಡಾಡಿ, ಚಿಕ್ಕೋಡಿ ಲೋಕ ಸಭಾ ಸಂಸದರಾದ ಪ್ರಿಯಾಂಕಾ ಜಾರಕಿಹೊಳಿ, ಜಿಲ್ಲಾ ಲೋಕ ಸಭಾ ಸಂಸದರಾದ ಜಗದೀಶ್ ಶೆಟ್ಟರ, ಉತ್ತರ ಕನ್ನಡ ಲೋಕ ಸಭಾ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದಾರೆ. ಜಿಲ್ಲೆಯ ಎಲ್ಲ ಸಂಸದರು, ಶಾಸಕರು, ಪರಿಷತ್ ಸದಸ್ಯರು, ಜನಪ್ರತಿಧಿಗಳು, ಗೌರವಾನ್ವಿತ ಅತಿಥಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

## ಅದ್ದೂರಿಯಾಗಿ ಜರುಗಿದ ನವರಾತ್ರಿ ಉತ್ಸವ

**ಜಮಖಂಡಿ:** ತಾಲೂಕಿನ ಮುತ್ತೂರ ಗ್ರಾಮದಲ್ಲಿ ಶ್ರದ್ಧೆ ಮತ್ತು ಭಕ್ತಿಭಾವದಿಂದ ತುಂಬಿದ ದಸರಾ, ನವರಾತ್ರಿ ಉತ್ಸವ ಈ ವರ್ಷವೂ ಅದ್ದೂರಿಯಾಗಿ ಜರುಗಿದ್ದು.

ಪ್ರಲ್ಹಾದ ನಾರಾಯಣ ನಾಗೇಶ ಮಾತನಾಡಿ, ಈ ದಸರಾ ಮಹೋತ್ಸವ ಸುಮಾರು 300,400 ವರ್ಷಗಳಿಂದ ನಡೆದುಕೊಂಡು ಬರುತ್ತಿದ್ದು, ಇದು ನಮ್ಮ ಸಂಸ್ಕೃತಿಯ ಶ್ರೇಷ್ಠತೆಯ ಪ್ರತೀಕವಾಗಿದೆ. ಮುತ್ತೂರದ ದೇವಿಯ ದರ್ಶನಕ್ಕಾಗಿ ಸುತ್ತಮುತ್ತಲಿನ ಹಳ್ಳಿಗಳಿಂದ ಹಾಗೂ ದೂರದ ಊರುಗಳಿಂದ ಭಕ್ತರು ಆಗಮಿಸುತ್ತಾರೆ,

ಈ ಧಾರ್ಮಿಕ ಉತ್ಸವವು ಮುತ್ತೂರ ಗ್ರಾಮದಲ್ಲಿ ಭಕ್ತಿಭಾವ, ಸಂಸ್ಕೃತಿ ಮತ್ತು ಸಮುದಾಯದ ಏಕತೆಯ ಸಂಕೇತವಾಗಿದೆ ಎಂದರು.

**9 ದಿನಗಳ ಧಾರ್ಮಿಕ ಕಾರ್ಯಕ್ರಮಗಳ ವೈಭವ:** ಅಮಾವಾಸ್ಯೆಯ ನಂತರದ ಎರಡನೇ ದಿನದಿಂದ ಆರಂಭಗೊಂಡ ನವರಾತ್ರಿ ಉತ್ಸವದಲ್ಲಿ ಪ್ರತಿದಿನ ಬೆಳಿಗ್ಗೆ ಶ್ರೀ ಮಹಾಲಕ್ಷ್ಮಿ ದೇವಿಗೆ ಪಂಚಾಮೃತ ಅಭಿಷೇಕ, ಮಹಾಪೂಜೆ ಹಾಗೂ ಹೂವಿನ ಸೀರೆಗಳಿಂದ ಅಲಂಕಾರ ನಡೆಯುತೆ. ಭಕ್ತಾಧಿಗಳ ಕೊಡುಗೆಯಾಗಿ ಬಂದ ಅನೇಕ ಸೀರೆಗಳಿಂದ ದೇವಿಗೆ ವಿಭಿನ್ನ ಅಲಂಕಾರ.

ಪ್ರತಿದಿನ 9 ವಿಭಿನ್ನ ರೀತಿಯಲ್ಲಿ ದೇವಿಯನ್ನು ಆರಾಧಿಸುವ ಮೂಲಕ ನವರಾತ್ರಿಯ ವೈಶಿಷ್ಟ್ಯತೆ ಹೆಚ್ಚಿಸುತ್ತಾರೆ. 10ನೇ ದಿನವಾದ ವಿಜಯದಶಮಿಯಂದು ಶ್ರೀ ಮಹಾಲಕ್ಷ್ಮಿ ದೇವಿಯನ್ನು ಪಲ್ಲಕ್ಕಿಯಲ್ಲಿ ಕೂರಿಸಿ ಸಕಲ ವಾದ್ಯಮೇಳಗಳೊಂದಿಗೆ, ಮುತ್ತೈದೆಯರ ಆರತಿಯೊಂದಿಗೆ ಬನ್ನಿ ಮಂಟಪಕ್ಕೆ ಕರೆದುಕೊಂಡು ಹೋಗಿ. ಅಲ್ಲಿಯ ಬನ್ನಿ ಮರಕ್ಕೆ ಪೂಜೆ ಸಲ್ಲಿಸಿ ಬನ್ನಿ ಮುಡಿದ ನಂತರ ದೇವಿಯನ್ನು ದೇವಸ್ಥಾನಕ್ಕೆ ಮರಳಿ ಕರೆದುಕೊಂಡು ಹೋಗಿ ಮಂಗಳಾರತಿ ಹಾಗೂ ಮಂಗಲ ಹಾಡುಗಳೊಂದಿಗೆ ಉತ್ಸವಕ್ಕೆ ಸಮಾರೋಪ ಮಾಡುತ್ತಾರೆ



## ಇಂದು ವಿಶ್ವ ನಾಗರಿಕರ ದಿನಾಚರಣೆ

**ವಿಜಯಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಜಿಲ್ಲೆಯ ಎಲ್ಲ ಸಂಘ ಸಂಸ್ಥೆಗಳ ಸಹಯೋದಲ್ಲಿ ಅಕ್ಟೋಬರ್ 04ರಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮವನ್ನು ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಇಂದು ಬೆಳಿಗ್ಗೆ 10:30ಕ್ಕೆ ನಡೆಯುವ ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಬಿ. ಪಾಟೀಲ ಅವರು ಉದ್ಘಾಟಿಸುವರು. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್ ಪಾಟೀಲ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರಾದ ಶ್ರೀಮತಿ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಗೌರವ ಉಪಸ್ಥಿತರಿರಲಿದ್ದು, ನಗರದ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ರವಿಕುಮಾರ. ಎನ್, ಕರ್ನಾಟಕ ಸರ್ಕಾರದ ನವದೆಹಲಿಯ ವಿಶೇಷ ಪ್ರತಿನಿಧಿ ಹಾಗೂ ಪರಿಷತ್ತಿನ ಶಾಸಕರಾದ ಪ್ರಕಾಶ ಹುಕ್ಕೇರಿ, ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಮಿತದ ಅಧ್ಯಕ್ಷರು ಹಾಗೂ ಶಾಸಕರಾದ ಅಪ್ಪಾಜಿ ಸಿ.ಎಸ್. ನಾಡಗೌಡ, ಸಂಸದರಾದ ರಮೇಶ ಜಿಗಜಿಣಗಿ, ಸುಧಾ ಮೂರ್ತಿ, ಶಾಸಕರಾದ ಯಶವಂತರಾಯಗೌಡ ಪಾಟೀಲ, ಹಣಮಂತ ನಿರಾಣಿ, ಅಧ್ಯಕ್ಷರಾದ ಇಲಿಯಾಸ ಬೋರಾಮಣಿ ಭಾಗವಹಿಸಲಿದ್ದಾರೆ.

# ಇಂದು ಶ್ರೀ ಮಹಾಲಕ್ಷ್ಮೀ ಸಹಕಾರಿ ಸಂಘದ ನೂತನ ಪ್ರಧಾನ ಕಛೇರಿಯ ಉದ್ಘಾಟನೆ

**ಮೂಡಲಗಿ:** ಕಲ್ಲೋಳಿಯ ಶ್ರೀ ಮಹಾಲಕ್ಷ್ಮೀ ಸೌಹಾರ್ದ ಸಹಕಾರಿ ಸಂಘದ ನೂತನ ಪ್ರಧಾನ ಕಛೇರಿಯ ಉದ್ಘಾಟನಾ ಸಮಾರಂಭವು ಶನಿವಾರ ಅ-04 ರಂದು ಮಧ್ಯಾಹ್ನ 3.00 ಗಂಟೆಗೆ ಶ್ರೀ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಮೈದಾನದಲ್ಲಿ ಉದ್ಘಾಟನಾ ಸಮಾರಂಭವು ಜರುಗಲಿದೆ ಎಂದು ಸಂಸ್ಥಾಪಕ ಅಧ್ಯಕ್ಷರು ಹಾಗೂ ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ಗುರುವಾರ ಸಹಕಾರಿಯ ಸಭಾ ಭವನದಲ್ಲಿ ಪ್ರತಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಸಂಸ್ಥೆಯು ಕಳೆದ 23 ವರ್ಷಗಳಿಂದ ಸಹಕಾರಿ ರಂಗದಲ್ಲಿ ಕಾರ್ಯನಿರ್ವಹಿಸುತ್ತಿದ್ದು ಮಾರ್ಚ 31 ರವರೆಗೆ ಸಂಘವು 15628 ಶೇರುದಾರರನ್ನು ಹೊಂದಿದ್ದು, ರೂ. 405.24 ಕೋಟಿ ವ್ಯವಹಾರ ಮಾಡಿ ಪ್ರಗತಿ ಪಥದಲ್ಲಿ ಸಾಗುತ್ತಿದೆ ಎಂದರು.

ಕಾಡಸಿದ್ದೇಶ್ವರ ಮಠ ಕನ್ನೇರಿ ಪೂಜ್ಯ ಕಾಡಸಿದ್ದೇಶ್ವರ ಮಹಾಸ್ವಾಮಿಜಿಗಳು, ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಮಹಾಸ್ವಾಮಿಜಿಗಳು ಹಾಗೂ ಭಗೀರಥ ಪೀಠದ ಪುರುಷೋತ್ತಮಾನಂದ ಪುರಿ ಮಹಾಸ್ವಾಮಿಜಿಗಳು ದಿವ್ಯ ಸಾನಿಧ್ಯ ವಹಿಸುವರು. ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವರು ಹಾಗೂ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹಾಗೂ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಅವರು ಉದ್ಘಾಟನೆ ಮಾಡಲಿದ್ದಾರೆ ಎಂದು ವಿವರ ನೀಡಿದರು.



ಮಾಜಿ ಮುಖ್ಯಮಂತ್ರಿಗಳು, ಬೆಳಗಾವಿ ಲೋಕಸಭಾ ಸಂಸದ ಜಗದೀಶ ಶೆಟ್ಟರ್, ಮಾಜಿ ಸಚಿವರಾದ ಮುರಗೇಶ ನಿರಾಣಿ, ಶಶಿಕಲಾ ಜೊಲ್ಲೆ, ಮಾಜಿ ಸಂಸದರಾದ ಪ್ರಭಾಕರ ಕೋರೆ, ರಮೇಶ ಕತ್ತಿ, ಅಮರಸಿಂಹ ಪಾಟೀಲ, ಅಣ್ಣಾಸಾಹೇಬ ಜೊಲ್ಲೆ, ಶಾಸಕರಾದ ಅಭಯ ಪಾಟೀಲ, ದುರ್ಯೋಧನ ಐಹೊಳೆ, ವಿಠ್ಠಲ ಹಲಗೇಕರ, ನಿಖಿಲ್ ಕತ್ತಿ ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ, ಮಾಜಿ ಶಾಸಕರಾದ ಸಂಜಯ ಪಾಟೀಲ, ಅನೀಲ ಬೆನಕೆ, ಮಹಾಂತೇಶ ದೊಡ್ಡಗೌಡರ, ಪಿ. ರಾಜೀವ, ಡಾ ವಿಶ್ವನಾಥ ಪಾಟೀಲ, ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ ಕವಟಗಿಮಠ, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯ ಅಧ್ಯಕ್ಷ ಜಿ. ನಂಜನಗೌಡ, ವ್ಯವಸ್ಥಾಪಕ ನಿರ್ದೇಶಕ ಶರಣಗೌಡ ಪಾಟೀಲ ಅವರುಗಳು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದಾರೆ. ಜಿಲ್ಲೆಯ ಜನಪ್ರತಿನಿಧಿಗಳು, ಸಹಕಾರಿಯ ಹಿರಿಯ ಧುರೀಣರು, ಹಲವು ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ತಾಲೂಕಿನ ಸಾರ್ವಜನಿಕರು ಹಾಗೂ ಸಹಕಾರಿ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಂಸದ ಈರಣ್ಣ ಕಡಾಡಿ ವಿನಂತಿಸಿದ್ದಾರೆ.

ಈ ಸಂದರ್ಭದಲ್ಲಿ ಬಿಡಿಸಿಸಿ ಬ್ಯಾಂಕ ನಿರ್ದೇಶಕ ಸತೀಶ ಕಡಾಡಿ, ಸಹಕಾರಿಯ ಉಪಾಧ್ಯಕ್ಷ ಶ್ರೀಶೈಲ ತುಪ್ಪದ, ನಿರ್ದೇಶಕರಾದ ಪರಪ್ಪ ಮಳವಾಡ, ಬಾಳಪ್ಪ ಸಂಗಟಿ, ಸಹದೇವ ಹೆಬ್ಬಾಳ, ಶಿವಪ್ಪ ಗೋಸಬಾಳ, ಅಕ್ಕವ್ವ ಹಡಗಿನಾಳ, ಕಾಶವ್ವಾ ಹೆಬ್ಬಾಳ, ಮಲ್ಲಿಕಾರ್ಜುನ ಹುಲೆನ್ನವರ, ನಿಂಗಪ್ಪ ಮಿಡಕನಟ್ಟಿ, ಪ್ರಧಾನ ವ್ಯವಸ್ಥಾಪಕ (ಪ್ರಬಾರಿ)ಪರಪ್ಪ ಗಿರೆಣ್ಣವರ ಉಪಸ್ಥಿತರಿದ್ದರು.

## ಸಚಿವರ ಜಿಲ್ಲಾ ಪ್ರವಾಸ

**ಕೊಪ್ಪಳ:** ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಅವರು ಅಕ್ಟೋಬರ್ 4 ರಂದು ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಸಚಿವರು ಅ. 3ರಂದು ಬೆಂಗಳೂರಿನಿಂದ ರಾತ್ರಿ 9 ಗಂಟೆಗೆ ಕಾರಟಗಿಗೆ ಆಗಮಿಸಿ ಕನಕಗಿರಿ ವಿಧಾನಸಭಾ ಕ್ಷೇತ್ರದ ಸಾರ್ವಜನಿಕರ ಭೇಟಿ ಮತ್ತು ಕುಂದುಕೊರತೆಗಳ ವಿಚಾರಣೆ ಮಾಡಿ ವಾಸ್ತವ್ಯ ಮಾಡುವರು.

ಅ. 4 ರಂದು ಬೆಳಿಗ್ಗೆ 10 ಗಂಟೆಗೆ ಕಾರಟಗಿಯಿಂದ ನಿರ್ಗಮಿಸಿ, 11.30 ಗಂಟೆಗೆ ಕೊಪ್ಪಳಕ್ಕೆ ಆಗಮಿಸಿ, ಸನ್ಮಾನ್ಯ ಮುಖ್ಯಮಂತ್ರಿಗಳು ಕೊಪ್ಪಳ ಜಿಲ್ಲೆಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ನಗರದ ಹೊಸಪೇಟೆ ರಸ್ತೆಯ ಅಗಡಿ ಲೇಔಟನಲ್ಲಿ ಕಾರ್ಯಕ್ರಮದ ಸ್ಥಳದ ವೀಕ್ಷಣೆ ಹಾಗೂ ಅಧಿಕಾರಿಗಳೊಂದಿಗೆ ಚರ್ಚೆ ನಡೆಸುವರು.



## ಗಾಂಧಿಜೀ ಅಹಿಂಸೆಯ ಮಹತ್ವಸಾರಿದರು

**ಬಾಗಲಕೋಟೆ:** ದೇಶದ ಸ್ವಾತಂತ್ರ್ಯಕ್ಕೆ ದಂಡಿ ಸತ್ಯಾಗ್ರಹ, ಸ್ವದೇಶಿ ಚಳುವಳಿಗಳ ಹೋರಾಟದ ರೂವಾರಿ,ಮಹತ್ಮಾ ಗಾಂಧಿಜಿಯವರು ಸ್ವಚ್ಚತೆ ಹಾಗೂ ಅಹಿಂಸಾ ಮಹತ್ವ ಸಾರಿದರು, ಲಾಲ್ ಬಹುದ್ದೂರ ಶಾಸ್ತ್ರಿಜಿಯವರು ಪ್ರಾಮಾಣಿಕತೆಯ ತತ್ವಸಾರಿದರು ಎಂದು ಮಾಜಿ ಶಾಸಕ ಡಾ. ವೀರಣ್ಣ ಚರಂತಿಮಠ ಹೇಳಿದರು.

ಅವರು ನಗರದ ಶಿವಾನಂದ ಜೀನಲ್ಲಿರುವ ಬಿಜೆಪಿ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಾರ್ಟೀ ಬಾಗಲಕೋಟೆ ಮತಕ್ಷೇತ್ರದಿಂದ ಹಮ್ಮಿಕೊಂಡ ಮಹಾತ್ಮಾ ಗಾಂಧಿ ಜಯಂತಿ ಹಾಗೂ ಲಾಲ್ ಬಹದ್ದೂರ ಶಾಸ್ತ್ರಿಜಿ ಜಯಂತಿನಿಮಿತ್ಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚಣೆ ಮಾಡಿ ಗೌರವ ನಮನ ಸಲ್ಲಿಸಿ ಮಾತನಾಡಿದರು.

ದಂಡಿ ಸತ್ಯಾಗ್ರಹ, ಕ್ವಿಟ್ ಇಂಡಿಯಾ, ಸ್ವದೇಶಿ ಚಳುವಳಿಯಂತಹ ಅನೇಕ ಹೋರಾಟಗಳ ರೂವಾರಿ, ಜೀವನದಲ್ಲಿ ಸತ್ಯ, ಅಹಿಂಸೆ, ಸ್ವಚ್ಛತೆಯ ಮಹತ್ವವನ್ನು ರಾಷ್ಟ್ರಪಿತ ಮಹಾತ್ಮ ಗಾಂಧಿಹಿಯವರು ಸಾರಿದರು, ದೇಶಕ್ಕೆ ಜೈ ಜವಾನ ಜೈ ಕಿಸಾನ್ ಎಂಬ ಸಂದೇಶ ಸಾರಿದ ಲಾಲ್ ಬಹುದ್ದೂರ ಶಾಸ್ತ್ರಿಜಿಯವರ ಪ್ರಾಮಾಣಿಕತೆಯ ಆಡಳಿತ ಎಲ್ಲರಿಗೂ ಆದರ್ಶ ಎಂದರು. ಕಾರ್ಯಕ್ರಮದಲ್ಲಿ ಡಾ.ಎಂ.ಎಸ್. ದಡ್ಡೆನ್ನವರ, ಗುಂಡುರಾವ ಶಿಂಧೆ. ಬಸವರಾಜ ಯಂಕಂಚಿ, ಶಿವಾನಂದ ಟವಳಿ, ಸತ್ಯನಾರಾಯಣ ಹೆಮಾದ್ರಿ, ಬಸವರಾಜ ಹುನಗುಂದ.ಶ್ರೀಧರ ನಾಗರಬೆಟ್ಟ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಜಿಲ್ಲಾಡಳಿತದಿಂದ ಗಾಂಧಿ-ಶಾಸ್ತ್ರೀ ಜಯಂತಿ ಆಚರಣೆ

**ಬಾಗಲಕೋಟೆ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಶ್ರಯದಲ್ಲಿ ಗಾಂಧಿ ಜಯಂತಿ ಹಾಗೂ ಲಾಲಬಹದ್ದೂರ ಶಾಸ್ತ್ರೀಯವರ ಜನ್ಮ ದಿನಾಚರಣೆಯನ್ನು ಜಿಲ್ಲಾಡಳಿತದ ಮುಖ್ಯದ್ವಾರದಲ್ಲಿ ಗುರುವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಜಿಲ್ಲಾಡಳಿತ ಭವನದ ಮುಖ್ಯ ದ್ವಾರದಲ್ಲಿ ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ, ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆಣ್ಣವರ, ಮಾಜಿ ಸಚಿವ ಎಸ್.ಜಿ.ನಂಜಯ್ಯನಮಠ, ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಸೇರಿದಂತೆ ಇತರರು ಗಾಂಧಿ ಹಾಗೂ ಶಾಸ್ತ್ರೀಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಪುಷ್ಪಾರ್ಚನೆಗೈದು ನಮನ ಸಲ್ಲಿಸಿದರು.

ವಿವಿಧ ಧರ್ಮದ ಗುರುಗಳಾದ ಸಂಸ್ಕೃತ ಪಂಡಿತ ಬಿಂಧುಮಾಧವಾಚಾರ್ಯ ನಾಗಸಂಪಗಿ ಭಗವದ್ಗೀತಾ, ಆಸೀಫ್ ಎಲ್. ಮುದಗಲ್ಲ ಕುರಾನ ಹಾಗೂ ಫ್ರೆಡ್ಡಿರಾಜ ಬೈಬಲ್ ಕುರಿತು ಪಠಣ ಮಾಡಿದರು. ಬಸವೇಶ್ವರ ಕಲಾ ಮಹಾವಿದ್ಯಾಲಯದ ಡಾ.ಆರ್.ಎಂ.ಬೆಣ್ಣೂರ ಮತ್ತು ಸಂಗೀತ ವಿಭಾಗದ ವಿದ್ಯಾರ್ಥಿಗಳಿಂದ ಸರ್ವಧರ್ಮ ಪ್ರಾರ್ಥನೆ ಮತ್ತು ವೈಷ್ಣವ ಜನತೋತನೆ, ರಘುಪತಿ ರಾಘವ ರಾಜಾರಾಮ ಗೀತೆ ಹಾಡಿದರು.

ಕಾರ್ಯಕ್ರಮದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕ ಫೀರಜಾದೆ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪಂಕಜ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪುಂಡಲೀಕ ಕಾಂಬಳೆ, ಜಿಲ್ಲಾ ವಾರ್ತಾಧಿಕಾರಿ ಕಸ್ತೂರಿ ಪಾಟೀಲ, ಕ್ಷೇತ್ರ ಶಿಕ್ಷಣಾಧಿಕಾರಿ ಜಾಸ್ಮೀನ್ ಕಿಲ್ಲೇದಾರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.



### ಬಾಪೂಜಿ ಪ್ರಬಂಧ ಸ್ಪರ್ಧೆ: ವಿಜೇತರಿಗೆ ಬಹುಮಾನ ವಿತರಣೆ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಹಾತ್ಮಾಗಾಂಧೀಯವರ 156ನೇ ಜಯಂತಿ ಅಂಗವಾಗಿ ಹಮ್ಮಿಕೊಂಡ ಜಿಲ್ಲಾ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಶಸ್ತಿ ಪತ್ರ ಹಾಗೂ ನಗದು ಬಹುಮಾನವನ್ನು ವಿತರಿಸಲಾಯಿತು. ಪ್ರೌಢಶಾಲಾ ವಿಭಾಗದಲ್ಲಿ ವೈಷ್ಣವಿ ಕರಲಟ್ಟಿ (ಪ್ರಥಮ), ನವ್ಯಶ್ರೀ ಹುಡೇದ (ದ್ವಿತೀಯ), ಸೌಮ್ಯ ಸಂತಪ್ಪನವರ (ತೃತೀಯ), ಕಾಲೇಜು ವಿಭಾಗದಲ್ಲಿ ಸಂಗೀತಾ ಬಾಗೋಡಿ (ಪ್ರಥಮ), ಕಾವೇರಿ ವಿಭೂತಿ (ದ್ವಿತೀಯ), ಪೂಜಾ ಅಗಸದವರ (ತೃತೀಯ), ಪದವಿ, ಸ್ನಾತಕೋತ್ತರ ವಿಭಾಗದಲ್ಲಿ ಶ್ರೀದೇವಿ ಕೋನಪ್ಪನವರ (ಪ್ರಥಮ), ಸ್ವಾತಿ ರಾಠೋಡ (ದ್ವಿತೀಯ), ಜ್ಯೋತಿ ಸಿದ್ದಾಪೂರ (ತೃತೀಯ) ಸ್ಥಾನ ಪಡೆದುಕೊಂಡಿದ್ದಾರೆ.

# ಹುತಾತ್ಮ ಸೈನಿಕರಿಗೆ ಗೌರವ ಸಲ್ಲಿಸುವುದು ನಮ್ಮೆಲ್ಲರ ಕರ್ತವ್ಯ

**ರಬಕವಿ–ಬನಹಟ್ಟಿ:** ನಮ್ಮ ಹುತಾತ್ಮ ಸೈನಿಕರಿಗೆ ಗೌರವ ಸಲ್ಲಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹಿಂದು ಸಂಘಟನೆ ಮುಖಂಡ ಶಿವಾನಂದ ಗಾಯಕವಾಡ ಹೇಳಿದರು.

ಅವರು ಬನಹಟ್ಟಿಯಲ್ಲಿ ದುರ್ಗಾದೇವಿ ದೇವಸ್ಥಾನದಿಂದ ಕೆಎಚ್‌ಡಿಸಿ ಕಾಲನಿಯಲ್ಲಿರುವ ಅಂಭಾಭವಾನಿ ದೇವಸ್ಥಾನದ ವರೆಗೆ ಹಮ್ಮಿಕೊಂಡ ದುರ್ಗಾ ದೌಡ ಕಾರ್ಯಕ್ರಮದಲ್ಲಿ ಮಾತನಾಡಿದರು. ಸ್ವದೇಶಿ ವಸ್ತುಗಳನ್ನು ಬಳಸಿ, ಆತ್ಮ ನಿರ್ಭರ ಭಾರತಕ್ಕೆ ನಮ್ಮೆಲ್ಲರ ಸಹಕಾರ ಅವಶ್ಯವಾಗಿದೆ. ಒಂದು ಗಿಡವನ್ನು ತಾಯಿ ಹೆಸರಲ್ಲಿ ನೇಡೋಣ ಪೋಷಿಸೋಣ. ಧರ್ಮ, ಸಂಸ್ಕಾರ, ಸಂಸ್ಕೃತಿಯ ಹಿತಕ್ಕಾಗಿ ಒಂದು ಗಂಟೆ ಸಮಯವನ್ನುಯನ್ನು ಮೀಸಲಿಡೋಣ. ನಮ್ಮ ಮಕ್ಕಳನ್ನು ನಿಜವಾದ ದೇಶ ಪ್ರೇಮಿಗಳನ್ನಾಗಿಸೋಣ. ನಮ್ಮ ಮನೆಯ ಮಕ್ಕಳು ಧರ್ಮ ರಕ್ಷಕರಾಗಿ ಬೆಳೆಯಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಚು ಶಿರೋಳ, ರಮೇಶ ಸೋನಾವನೆ, ರಾಜು ಗಾಯಕವಾಡ, ಗುಣಕಿ, ರಾಘು ಸಿಂಹಾಸನ, ನಾಗರಾಜ ಮರಿಬಸನ್ನವರ, ನಿತ್ಯಾ ಗಾಯಕವಾಡ, ಸಹನಾ ಧಬಾಡಿ, ಪೂಜಾ ಗಾಯಕವಾಡ ಸೇರಿದಂತೆ ಅನೇಕರು ಇದ್ದರು.



# ದಸರಾ ಹಬ್ಬ: ಪದ್ಮಾವತಿ ದೇವಿಯ ಭವ್ಯ ಮೆರವಣಿಗೆ

**ಅಥಣಿ:** ಕರ್ನಾಟಕ ಹಾಗೂ ಮಹಾರಾಷ್ಟ್ರದ ಗಡಿ ಭಾಗವಾದ ಕಾಗವಾಡ ತಾಲೂಕಿನ ಉಗಾರ ಖುರ್ದ ಗ್ರಾಮದ ಪದ್ಮಾವತಿ ದೇವಿಯು ಜೈನ ಧರ್ಮಿಯರ ಪವಿತ್ರ ಸ್ಥಾನವಾಗಿದ್ದು, ಸಾವಿರಾರು ಶ್ರಾವಕ, ಶ್ರಾವಕಿಯರ ಸಮ್ಮುಖದಲ್ಲಿ ಬುಧವಾರ ಅಷ್ಟ ದ್ರವ್ಯಗಳಿಂದ, 1 ಸಾವಿರ ಲಿಟರ್ ಹಾಲು, ಮೊಸರು, ತುಪ್ಪ, 2 ಸಾವಿರ ಶ್ರೀ ಫಳಗಳಿಂದ ಪದ್ಮಾವತಿ ದೇವಿಯ ಮೂರ್ತಿಗೆ ಕೃಷ್ಣಾ ನದಿಯಲ್ಲಿ ಅಭಿಷೇಕ ಮಾಡಿ ನದಿಗೆ ಅರ್ಪನೆ ಮಾಡಿದರು.

ವಿಜಯದಶಮಿಯ ಹಬ್ಬದ ನಿಮಿತ್ಯ ಬೆಳಿಗ್ಗೆ ಮಂದಿರದ ಅರ್ಚಕ ಅಶೋಕ ಉಪಾದ್ಯೆ ಇವರು ಮಂದಿರದ ಧರ್ಮಾಧಿಕಾರಿ ಶೀತಲಗೌಡ ಪಾಟೀಲ, ದಂಪತಿಗಳಿಂದ ಪೂಜೆಸಲ್ಲಿಸಿ ಸಾವಿರಾರು ಶ್ರಾವಕರ ಸಮ್ಮೂಖದಲ್ಲಿ ವಾದ್ಯ–ವೃಂದದೊಂದಿಗೆ ಕೃಷ್ಣಾ ನದಿಗೆ ತೆರಳಿ ಮದ್ಯಾನ್ಹ ನದಿಗೆ ಪೂಜೆ ಸಲ್ಲಿಸಿದರು. ಅರ್ಚಕರಾದ ಅಶೋಕ ಉಪಾದ್ಯ, ಚೇತನ ಉಪಾದ್ಯ, ಸಂಪತ ಉಪಾದ್ಯ, ಮತ್ತು ದೇವಿಯ ಸಾವಿರಾರು ಸದ್ಭಕ್ತರು ನದಿ ಪೂಜೆ ಕಾರ್ಯಕ್ರಮದಲ್ಲಿ ಜಾತಿ,ಮತ ಪಂಥವಿಲ್ಲದೇ ಎಲ್ಲ ಧರ್ಮಿಯ ಭಕ್ತರು ಪಾಲ್ಗೊಂಡಿದ್ದರು.

ನವರಾತ್ರಿಯ 9 ದಿನಗಳ ಕಾಲ ಪದ್ಮಾವತಿ ದೇವಿಯ ಮಂದಿರಕ್ಕೆ ವಿದ್ಯುತ್ ದೀಪದ ಅಲಂಕಾರ, ಮಾಡಿ 40 ಅಖಂಡ ತುಪ್ಪದ ಜ್ಯೋತಿಗಳನ್ನು ಹಚ್ಚಿ, ಮುಂಜಾನೆ ಪಂಚಾಮೃತ ಅಭಿಷೇಕ, ಮಹಾಶಾಂತಿ ಮಂತ್ರ, ದೇವಿಯ ಅಲಂಕಾರ, ಅಷ್ಟಕ ಸ್ತೋತ್ರ, ಕುಂಕುಮಾರ್ಚನೆ, ಸಾಯಂಕಾಲ ಅಭಿಷೇಕ ಹಾಗೂ ಪ್ರತಿನಿತ್ಯ ರಾತ್ರಿ 7 ಗಂಟೆಗೆ ಆದರ್ಶ ಮಹಿಳಾ ಮಂಡಳದ ವತಿಯಿಂದ ದಾಂಡಿಯಾ ಹಾಗೂ ಗರ್ಭಾ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುತ್ತಿದ್ದವು.

**ನದಿ ಪೂಜೆಗೆ ವರುಣನ ಆಗಮನ:** ಭಕ್ತಾಧಿಗಳು ಪವಿತ್ರ ಕೃಷ್ಣೆಯಲ್ಲಿ ಮಿಂದು ಪದ್ಮಾವತಿ ದೇವಿಯ ಪೂಜೆಯನ್ನು ಶ್ರದ್ಧಾ ಭಕ್ತಿಯಿಂದ ನೆರವೇರಿಸುತ್ತಿದ್ದಂತೆ ಮೇಘರಾಜ 5 ಮಳೆಯ ಹನಿಗಳನ್ನಾದರೂ ಸುರಿಸಿ ಭಕ್ತರ ಭಕ್ತಿಯನ್ನು ಸಾಕ್ಷಿಕರಿಸುತ್ತಾನೆ. ಆ ಮಳೆ ಹನಿಗೆ ಮುತ್ತಿನ ಮಳೆಯಂದೇ ಕರೆಯಲ್ಪಡುತ್ತಾರೆ.

ನೂರಾರು ವರ್ಷಗಳಿಂದ ಇದು ನಡೆದುಕೊಂಡು ಬಂದ ಸಾಂಪ್ರದಾಯ ಹಾಗೂ ದೇವಿಯ ಮಹಾತ್ಮೆ. ಕಳೆದ ಅನೇಕ ವರ್ಷಗಳಿಂದ ಪವಾಡ ನಡೆಯುತ್ತಾ ಬಂದಿದ್ದೆ ರವಿವಾರವು ಸಹ ಪೂಜೆ ಸಲ್ಲಿಸುವ ಸಂದರ್ಭದಲ್ಲಿ ವರುಣನ ಆಗಮನಾಯಿತು, ಅಲ್ಲಿ ನೆರದಿದ್ದ ಸದ್ಭಕ್ತರು ಪದ್ಮಾವತಿ ಮಾತಾಕೀ ಜೈ ಎಂದು ಜೈ ಘೋಷಗಳನ್ನು ಕೂಗುತ್ತ ಭಕ್ತಿಯ ಪರಾಕಾಷ್ಟೆ ಮೆರೆದರು.

ಈ ಸಮಯದಲ್ಲಿ ಮಂದಿರದ ಧರ್ಮಾಧಿಕಾರಿ ಶೀತಲಗೌಡ ಪಾಟೀಲ, ವೃಷಭಗೌಡ ಪಾಟೀಲ ಅಣ್ಣಾಗೌಡ ಪಾಟೀಲ, ರಾಜವೀರ ಪಾಟೀಲ,ಕುಟುಂಬ ವರ್ಗಮುಖಂಡರಾದ ಅಣ್ಣಾಸಾಬ ನಂದಗಾಂವೆ, ಪ್ರಮೋದ ಹೊಸುರೆ, ಪ್ರಶಾಂತ ವಸವಾಡೆ, ಶ್ರೀ ಪದ್ಮಾವತಿ ಸೇವಾ ಸಮೀತಿಎಲ್ಲ ಸದಸ್ಯರು ಸೇರಿದಂತೆ ಕರ್ನಾಟಕ ಹಾಗೂ ಮಹಾರಾಷ್ಟ ರಾಜ್ಯಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರು.



### ಭಾವೈಕ್ಯತೆ ಮೆರೆದ ಗ್ರಾಮ

ಉಗಾರ ಬುದ್ರಕ ಗ್ರಾಮ ದೇವತೆ ಶ್ರೀ ಪದ್ಮಾವತಿ ದೇವಿಯ ಸದ್ಭಕ್ತರು ಯಾವುದೆ ಜಾತಿ, ಧರ್ಮ, ಮತ ಎನ್ನದೆ ಇದೊಂದು ನಮ್ಮ ಹಬ್ಬ ಎಂದು ಭಾವಿಸಿಎಲ್ಲರು ಒಂದುಗೂಡಿ ದಸರಾ ಹಬ್ಬವನ್ನು ಸಂಘ ಸಂಸ್ಥೆಗಳ ಪ್ರಮುಖರು ಒಂದುಗೂಡಿ ಗ್ರಾಮವನ್ನು ಸ್ವಚ್ಚಗೊಳಿಸಿ ಬೆರೆ ಗ್ರಾಮಗಳಿಂದ ಆಗಮಿಸಿರುವ ಸದ್ಭಕ್ತರಿಗೆ ಸ್ವಾಗತಿಸಿ ಶುದ್ದ ಕುಡಿಯುವ ನೀರಿನ ವ್ಯವಸ್ಥೆ, ಪಾನಕ, ನಿಡುತ್ತಿರುವ ಕಂಡು ಬಂತು. ಹಿಂದೂ, ಮುಸ್ಲಿಂ, ಜೈನ್ ಎಂಬ ಬೇಧ ಭಾವವಿಲ್ಲದೇ ಎಲ್ಲ ವರ್ಗದ ಭಕ್ತರು ಈ ದೇವಿಯ ಮೆರವಣಿಗೆಯಲ್ಲಿ ಭಾಗವಹಿಸಿ ಭಾವೈಕ್ಯತೆಯನ್ನು ಮೆರೆದರು. ಮೆರವಣಿಗೆಯಲ್ಲಿ ಸ್ಥಳಿಯ ಪದ್ಮಭೂಷನ, ಪದ್ಮಾವತಿ, ಪಾರ್ಶ್ವಪದ್ಮಾವತಿ, ಜಾಂಜ್ ಪತಕದಲ್ಲಿ ನೂರಾರು ಯುವಕರು ಪಾಲ್ಗೋಂಡಿದ್ದರು. ಅಲ್ಲದೆ ವಿದ್ಯಾರ್ಥಿಗಳು ಲೆಜಿಮ್ ಪ್ರದರ್ಶಿಸಿದರು.

# ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಮನವಿ



**ಕರ್ನಾಟಕ ರಾಜ್ಯ ಪೌರ ನೀರು ಸರಬರಾಜು ನೌಕರರ ಮಹಾ ಸಂಘ ತಾಲೂಕ ಘಟಕದ ಪದಾಧಿಕಾರಿಗಳು ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ತಹಶೀಲದಾರ ಮುಖಾಂತರ ರಾಜ್ಯ ಸರಕಾರಕ್ಕೆ ಮನವಿ ಸಲ್ಲಿಸಿದರು.**

**ಗೋಕಾಕ:** ಕರ್ನಾಟಕ ರಾಜ್ಯ ಪೌರ ನೀರು ಸರಬರಾಜು ನೌಕರರ ಮಹಾ ಸಂಘ ತಾಲೂಕ ಘಟಕದ ಪದಾಧಿಕಾರಿಗಳು ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ತಹಶೀಲದಾರ ಮುಖಾಂತರ ರಾಜ್ಯ ಸರಕಾರಕ್ಕೆ ಮನವಿ ಸಲ್ಲಿಸಿದರು.

ನೀರು ಸರಬರಾಜು ನೌಕರರು ಪೌರ ಕಾರ್ಮಿಕರೆ ಆಗಿದ್ದು, ನೇರ ನೇಮಕಾತಿ ಮತ್ತು ಸೇವಾ ಭದ್ರತೆಯನ್ನು ನೀಡಬೇಕು. ಸಿ ಮತ್ತು ಆರ್‌ನಲ್ಲಿ ಮಂಜುರಾತಿ ಪಡೆದ ಹುದ್ದೆಗಳಿಗೆ ನೌಕರರನ್ನು ಭರ್ತಿ ಮಾಡಬೇಕು. ಹಲವಾರು ಬಾರಿ ಮನವಿ ಸಲ್ಲಿಸಿದರು ಸರಕಾರ ಬೇಡಿಕೆಗಳನ್ನು ಈಡೇರಿಸಿಲ್ಲ. ಮಹಾ ಸಂಘದಿಂದ ದಿ.6ರಂದು ಬೆಂಗಳೂರಿನ ಫ್ರೀಡಂ ಪಾರ್ಕನಲ್ಲಿ ಅನಿರ್ಧಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ಮನವಿಯಲ್ಲಿ ತಿಳಿಸಿದರು. ಈ ಸಂದರ್ಭದಲ್ಲಿ ಆನಂದ ಕಪರಟ್ಟಿ, ಶೆಟ್ಟೆಪ್ಪ ಕಳ್ಳಿಮನಿ, ಅರುಣ ಮಾದರ, ಲಕ್ಷ್ಮೀಕಾಂತ ಹಿರಗಣ್ಣವರ, ಮಾರುತಿ ಪ್ರಭುಗೋಳ, ಸತೀಶ ಮಾಸ್ತಮರಡಿ, ಉಮಾಜಿ ಬೆಳಗಾಂವಕರ, ಶ್ರೀಕಾಂತ ಕಳ್ಳಿಮನಿ, ಯಲ್ಲಪ್ಪ ಆನೆಗೌಡರ, ಮಾರುತಿ ಪೂಜೇರಿ, ಕಾಡಪ್ಪ ಹುಲಿಕಟ್ಟಿ, ಪ್ರಶಾಂತ ಕೊಣ್ಣೂರ, ಪರಶುರಾಮ ಪ್ರಭುಗೋಳ, ಜಗದೀಶ ತೆಳಗಿನಮನಿ ಸೇರಿದಂತೆ ಅನೇಕರು ಇದ್ದರು.

# ಗಾಂಧೀಜಿ-ಶಾಸ್ತ್ರೀ ಜಯಂತಿ ಆಚರಣೆ

ಗೋಕಾಕ: ಬಿಜೆಪಿ ನಗರ ಹಾಗೂ ಗ್ರಾಮೀಣ ಮಂಡಲದ ವತಿಯಿಂದ ಮಹಾತ್ಮಾ ಗಾಂಧಿ ಹಾಗೂ ಲಾಲಬಹದ್ದೂರ ಶಾಸ್ತೀ ಜಯಂತಿಯನ್ನು ಶಾಸಕ ರಮೇಶ ಜಾರಕಿಹೊಳಿ ಅವರ ಗೃಹಕಚೇರಿಯಲ್ಲಿ ಆಚರಿಸಲಾಯಿತು.

ಮಹಾತ್ಮಾ ಗಾಂಧಿ ಹಾಗೂ ಲಾಲಬಹದ್ದೂರ ಶಾಸ್ತೀಯವರ ಭಾವಚಿತ್ರಕ್ಕೆ ಶಾಸಕ ರಮೇಶ ಜಾರಕಿಹೊಳಿ ಪೂಜೆ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಬಿಜೆಪಿ ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮನ್ನವರ, ಜಿಪಂ ಮಾಜಿ ಸದಸ್ಯರಾದ ಟಿ ಆರ್ ಕಾಗಲ, ಎಮ್ ಎಲ್ ತೋಳಿನವರ, ಮುಖಂಡರಾದ ಶಾಮಾನಂದ ಪೂಜೇರಿ, ಭೀಮಗೌಡ ಪೋಲಿಸಗೌಡರ, ಲಕ್ಕಪ್ಪ ತಹಶೀಲದಾರ, ಲಕ್ಷ್ಮಣ ತಳ್ಳಿ, ರಾಜು ಹೆಗ್ಗನ್ನವರ, ಬಾಳಪ್ಪ ತೋಟಗಿ, ಶಕೀಲ ಧಾರವಾಡಕರ, ಸುರೇಶ ಪತ್ತಾರ, ಬಸವರಾಜ ಹಿರೇಮಠ, ಶಫಿ ಜಮಾದಾರ, ರಂಗಪ್ಪ ನಂದಿ, ಲಕ್ಕಪ್ಪ ಭಂಡಿ ಸೇರಿದಂತೆ ಅನೇಕರು ಇದ್ದರು.



**ಗೋಕಾಕ: ಬಿಜೆಪಿ ನಗರ ಹಾಗೂ ಗ್ರಾಮೀಣ ಮಂಡಲದ ವತಿಯಿಂದ ಮಹಾತ್ಮಾ ಗಾಂಧಿ ಹಾಗೂ ಲಾಲಬಹದ್ದೂರ ಶಾಸ್ತೀ ಜಯಂತಿಯನ್ನು ಶಾಸಕ ರಮೇಶ ಜಾರಕಿಹೊಳಿ ಅವರ ಗೃಹಕಚೇರಿಯಲ್ಲಿ ಆಚರಿಸಲಾಯಿತು.**



## ಗಾಂಧೀಜಿ-ಶಾಸ್ತ್ರೀಜಿ ತತ್ವಾದರ್ಶ ವಿಶ್ವಮಾನ್ಯ: ಬಂಡೆ

**ಇಂಡಿ:** ಗಾಂಧಿ–ಶಾಸ್ತ್ರಿ ಅವರ ಆದರ್ಶಗಳು ಭಾರತೀಯರ ನೈತಿಕ, ಸಾಮಾಜಿಕ ಮತ್ತು ರಾಜಕೀಯ ನಾಯಕತ್ವಕ್ಕೆ ಸ್ಫೂರ್ತಿಯಾಗಿವೆ. ಅವರ ತತ್ವಾದರ್ಶಗಳು ವಿಶ್ವಮಾನ್ಯವಾಗಿದ್ದು, ಅವುಗಳ ಪಾಲನೆ ಇಂದಿನ ಪೀಳಿಗೆಗೆ ಪ್ರಸ್ತುತವಾಗಿವೆ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಗುರುವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಕೆಬಿಎಸ್, ಕೆಜಿಎಸ್, ಯುಬಿಎಸ್ ಶಾಲೆಯಲ್ಲಿ ಹಮ್ಮಿಕೊಂಡ ಗಾಂಧೀಜಿ–ಶಾಸ್ತ್ರೀಜಿ ಅವರ ಜಯಂತಿ ಆಚರಣೆಯನ್ನು ಉದ್ಧೇಶಿಸಿ ಅವರು ಮಾತನಾಡಿದರು.

ಅಹಿಂಸೆಯ ಮೂಲಕ ಮಹಾತ್ಮಾ ಗಾಂಧೀಜಿ ಅವರು ಸ್ವಾತಂತ್ರ್ಯಕ್ಕಾಗಿ ಹೋರಾಡಿ ಪ್ರಾಣತ್ಯಾಗ ಮಾಡಿದ ಶಾಂತಿಯ ದೂತ. ಗಾಂಧೀಜಿಯವರ ತತ್ವಾದರ್ಶಗಳು ಮಕ್ಕಳು ಜೀವನದಲ್ಲಿ ಅಳವಡಿಸಿಕೊಂಡು ಭವಿಷ್ಯದಲ್ಲಿ ಉತ್ತಮ ನಾಗರಿಕರಾಗಿ ದೇಶಕ್ಕೆ ದಾರಿದೀಪವಾಗಬೇಕೆಂದು ಹೇಳಿದರು.ಶಿಕ್ಷಕ ಎಸ್ ಆರ್ ಚಾಳೇಕರ ಮಾತನಾಡಿ, ಸತ್ಯ, ಅಹಿಂಸೆ, ಸರಳತೆ, ರಾಷ್ಟ್ರೀಯತೆ, ಸಾಮಾಜಿಕ ನ್ಯಾಯ ಮತ್ತು ಸ್ವಾವಲಂಬನೆಯಂತಹ ಆದರ್ಶಗಳು ಇಂದಿನ ಯುವ ಜನಾಂಗದ ಬದುಕನ್ನು ರೂಪಿಸುತ್ತವೆ. ಗಾಂಧಿಯವರು ಸರಳ ಜೀವನ ಮತ್ತು ಉನ್ನತ ಚಿಂತನೆಗಳನ್ನು ನಂಬಿದ್ದರು ಎಂದು ಹೇಳಿದರು. ಮುಖ್ಯ ಶಿಕ್ಷಕರಾದ ಅನಿಲ ಪತಂಗಿ, ವ್ಹಿ ವೈ ಪತ್ತಾರ ಹಾಗೂ ಶಿಕ್ಷಕರಾದ ಎಸ್ ಎಂ ಪಂಚಮುಖಿ, ಎಸ್ ಎನ್ ಡಂಗಿ, ಜೆ ಸಿ ಗುಣಕಿ, ಶ್ರದ್ಧಾ ಬಂಕಲಗಾ, ಸುಮಂಗಲಾ ಬೇನೂರ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಮಹಾತ್ಮ ಗಾಂಧಿ ಜಯಂತಿ ಆಚರಣೆ

**ಕೊಪ್ಪಳ:** ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಕೊಪ್ಪಳ ಜಿಲ್ಲಾ ಕಛೇರಿಯಲ್ಲಿ ಗುರುವಾರ ಮಹಾತ್ಮ ಗಾಂಧೀಜಿ ಜಯಂತಿಯನ್ನು ಆಚರಿಸಲಾಯಿತು. ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿ ಕೆ.ವೀರೇಶ ಅವರು ಗಾಂಧೀಜಿಯವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಿದರು. ಈ ಸಂದರ್ಭದಲ್ಲಿ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಕೊಪ್ಪಳ ಕಛೇರಿಯ ಎಲ್ಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು.





**ದಸರಾ ಹಬ್ಬದ ನಿಮಿತ್ತ ಬನಹಟ್ಟಿಯ ಸಾಯಿ ಪ್ಲೇ ಹೋಂನಲ್ಲಿ ಪುಟ್ಟ ಕಂದಮ್ಮಗಳು ನವದುರ್ಗಿಯರ ವೇಷದಲ್ಲಿ ರಮಣೀಯವಾಗಿ ಕಂಡು ಬಂದಿದ್ದು ಹೀಗೆ.**

## ಶೇಂಗಾ ಖರೀದಿ ಕೇಂದ್ರ ಆರಂಭ: ನೋಂದಣಿಗೆ ಮನವಿ

**ಕೊಪ್ಪಳ:** 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ. ಗುಣಮಟ್ಟದ ಶೇಂಗಾವನ್ನು ಪ್ರತಿ ಕ್ವಿಂಟಾಲ್‌ಗೆ ರೂ.7263/–ರಂತೆ ಗರಿಷ್ಠ 61,148 ಮೆಟ್ರಿಕ್ ಟನ್ ಎಫ್.ಎ.ಕ್ಯೂ. ಗುಣಮಟ್ಟದ ಶೇಂಗಾವನ್ನು ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಕೊಪ್ಪಳ ಜಿಲ್ಲೆಯ ರೈತರಿಂದ ಖರೀದಿಸುವ ಕುರಿತು ಸೆಪ್ಟೆಂಬರ್ 30 ರಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಸಭೆಯಲ್ಲಿ ಶೇಂಗಾ ಖರೀದಿ ನೋಂದಣಿ ಕೇಂದ್ರಗಳನ್ನು ಪ್ರಾರಂಭಿಸಲು ತೀರ್ಮಾನಿಸಲಾಗಿದೆ.

ಖರೀದಿ ಕೇಂದ್ರಗಳಾದ ಕೆಓಎಫ್ ಅಡಿಯಲ್ಲಿ ಅಳವಂಡಿಯ ಒಜಿಸಿಎಸ್ ಅಳವಂಡಿ, ಯಲಬುರ್ಗಾದ ಒಜಿಸಿಎಸ್ ಬೇವೂರು ಹಾಗೂ ನಾಗನಕಲ್‌ನ ಒಜಿಸಿಎಸ್ ನಾಗನಕಲ್‌ನ ನೋಂದಣಿ ಕೇಂದ್ರದಲ್ಲಿ ರೈತರು ನೋಂದಣಿ ಮಾಡಿಕೊಳ್ಳಬಹುದು.

ಖರೀದಿ ಕೇಂದ್ರಗಳ ವ್ಯವಸ್ಥಿತ ನಿರ್ವಹಣೆಗೆ ಕೊಪ್ಪಳ ತಾಲ್ಲೂಕಿನ ಅಳವಂಡಿ ಖರೀದಿ ಕೇಂದ್ರದ ನೋಡಲ್ ಅಧಿಕಾರಿಗಳಾಗಿ ಕೊಪ್ಪಳ ಎಪಿಎಂಸಿ ಕಾರ್ಯದರ್ಶಿ ಸಿದ್ದಯ್ಯಸ್ವಾಮಿ, ಮೊ.ಸಂ: 9902224089, ಯಲಬುರ್ಗಾ ತಾಲ್ಲೂಕಿನ ಬೇವೂರು ಖರೀದಿ ಕೇಂದ್ರಗಳ ನೋಡಲ್ ಅಧಿಕಾರಿಗಳಾಗಿ ಯಲಬುರ್ಗಾ ಎಪಿಎಂಸಿಯ ಕಾರ್ಯದರ್ಶಿ ಗುರುಪ್ರಸಾದ ಗುಡಿ, ಮೊ.ಸಂ: 9972054874, ಕಾರಟಗಿ ತಾಲ್ಲೂಕಿನ ನಾಗನಕಲ್ ಖರೀದಿ ಕೇಂದ್ರದ ನೋಡಲ್ ಅಧಿಕಾರಿಗಳಾಗಿ ಕಾರಟಗಿ ಎಪಿಎಂಸಿಯ ಸಹಾಯಕ ಕಾರ್ಯದರ್ಶಿ ಹರೀಶ ಪತ್ತಾರ, ಮೊ.ಸಂ: 9060893320 ಇವರನ್ನು ನಿಯೋಜಿಸಲಾಗಿದೆ.

ಪ್ರತಿ ಎಕರೆಗೆ 3 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಠ 15 ಕ್ವಿಂಟಾಲ್‌ನಂತೆ ಶೇಂಗಾ ಉತ್ಪನ್ನವನ್ನು ಖರೀದಿಸಲಾಗುತ್ತದೆ. ಎಫ್.ಎ.ಕ್ಯೂ. ಗುಣಮಟ್ಟದ ಶೇಂಗಾವನ್ನು ಮಾತ್ರ ಖರೀದಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟ ನಿಯಮಿತ ರಾಯಚೂರು, ವಿಭಾಗೀಯ ಕಛೇರಿ, ಕೊಪ್ಪಳ ಮೊ.ಸಂ: 9591812142 ಇವರನ್ನು ಸಂಪರ್ಕಿಸಬಹುದು ಎಂದು ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ‘ಕೈ’ ಪಾಳಯದಲ್ಲಿ ಭುಗಿಲೆದ್ದ ಭಿನ್ನಮತ: ಮಾಜಿ ಸಚಿವೆ ಉಮಾಶ್ರೀ ವಿರುದ್ಧ ಕಿಡಿ

# ಪ್ರಾಧಿಕಾರ ಕಚೇರಿ ಮುಂದೆ ಹೈಡ್ರಾಮಾ

**ರಬಕವಿ–ಬನಹಟ್ಟಿ:** ನಗರ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆಯ್ಕೆ ಕುರಿತಾಗಿ ಬನಹಟ್ಟಿಯ ಪ್ರಾಧಿಕಾರ ಕಾರ್ಯಾಲಯದೆದುರು ಮುಖಂಡರ ನಡುವಿದ್ದ ಭಿನ್ನಾಭಿಪ್ರಾಯ ಭುಗಿಲೆದ್ದು ಕೆಲ ಕಾಲ ಉದ್ವಿಗ್ನ ವಾತಾವರಣ ಸೃಷ್ಟಿಯಾಗಲು ಕಾರಣವಾಯಿತು.

ಪ್ರಾಧಿಕಾರ ಅಧ್ಯಕ್ಷ ಸ್ಥಾನ ಪಡೆದ ದಾನಪ್ಪ ಹುಲಜತ್ತಿಯವರ ಪದಗ್ರಹಣಕ್ಕೆ ಆಗಮಿಸಿದ್ದ ವಿಧಾನ ಪರಿಷತ್ ಸದಸ್ಯೆ ಉಮಾಶ್ರೀಯವರನ್ನು ನೂರಾರು ಕಾಂಗ್ರೆಸ್ ಕಾರ್ಯಕರ್ತರು ಘೇರಾವ್ ಹಾಕಿ, ಬಹಿರಂಗವಾಗಿ ಆಕ್ರೋಶ ಹೊರಹಾಕಿದರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಬಿಜೆಪಿಯ ಸಿದ್ದು ಸವದಿ ವಿರುದ್ಧ ಪರಾಭವಗೊಂಡಿರುವ ಸಿದ್ದು ಕೊಣ್ಣೂರ ಕ್ಷೇತ್ರದ ಹೊಣೆ ಹೊತ್ತು ಪಕ್ಷ ಸಂಘಟಿಸುತ್ತಿದ್ದಾರೆ. ಹೀಗಿರುವಾಗ ಕ್ಷೇತ್ರದಲ್ಲಿನ ಸ್ಥಾನಗಳ ಹಂಚಿಕೆಯಲ್ಲಿ ಯಾರನ್ನೂ ಗಮನಕ್ಕೆ ತರದೆ ಆಯ್ಕೆ ನಡೆಯುತ್ತಿರುವದನ್ನು ಕಾಂಗ್ರೆಸ್ ಕಾರ್ಯಕರ್ತರು ಖಂಡಿಸಿ ಆಕ್ರೋಶ ಹೊರಹಾಕಿದರು.

ಯಾರಿಗೂ ಯಾರೂ ಶಾಶ್ವತವಲ್ಲ. ಅಧಿಕಾರ ಯಾವಾಗ ಬೇಕಾದರೂ ಹೋಗಬಹುದು. ಆದರೆ, ನಮ್ಮನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವದಿಲ್ಲ. ಈ ಬಗ್ಗೆ ಪಕ್ಷದ ವರಿಷ್ಠರೊಂದಿಗೆ ಪ್ರತ್ಯೇಕವಾಗಿ ಭೆಟ್ಟಿ ಮಾಡಿ ಚರ್ಚೆ ಮಾಡುತ್ತೇವೆಂದು ಬ್ಲಾಕ್ ಅಧ್ಯಕ್ಷ ಶೇಖರ ಹಕ್ಕಲದಡ್ಡಿ ತಿಳಿಸಿದರು. ಕ್ಷೇತ್ರದಲ್ಲಿ ಉಮಾಶ್ರೀಯವರಿಂದ ಯಾವದೇ ಕಾರ್ಯಚಟುವಟಿಕೆಯಿಲ್ಲ. ಪರಾಜಿತಗೊಂಡಿರುವ ಸಿದ್ದು ಕೊಣ್ಣೂರ ಕ್ಷೇತ್ರ ಮುನ್ನಡೆಸಿಕೊಂಡು ಹೋಗುತ್ತಿದ್ದಾರೆ. ಕ್ಷೇತ್ರದಲ್ಲಿನ ಆಗು–ಹೋಗುಗಳೊಂದಿಗೆ ಪಕ್ಷದ ಸ್ಥಾನಗಳನ್ನು ಹೊಂದಿರುವ ಮುಖಂಡರಿಗೂ ಯಾವದೇ ಮಾಹಿತಿಯಿಲ್ಲದೆ ಸ್ಥಳೀಯ ಸಂಸ್ಥೆಗಳ ಸ್ಥಾನಗಳು ಯಾವದೇ ಸಕ್ರಿಯವಲ್ಲದವರ ಪಾಲಾಗುತ್ತಿವೆ. ಇದರಿಂದ ಸಾಕಷ್ಟು ಹಿರಿಯ ಹಾಗು ಯುವ ಕಾರ್ಯಕರ್ತರಿಗೆ ಬೇಸರ ತರುವಲ್ಲಿ ಕಾರಣವಾಗಿದೆಯೆಂದು ಕಿರಣ ಕರಲಟ್ಟಿ ತಿಳಿಸಿದರು. ವಿಧಾನ ಪರಿಷತ್ ಸದಸ್ಯೆ ಉಮಾಶ್ರೀಯವರು ನಮ್ಮನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುತ್ತಿಲ್ಲ. ಮುಂದೆ ಜಿಪಂ, ತಾಪಂ ಸೇರಿದಂತೆ ಸ್ಥಳೀಯ ಸಂಸ್ಥೆ ಚುನಾವಣೆ ಬರಲಿದೆ. ಚುನಾವಣೆಯಲ್ಲಿ ಗೆಲ್ಲಿಸಬೇಕಾದರೆ ಎಲ್ಲರೂ ಒಟ್ಟಾಗಿ ಹೋಗಬೇಕು. ಅದರೆ, ನಮ್ಮ ಬೇಡಿಕೆಗಳಿಗೆ ಪಕ್ಷದಲ್ಲಿ ಸರಿಯಾಗಿ ಸ್ಪಂದನೆಯಾಗುತ್ತಿಲ್ಲ. ಯಾವುದಕ್ಕೂ ನಮ್ಮನ್ನು ಗಣನೆಗೆ ತೆಗೆದುಕೊಳ್ಳುತ್ತಿಲ್ಲವೆಂದು ನೂರಾರು ಕಾರ್ಯಕರ್ತರು ತೀವ್ರ ಆಕ್ರೋಶ ಹೊರಹಾಕಿದರು.

ಇದೇ ಸಂದರ್ಭ ಉಮಾಶ್ರೀ ಮಾತನಾಡಿ, ಪಕ್ಷದಲ್ಲಿ ಶ್ರಮಿಸಿದ ನಿಷ್ಠಾವಂತ ಕಾರ್ಯಕರ್ತರನ್ನು ಪಕ್ಷ ಎಂದಿಗೂ ಕೈ ಬಿಡುವದಿಲ್ಲ. ಪ್ರಾಮಾಣಿಕ ಪ್ರಯತ್ನದಿಂದ ದಾನಪ್ಪ ಹುಲಜತ್ತಿಯವರಿಗೆ ಪ್ರಾಧಿಕಾರ ಅಧ್ಯಕ್ಷ ಸ್ಥಾನ ದೊರೆತಿದೆ. ಅದರಂತೆ ಮುಂದೆಯೂ ಎಲ್ಲ ಕಾರ್ಯಕರ್ತರಿಗೆ ಸೂಕ್ತ ಸ್ಥಾನ–ಮಾನ ದೊರೆಯಲಿದೆ ಎಂದರು.



### ಪೋಲೀಸ್ ಬಂದೋಬಸ್ತ್

ಪ್ರತಿಭಟನೆಯ ಕೂಗಿನ ಮುಂಜಾಗ್ರತಾ ಕ್ರಮವಾಗಿ ಸಿಪಿಐ ಸಂಜಯ ಬಳಿಗಾರ ಹಾಗು ಪಿಎಸ್‌ಐ ಶಾಂತಾ ಹಳ್ಳಿ ನೇತೃತ್ವದಲ್ಲಿ ಪೊಲೀಸ್ ಬಿಗಿ ಬಂದೋಬಸ್ತ್ ಒದಗಿಸಲಾಗಿತ್ತು. ಪ್ರಾಧಿಕಾರ ಕಚೇರಿಯಿಂದ ಉಮಾಶ್ರೀಯವರು ಹೊರಬರುತ್ತಿದ್ದಂತೆ ಪ್ರತಿಭಟನಾನಿರತ ಕಾರ್ಯಕರ್ತರು ವಿರೋಧದದ ಕೂಗಿನಿಂದ ನಡೆಯನ್ನು ಖಂಡಿಸಿದರು.

# ಪದವೀಧರ ಮತಕ್ಷೇತ್ರದ ಮತದಾರರ ನೋಂದಣಿ ಆರಂಭ



**ಕಾರವಾರ:** ಕರ್ನಾಟಕ ವಿಧಾನ ಪರಿಷತ್ತಿನ ಪಶ್ಚಿಮ ಪದವೀಧರ ಮತಕ್ಷೇತ್ರಕ್ಕೆ 2026 ರಲ್ಲಿ ಚುನಾವಣೆ ನಡೆಯಲ್ಲಿದ್ದು, ಈ ಕುರಿತು ಮತದಾರರ ಪಟ್ಟಿ ತಯಾರಿಕೆಗೆ ಸಿದ್ಧತೆ ಪ್ರಾರಂಭವಾಗಿದ್ದು, ಅರ್ಹ ಮತದಾರರು ಸೇರ್ಪಡೆಗೆ ಇದೀಗ ಅವಕಾಶ ಕಲ್ಪಿಸಲಾಗಿದೆ. ಮತದಾರರ ಪಟ್ಟಿಯು ಕ್ರಮಬದ್ಧವಾಗಿ ಮತ್ತು ನ್ಯಾಯಬದ್ಧವಾಗಿ ತಯಾರಿಸಲು ರಾಜಕೀಯ ಪಕ್ಷಗಳು, ಸಾರ್ವಜನಿಕರು ಸಹಕಾರ ನೀಡಬೇಕೆಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮತದಾರರ ಪಟ್ಟಿ ತಯಾರಿಕೆ ಕುರಿತು ಸೂಚನೆಗಳ ಪ್ರತಿಯನ್ನು ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ನೀಡಲಾಗಿದೆ. ಈ ಕುರಿತು ಅರ್ಹ ಪದವೀಧರ ಮತದಾರರಲ್ಲಿ ಜಾಗೃತಿ ಮೂಡಿಸಿ ನಿಯಮಾನುಸಾರ ಸದರಿ ಮತದಾರರ ಪಟ್ಟಿಗೆ ಸೇರ್ಪಡೆ ಆಗುವಂತೆ ಮಾಹಿತಿ ನೀಡಬೇಕು, ಮತದಾರರ ಪಟ್ಟಿ ಸೇರ್ಪಡೆಗೆ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವ ನಮೂನೆಯನ್ನು ಜಿಲ್ಲೆಯ ಎಲ್ಲಾ ತಹಶೀಲ್ದಾರ ಕಚೇರಿಗಳಲ್ಲಿ ಲಭ್ಯವಿದೆ ಎಂದರು.

ಮತದಾರರ ಪಟ್ಟಿಗೆ ಸೇರ್ಪಡೆಯಾಗುವ ನಮೂನೆ-18 ರ ಅರ್ಜಿಯನ್ನು ಸಲ್ಲಿಸುವ ಕೊನೆಯ ನವೆಂಬರ್ 6 ಆಗಿದ್ದು, ಕರಡು ಮತದಾರರ ಪಟ್ಟಿಯನ್ನು ನವೆಂಬರ್ 25 ರಂದು ಪ್ರಕಟಿಸಿಲಾಗುವುದು, ಡಿಸೆಂಬರ್ 10 ರ ವರೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶವಿದ್ದು, ಡಿಸೆಂಬರ್ 30 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು ಎಂದರು.

ಭಾರತದ ಪ್ರಜೆಯಾಗಿರುವ, ಆಯಾ ಮತ ಕ್ಷೇತ್ರದೊಳಗಡೆ ಸಾಮಾನ್ಯವಾಗಿ ವಾಸಿಸುತ್ತಿರುವ ಹಾಗೂ 1 ನೇ ನವಂಬರ್ 2025 ಕ್ಕೆ ಮುಂಚೆ (ಅರ್ಹತಾ ದಿನಾಂಕ) ಕನಿಷ್ಠ 3 ವರ್ಷಗಳಷ್ಟು ಮೊದಲು ಭಾರತದಲ್ಲಿರುವ ಯಾವುದಾದರೊಂದು ವಿಶ್ವವಿದ್ಯಾಲಯದ ಪದವೀಧರನಾಗಿರುವ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರುವ ಪ್ರತಿಯೊಬ್ಬ ವ್ಯಕ್ತಿಯೂ ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹರಾಗಿದ್ದು , ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕುಗಳ ತಹಶೀಲ್ದಾರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಹಾಗೂ ಜಿಲ್ಲೆಯ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಇದ್ದರು.

# ಗಾಂಧೀಜಿ ಸತ್ಯಾಗ್ರಹದಿಂದ ಸ್ವಾತಂತ್ರ ತಂದುಕೊಟ್ಟ ಮಹಾತ್ಮರು

**ಗದಗ:** ಮಹಾತ್ಮ ಗಾಂಧೀಜಿಯವರು ಅಹಿಂಸೆ ಮತ್ತು ಸತ್ಯಾಗ್ರಹದ ಅಸ್ತ್ರದಿಂದ ದೇಶಕ್ಕೆ ಸ್ವಾತಂತ್ರ ಯ ತಂದುಕೊಟ್ಟ ಮಹಾತ್ಮರು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಬಣ್ಣಿಸಿದರು. .ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರುಗಳ ಸಹಯೋಗದಲ್ಲಿ ಮಹಾತ್ಮ ಗಾಂಧೀಜಿಯವರ 156 ನೇ ಜಯಂತಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರೀಜಿಯವರ 121ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗಾಂಧೀಜಿಯವರು ಇಂಗ್ಲೆಂಡಿನಲ್ಲಿ ಕಾನೂನು ಅಧ್ಯಯನ ಮಾಡಿ ನಂತರ ದಕ್ಷಿಣ ಆಫ್ರಿಕಾದಲ್ಲಿ ವಕೀಲ ವೃತ್ತಿಯಲ್ಲಿದ್ದಾಗ ಸವರ್ಣೀಯರ ದಬ್ಬಾಳಿಕೆ ಹಾಗೂ ಅಸ್ಪೃಶ್ಯತೆಯನ್ನು ಕಂಡು ಮರುಗಿದರು. ಭಾರತೀಯ ರಾಷ್ಟ್ರೀಯ ಕಾಂಗೆಸ್‌ನ ನಾಯಕತ್ವ ವಹಿಸಿದ ಬಳಿಕೆ ಬಡತನ ನಿವಾರಣೆ, ಅಸ್ಪ್ರಶ್ಯತೆ ವಿರುದ್ಧ ಹೋರಾಡಿದರು. ತಮ್ಮ ದೇಶದಲ್ಲಿಯೇ ಇರುವ ಸಾಮಾಜಿಕ ಸಮಸ್ಯೆಗಳಾದ ಅಸ್ಪೃಶ್ಯತೆ ಹಾಗೂ ಪರಕೀಯರ ದಬ್ಬಾಳಿಕೆ ವಿರುದ್ಧ ಹೋರಾಟ ನಡೆಸಿದರು. ಸತ್ಯ ಮತ್ತು ಸರಳತೆ ಇವರ ವಿಶೇಷತೆಗಳಾಗಿದ್ದವು ಎಂದರು.

ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿದ ಅವರು ದೇಶಗಳಲ್ಲಿನ ಬಹಳಷ್ಟು ಕ್ಲಿಷ್ಟಕರ ಸಮಸ್ಯೆಗಳನ್ನೂ ಸಹ ಮಾತುಕತೆಯಿಂದ ಬಗೆಹರಿಸಬಹುದಾಗಿದೆ ಎಂದು ಸಮಾಜಕ್ಕೆ ತಿಳಿಸಿದ ಮಹಾತ್ಮ ಗಾಂಧಿಜಿಯವರು ಎಂದರು.

ಲಾಲ್‌ಬಹದೂರ್ ಶಾಸ್ತ್ರಿಯವರು ಭಾರತ ದೇಶಕ್ಕೆ ಸ್ವಾತಂತ್ರ ಯ ಸಿಕ್ಕ ನಂತರ ಪ್ರಧಾನಿಯಾಗಿದ್ದಾಗ ದೇಶದಲ್ಲಿ ಬರಗಾಲವಿದ್ದ ಕಾರಣದಿಂದ ದೇಶದ ಜನತೆ ಆಹಾರದ ಕೊರತೆ ಅನುಭವಿಸುತ್ತಿರುವುದರಿಂದ ವಾರದಲ್ಲಿ ಒಂದು ದಿವಸ ದೇಶದ ಜನರೆಲ್ಲರೂ ಉಪವಾಸ ಮಾಡಬೇಕು ಹಾಗೂ ಸ್ವತ: ಲಾಲ್ ಬಹದ್ದೂರ ಶಾಸ್ತ್ರೀಜಿಯವರು ಕೂಡ ಉಪವಾಸ ಕೈಗೊಂಡು ಸಮಸ್ಯೆಗೆ ಪರಿಹಾರ ಕಂಡುಕೊಂಡರು ಎಂದು ವಿವರವಾಗಿ ಜಿಲ್ಲಾಧಿಕಾರಿ ತಿಳಿಸಿಕೊಟ್ಟರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾದಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ಜಿಲ್ಲಾ ಪೊಲೀಸ ವರಿಷ್ಠಾದಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ನಗರಾಭಿವೃದ್ಧಿ ಪ್ರಾದಿಕಾರದ ಸದಸ್ಯ ಬಸವರಾಜ ಕಡೆಮನಿ, ತಾಲೂಕಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರುಡಿ, ಸರ್ಕಾರಿ ನೌಕರರ ಜಿಲ್ಲಾಧ್ಯಕ್ಷ ಡಾ.ಬಸವರಾಜ ಬಳ್ಳಾರಿ, ಎಂ.ಜಿ.ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯದ ಕನ್ನಡ ಸಹಾಯಕ ಪ್ರಾಧ್ಯಾಪಕ ಚಂದ್ರಪ್ಪ ಬಾರಂಗಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ **ಸಹಾಯಕ ನಿರ್ದೇಶಕ ವಸಂತ** ಮಡ್ಲೂರ, ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಬಸನಗೌಡ್ರ ಕೋಟೂರ ಸೇರಿದಂತೆ ಶಾಲಾ ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು ಹಾಜರಿದ್ದರು. ಕಲಾವಿದ ಡಾ. ವೆಂಕಟೇಶ ಅಲ್ಕೋಡ ಅವರು ಮಹಾತ್ಮ ಗಾಂಧೀಜಿಯವರ ಪ್ರಿಯ ಭಜನೆ ಗೀತೆಗಳನ್ನು ಪ್ರಸ್ತುತಪಡಿಸಿದರು. ನಾಡಗೀತೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮದಲ್ಲಿ ಪ್ರೊ. ಬಾಹುಬಲಿ ಜೈನರ್ ಕಾರ್ಯಕ್ರಮ ನಿರ್ವಹಿಸಿದರು.



**ಪ್ರಬಂಧ ಸ್ಪರ್ಧೆ ವಿಜೇತರಿಗೆ ಸನ್ಮಾನ:** ಮಹಾತ್ಮ ಗಾಂಧೀಜಿಯವರ 156ನೇ ಜಯಂತಿ ಪ್ರಯುಕ್ತ ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ ಪ್ರಬಂಧ ಸ್ಪಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಿ ಸನ್ಮಾನಿಸಲಾಯಿತು. ಪ್ರೌಢಶಾಲಾ ವಿಭಾಗದಲ್ಲಿ ಕು. ಸೌಮ್ಯ ದೇವೆಂದ್ರಪ್ಪ ಮೆಣಸಿನಕಾಯಿ- ಪ್ರಥಮ , ಕು.ಸಮೀಕ್ಷಾ ಬ ಮೇಗಳಮನಿ- ದ್ವಿತೀಯ, ಕು. ಸೌಮ್ಯ ಶ ಜಗ್ಗಲ- ತೃತೀಯ. ಪದವಿ ಪೂರ್ವ ವಿಭಾಗದಲ್ಲಿ ಕು. ಐಶ್ವರ್ಯ ಎಂ. ತಮ್ಮಣ್ಣವರ ಪ್ರಥಮ, ಸಾಹಿಲ್ - ದ್ವಿತೀಯ , ಕು. ಅಕ್ಷತಾ ಮಲ್ಲಪ್ಪ ಹೂಗಾರ, ತೃತೀಯ. ಪದವಿ/ ಸ್ನಾತಕೋತ್ತರ ಪದವಿ ವಿಭಾಗದಲ್ಲಿ ಸಹನಾ ಹೆಬಸೂರ -ಪ್ರಥಮ, ಕೃಷ್ಣಾ ದೂರಪ್ಪನವರ- ದ್ವಿತೀಯ , ಕೀರ್ತಿ ಸಿ ಮಾನ್ವಿ, ತೃತೀಯ, ಸುಮಿತ್ರಾ ನಾ ಗವಾರಿ, ಚತುರ್ಥ.

**ಸಮೀಕ್ಷಾದಾರರಿಗೆ ಸನ್ಮಾನ** : ರಾಜ್ಯದಲ್ಲಿ ಜರುಗುತ್ತಿರಯವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಪೂರ್ಣಗೊಳಿಸಿದ ಗದಗ ತಾಲೂಕಿನ ಶಿಕ್ಷಕ/ ಶಿಕ್ಷಕಿಯರಾದ ಮಲ್ಲಮ್ಮ ಹೂಗಾರ, ಕಾಶಿಬಾಯಿ ಮದಿ, ಎಚ್.ಡಿ.ಕುರಿ, ಪ್ರದೀಪ ಚಿತ್ತರಗಿ, ಜಯಕುಮಾರ್, ರಂಗಪ್ಪನವರ, ಹುಸೇನಬಾದಶಾಹ ಮಂಗಳೂರ ಅವರನ್ನು ಜಿಲ್ಲಾಧಿಕಾರಿಗಳು ಸನ್ಮಾನಿನಿಸಿದರು



# ಗಾಂಧಿ ಪ್ರತಿಮೆಗೆ ಪುಷ್ಪಾರ್ಪಣೆ

**ಧಾರವಾಡ:** ಮಹಾತ್ಮ ಗಾಂಧೀಜಿ ಅವರ 156 ನೇ ಜಯಂತಿಯ ನಿಮಿತ್ಯ ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ವಾರ್ತಾ ಭವನದ ಮುಂಭಾಗದಲ್ಲಿರುವ ಮಹಾತ್ಮ ಗಾಂಧೀಜಿ ಅವರ ಪ್ರತಿಮೆಗೆ ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹಾಗೂ ನವಲಗುಂದ ಶಾಸಕ ಎನ್.ಎಚ್ ಕೋನರಡ್ಡಿ ಅವರು ಮಾಲಾರ್ಪಣೆ ಹಾಗೂ ಪುಷ್ಪಾರ್ಪಣೆ ಮಾಡಿ, ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಮಹಾಪೌರರಾದ ಜ್ಯೋತಿ ವಿನಯ ಪಾಟೀಲ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಗುಂಜನ ಆರ್ಯ, ಉಪ ಪೊಲೀಸ್ ಆಯುಕ್ತ ಮಹಾನಿಂಗ್ ನಂದಗಾಂವಿ, ಅಪರ ಜಿಲ್ಲಾಧಿಕಾರಿ ಗೀತಾ ಸಿ. ಡಿ, ತಹಸಿಲ್ದಾರ ಡಾ. ಡಿ.ಎಚ್.ಹೂಗಾರ, ಹು-ಧಾ ಮಹಾನಗರ ಪಾಲಿಕೆಯ ಸದಸ್ಯ ವಿಜಯಾನಂದ ಶೆಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಆಧ್ಯಾತ್ಮದಲ್ಲಿ ಭಾರತ ಜಗತ್ತಿಗೆ ವಿಶ್ವಗುರು

**ಜಮಖಂಡಿ:** ಸಂಸ್ಕೃತಿ, ಸಂಸ್ಕಾರ, ಆಚಾರ-ವಿಚಾರ, ಸಂಪ್ರದಾಯ, ಆಧ್ಯಾತ್ಮದಲ್ಲಿ ಜಗತ್ತಿನಲ್ಲಿ ಭಾರತ ವಿಶ್ವಗುರು ಆಗಿದೆ. ಹಬ್ಬಗಳನ್ನು ವೈಭವಪೂರಿತವಾಗಿ ಆಚರಿಸುವುದರಿಂದ ಅಧ್ಯಾತ್ಮದ ಬೇರು ಗಟ್ಟಿಯಾಗಿ ಉಳಿದಿದೆ ಎಂದು ಓಲೆಮಠದ ಪ.ಪೂ.ಆನಂದ ದೇವರು ಹೇಳಿದರು.

ನಗರದ ಹಜಾರೆ ಬಡಾವಣೆಯಲ್ಲಿರುವ ಶ್ರೀ ಲಕ್ಷ್ಮೀದೇವಿ ದೇವಸ್ಥಾನ ಆವರಣದಲ್ಲಿ ನಾಡಹಬ್ಬ ದಸರಾ ನವರಾತ್ರಿ ಉತ್ಸವದ ಸಮಾರೋಪ ಸಮಾರಂಭದಲ್ಲಿ ದಿವ್ಯಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು ಮನಷ್ಯರ ಕಿವಿಗಳಿಗೆ ಮಹತ್ವ ಬರುವುದು ಮಹಾತ್ಮರ ಬಂಗಾರದಂತಹ ಮಾತುಗಳು ಕೇಳಿದಾಗ, ಕಾಲುಗಳಿಗೆ ಮಹತ್ವ ಬರುವುದು ಹಿರಿಯರಿಗೆ ತಲೆಬಗ್ಗಿ ಗೌರವ ಸಲ್ಲಿಸಿದಾಗ ಜೀವನದ ಶೈಲಿಗೆ ಮಹತ್ವ ಬರಲಿದೆ. ದೇವತೆಗಳು ಒಂಬತ್ತು ಅವತಾರ ತಾಳಿ ಒಂಬತ್ತು ರಾಕ್ಷಸರನ್ನು ಸಂಹಾರ ಮಾಡಿದಂತೆ ನಮ್ಮೊಳಗಿನ ಕಾಮ, ಕ್ರೋಧ, ಮದ, ಮಾತ್ಸರ, ಲೋಭ, ಮೋಹ, ಆಸೆ ಹೀಗೆ ಒಂಬತ್ತು ದುರ್ಬುದ್ಧಿಗಳನ್ನು ಸಂಹಾರ ಮಾಡಿಕೊಳ್ಳಬೇಕು ಎಂದರು.



ಮನುಷ್ಯ ಈ ಆಧುನಿಕ ಕಾಲದಲ್ಲಿ ಪ್ರೀತಿ, ಪ್ರೇಮ, ಸ್ನೇಹ, ಸಂಬಂಧವನ್ನು ಕಳೆದುಕೊಳ್ಳುತ್ತಿದ್ದಾನೆ. ಮನುಷ್ಯತ್ವವನ್ನು ಕಳೆದುಕೊಂಡು ಬದುಕುತ್ತಿದ್ದಾನೆ. ಗೆದ್ದ ವ್ಯಕ್ತಿಗೆ ಚಪ್ಪಾಳೆ ತಟ್ಟುವುದಕ್ಕಿಂತ ಬಿದ್ದ ವ್ಯಕ್ತಿಯ ಕೈಹಿಡಿದು ಮೇಲೆತ್ತಬೇಕು. ಬಡವರಿಗೆ ಹಸಿದವರಿಗೆ ಅನ್ನ ನೀಡಬೇಕು. ಮಠದ ಸಂಸ್ಕೃತಿಯನ್ನು ಮಕ್ಕಳಿಗೆ ಕಲಿಸಬೇಕು. ದೇವಸ್ಥಾನ ಕಟ್ಟಿದ ಮಾತ್ರಕ್ಕೆ ದೇವಿಯ ಆಶೀರ್ವಾದ ದೊರೆಯುವುದು ಎಂಬುವುದು ಸುಳ್ಳು. ಇನ್ನೊಬ್ಬರ ಮನೆ ಮುರಿಯದ ಹಾಗೆ ಕೆಟ್ಟದ್ದನ್ನು ಮಾಡದೆ ಮನಸ್ಸಿಗೆ ನೋವಾಗದಂತೆ ನಡೆದುಕೊಂಡಾಗ ಮಾತ್ರ ಶ್ರೀದೇವಿ ಆಶೀರ್ವಸುತ್ತಾಳೆ ಎಂದರು.

ಪಾರ್ವತಿ ಗುಡುಗುಂಟಿ ಮಾತನಾಡಿ, ನವರಾತ್ರಿಯಲ್ಲಿ ಕೇವಲ ದಾಂಡಿಯಾದಲ್ಲಿ ಕುಣಿಯುವುದಲ್ಲ. ದೇವಸ್ಥಾನ ಮಂದಿರದಲ್ಲಿ ಧಾರ್ಮಿಕ ಕಾರ್ಯಕ್ರಮಗಳ ಹಮ್ಮಿಕೊಂಡು ಭಾಗಿಯಾಗುವುದರಿಂದ ನಮ್ಮಲ್ಲಿ ಸಕಾರಾತ್ಮಕ ಚಿಂತನೆ ಬೆಳೆಯುತ್ತವೆ. ಹೆಣ್ಣುಮಕ್ಕಳು ಸೇರಿಕೊಂಡು ಭಜನೆ, ಪುರಾಣ, ಪ್ರವಚನ ಕಾರ್ಯಕ್ರಮಗಳಲ್ಲಿ ಭಾಗಿಯಾದರೆ ಮನಸ್ಸು ಕೇಂದ್ರೀಕೃತಗೊಳಿಸುತ್ತದೆ. ಮಹಿಳೆಯರು ಸಹನೆಯಿಂದ ಧೈರ್ಯದಿಂದ ಬಾಳಿ ಬದುಕಬೇಕು ಎಂದರು. ನವರಾತ್ರಿ ಉತ್ಸವ ಸಮೀತಿ ಅಧ್ಯಕ್ಷೆ ಪದ್ಮಾ ಹಜಾರಿ ಮಾತನಾಡಿ, ಒಂಬತ್ತು ದಿನಗಳ ಕಾಲ ಕಾರ್ಯಕ್ರಮದ ಜವಾಬ್ದಾರಿ ಹೊತ್ತು ಮಾಡಿದ್ದಕ್ಕಾಗಿ ನನಗೆ ತುಂಬಾ ಸಂತೋಷವಾಗಿದೆ. ಮುಂಜಾನೆ ದೇವಿಗೆ ವಿಶೇಷ ಪೂಜೆ, ಅಲಂಕಾರ, ಕುಂಕುಮಾರ್ಚನೆ, ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಪ್ರತಿದಿನ ಸಾಯಂಕಾಲ ಸಂಗೀತ ಕಾರ್ಯಕ್ರಮ ಹಾಗೂ ದಾಂಡಿಯಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ವಿಜೇತರಾದ ಮಕ್ಕಳಿಗೆ ಪ್ರಶಸ್ತಿ ನೀಡಲಾಯಿತು. ಕಾರ್ಯಕ್ರಮದಲ್ಲಿ ಭಾಗಿಯಾದ ಮಹಿಳೆಯರಿಗೆ ಉಡಿ ತುಂಬುವುದು, ಆರತಿ, ಪ್ರಸಾದಸೇವೆ, ದಾಂಡಿಯಾ ಕಾರ್ಯಕ್ರಮಗಳು ಹಮ್ಮಿಕೊಳ್ಳಲಾಗಿತ್ತು ಎಂದರು.

ವೇದಿಕೆಯಲ್ಲಿ ರಜಪೂತ ಸಮಾಜದ ಮುಖಂಡರಾದ ವಿಲೇಶ ಹಜಾರೆ, ಅಂಜನಾ ಜಾಧವ ಇದ್ದರು. ರತ್ನಾ ಸಂಗಡಿಗರು ಪ್ರಾರ್ಥಿಸಿದರು. ಮೀನಾಕ್ಷಿ ಶೇಡಶಾಳ ಸ್ವಾಗತಿಸಿದರು. ಉಮಾ ಪಾಟೀಲ ನಿರೂಪಿಸಿದರು. ಶೋಭಾ ಕಾಗಿ ವಂದಿಸಿದರು.

# ನಾಳೆಯಿಂದ ಶ್ರೀಮದ್ಭಾಗವತ ಸಪ್ತಾಹ

**ಗೋಕಾಕ:** ಇಲ್ಲಿಯ ಶ್ರೀ ಅನಂತಾದ್ರೀಶ ಭಜನಾ ಮಂಡಳಿಯ ರಜತ ಮಹೋತ್ಸವದ ನಿಮಿತ್ಯ ಶ್ರೀಮದ್ಭಾಗವತ ಸಪ್ತಾಹವು ಡಾ.ಬೆ ನಾ ವಿಜಯೇಂದ್ರಾಚಾರ್ಯ ಇವರ ನೇತ್ರತ್ವದಲ್ಲಿ ದಿ. 5ರಿಂದ 11ರವರೆಗೆ ನಗರದ ಶ್ರೀನಗರದ ನವ ವೃಂದಾವನ ರಾಯರ ಮಠದಲ್ಲಿ ಬೆಳಿಗ್ಗೆ 8ರಿಂದ 9.30 ಮತ್ತು ಸಂಜೆ 6ರಿಂದ 8ರವರೆಗೆ ಜರುಗಲಿದ್ದು ಭಕ್ತಾಧಿಗಳು ಪಾಲ್ಗೊಂಡು ಶ್ರೀಹರಿ ವಾಯು ಗುರುಗಳ ಕೃಪೆಗೆ ಪಾತ್ರರಾಗಬೇಕೆಂದು ಪ್ರಕಟನೆಯಲ್ಲಿ ಮಂಡಳಿಯವರು ಕೋರಿದ್ದಾರೆ.

# ಖಾದಿ ಮರಾಟ, ವಸ್ತು ಪ್ರದರ್ಶನಕ್ಕೆ ಚಾಲನೆ



**ಕೊಪ್ಪಳ:** ಮಹಾತ್ಮ ಗಾಂಧಿ ಜಯಂತಿ ಪ್ರಯುಕ್ತ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ವತಿಯಿಂದ ಅಕ್ಟೋಬರ್ 02 ರಿಂದ 10 ರವರೆಗೆ ಕೊಪ್ಪಳ ಜಿಲ್ಲಾಡಳಿತ ಭವನದಲ್ಲಿ ಹಮ್ಮಿಕೊಳ್ಳಲಾದ ಖಾದಿ ಮರಾಟ ಮತ್ತು ವಸ್ತು ಪ್ರದರ್ಶನಕ್ಕೆ ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಹಾಗೂ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಅವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿ ಕೆ.ವೀರೇಶ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಈ ವಸ್ತು ಪ್ರದರ್ಶನದಲ್ಲಿ ಖಾದಿ ಬಟ್ಟೆಗಳು, ರೆಡಿಮೇಡ್ ಡ್ರೆಸ್ಸೆಸ್, ಜಮಖಾನ, ಕೈವಸ್ತ್ರ, ಟವಲುಗಳು ಮತ್ತು ಗ್ರಾಮೋದ್ಯೋಗ ಉತ್ಪನ್ನಗಳಾದ ಅಗರಬತ್ತಿ, ಸಾಬೂನು, ಜೇನುತುಪ್ಪ ಇತ್ಯಾದಿ ಉತ್ಪನ್ನಗಳು ಮಾರಾಟಕ್ಕಾಗಿ ಲಭ್ಯವಿರುತ್ತವೆ. ಆಸಕ್ತರು ಭಾಗವಹಿಸಬಹುದು ಎಂದು ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿಗಳು ತಿಳಿಸಿದ್ದಾರೆ.

# ಗಾಂಧೀಜಿ-ಶಾಸ್ತ್ರೀಯವರ ಸಂದೇಶ ಜೀವನದಲ್ಲಿ ಅಳವಡಿಸಿಕೊಳ್ಳಿ: ಜಿಲ್ಲಾಧಿಕಾರಿ

**ಗದಗ:** ರಾಷ ಪಿತ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹುದ್ದೂರ ಶಾಸ್ತ್ರೀಜಿ ಅವರ ಸಂದೇಶವನ್ನು ನಾವೆಲ್ಲರೂ ನವ್ಮ ಜೀವನದಲ್ಲಿ ಅಳವಡಿಸಿಕೋಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ ಅವರು ಹೇಳಿದರು.

ನಗರದ ಗಾಂಧೀ ಸರ್ಕಲ್ ಹತ್ತಿರ ಗುರುವಾರ ಜಿಲ್ಲಾಡಳಿತ,ಗದಗ-ಬೆಟಗೇರಿ ನಗರಸಭೆ ಆಶ್ರಯದಲ್ಲಿ ರಾಷ ಪಿತ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹುದ್ದೂರ ಶಾಸ್ತ್ರೀಜೀ ಜನ್ಮ ದಿನಾಚರಣೆ ಅಂಗವಾಗಿ ಮಹಾತ್ಮ ಗಾಂಧೀಜಿಯವರ ಪುತ್ತಳಿಗೆ ಮಾಲಾರ್ಪಣೆ ಮಾಡಿದರು ಅವರು ಮಾತನಾಡಿದರು.

ಇದೇ ಸಂಭರ್ದದಲ್ಲಿ ಸ್ವಚ್ಚತಾ ಹೀ ಸೇವಾ ಹಾಗೂ ನಮಸ್ತೆ ಅಭಿಯಾನದಡಿಯಲ್ಲಿ ಗುರುತಿಸಲಾದ ಸೆಪ್ಟಿಕ್ ಟ್ಯಾಂಕ್ ಮತ್ತು ಸೀವರ್ ಸ್ವಚ್ಚತಾ ಕೆಲಸಗಾರರಿಗೆ ಸುರಕ್ಷಾ ಕಿಟ್‌ಗಳನ್ನು ಹಾಗೂ ಆಯುಷ್ಮಾನ್ ಭಾರತ್ ಕಾರ್ಡಗಳನ್ನು ವಿತರಿಸಿ ನಗರದ ಸ್ವಚ್ಚತೆ ಕಾರ್ಯದಲ್ಲಿ ಸ್ವಚ್ಚತಾ ಕೆಲಸಗಾರರ ಪಾತ್ರ ಮಹತ್ವದಾಗಿದ್ದು ಈ ನಿಟ್ಟಿನಲ್ಲಿ ನಗರದ ಎಲ್ಲಾ ಪೌರಕಾರ್ಮಿಕರು ನಗರಸಭೆಯಿಂದ ವಿತರಿಸಲಾಗುವ ಸುರಕ್ಷಾ ಕಿಟ್‌ಗಳನ್ನು ಧರಿಸಿಕೊಂಡು ಕೆಲಸ ಮಾಡವಂತೆ ಅಧಿಕಾರಿಗಳ ಕ್ರಮವಹಿಸಬೇಕೆಂದು ಎಂದರು.ಇದೇ ಸಚಿದರ್ಭದಲ್ಲಿ ಡಾ.ಬಿ.ಆರ್ ಅಂಬೇಡ್ಕರ್ ಪುತ್ತಳಿಗೆ ಮಾಲಾರ್ಪಣೆ ಮಾಡಿ ಉದ್ಯಾನದಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನ ನೀಡಿದರು.

ಈ ಸಂಧರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ.ದುರಗೇಶ.ಕೆ.ಆರ್, ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಬಸವನಗೌಡ ಕೊಟೂರು, ನಗರಸಭೆ ಪೌರಾಯುಕ್ತ ರಾಜಾರಾಮ ಎಸ್ ಪವಾರ, ಕರ್ನಾಟಕ ನಗರ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ ಕಾರ್ಯ ಪಾಲಕ ಅಭಿಯಂತರ ಜಗದೀಶ ಹೊಸಮನಿ, ಅಧಿಕಾರಿಗಳಾದ ಬಸವರಾಜ ಬಳ್ಳಾರಿ, ಆನಂದ ಬದಿ, ಎಚ್ ಎ ಬಂಡಿವಡ್ಡರ ಸೇರಿದಂತೆ ಸಿಬ್ಬಂಧಿ ವರ್ಗದವರು ಹಾಗೂ ಎನ್.ಸಿ.ಸಿ ವಿದ್ಯಾರ್ಥಿಗಳು, ನಗರಸಭೆ ಕಮ್ಯೂನಿಟಿ ಮೊಬಲೈಜರ್‌ಗಳು, ಹಾಜರಿದ್ದರು.



# ದಸರಾ ಆಯುಧ ಪೂಜೆ: ಚಾಲಕರಿಗೆ ಸನ್ಮಾನ



**ಬಾಗಲಕೋಟೆ:** ಬಿ.ವಿ.ವಿ.ಸಂಘದ ಅಟೋಮೊಬೈಲ್ ವಿಭಾಗದಿಂದ ಸಂಘದ ಎಲ್ಲ ವಾಹನಗಳಿಗೆ ಶೃದ್ಧಾಭಕ್ತಿಪೂರ್ವಕ ಸಂಭ್ರಮ ದಿಂದ ಪೂಜೆ ಸಲ್ಲಿಸುವ ಮೂಲಕ ಆಯುಧ ಪೂಜೆಯನ್ನು ನೆರವೇರಿಸಲಾಯಿತು.

ಬಿವಿವಿ ಸಂಘದ ಆಟದ ಮೈದಾನದಲ್ಲಿ ಎಲ್ಲ ವಾಹನಗಳಿಗೆ ಹಾಗೂ ಬೀಳೂರು ಶ್ರೀ ಗುರುಬಸವ ಸ್ವಾಮಿಗಳ ಪುತ್ಥಳಿಗೆ ಪೂಜೆ ಸಂಘದ ಕಾರ್ಯಾದ್ಯಕ್ಷರಾದ ಡಾ. ವೀರಣ್ಣ ಚರಂತಿಮಠ ಅವರು ಪೂಜೆ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ವಾಹನ ಚಾಲಕರಾಗಿ ಅಕಾಲಿಕ ಮರಣ ದೊಂದಿದ ನಿಮಿತ್ಯ ದಿ,ರಾಮಸ್ವಾಮಿ ಹೆಳವರ ಅವರ ಧರ್ಮಪತ್ನಿಯವರಿಗೆ ವಾಹನ ಸಮಿತಿಯಿಂದ ಸಹಾಯಧನವನ್ನು ವಿತರಿಸಿದರು, ನಂತರ ಉತ್ತಮ ಚಾಲನೆ ಹಾಗೂ ನಿರ್ವಹನೆ ಮಾಡಿದ 25ಕ್ಕೆ ಹೆಚ್ಚು ಚಾಲಕರನ್ನು ಗುರುತಿಸಿ ಅವರರಿಗೆ ಸನ್ಮಾನಿಸಿ ಗೌರವಿಸಲಾಯಿತು. ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಅಶೋಕ ರೇಣುಕಪ್ಪ, ಜಿ. ಎನ್. ಪಾಟೀಲ, ಗುರುಬಸವ ಸೂಳಿಬಾವಿ, ಮಹಾಂತೇಶ ಶೆಟ್ಟರ, ಮಲ್ಲಿಕಾರ್ಜುನ ಸಾಸನೂರ, ಕುಮಾರ ಜಿಗಜಿನ್ನಿ, ಪ್ರಭುಸ್ವಾಮಿ ಚರಂತಿಮಠ, ಕುಮಾರಸ್ವಾಮಿ ಹಿರೇಮಠ, ಸೇರಿದಂತೆ ಸಂಘದ ಸದಸ್ಯರು ಭಾಗವಹಿಸಿದ್ದರು.

# ಸೂರ್ಯಕಾಂತಿ ಖರೀದಿಗೆ ಬೆಲೆ ನಿಗದಿ

**ಗದಗ:** 2025-26 ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಸೂ ರ್ಯಕಾಂತಿ ಹುಟ್ಟುವಳಿಯನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಶುಕ್ರವಾರ 2025-26 ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಸೂ ರ್ಯಕಾಂತಿ ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 04 ಕ್ವಿಂಟಲ್‌ನಂತೆ ಗರಿಷ್ಟ 20 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಹೆಸರು ಖರೀದಿಸಲು ಹಾಗೂ ಸೂ ರ್ಯಕಾಂತಿ ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಸೂ ರ್ಯಕಾಂತಿ ಉತ್ಪನ್ನವನ್ನು ಖರೀದಿಸಿದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗವಾಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದರು. ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಸೂ ರ್ಯಕಾಂತಿ ಎಫ್.ಎ.ಕ್ಯೂ ಪ್ರಕ್ರಿಯೆಯಲ್ಲಿ ಎಫ್.ಎ.ಕ್ಯೂ ಗುಣಮಟ್ಟ ಪರಿಶೀಲನೆಗಾಗಿ ಲಭ್ಯವಿರುವ ಅಧಿಕಾರಿ / ಸಿಬ್ಬಂದಿಗಳನ್ನು ಬಳಸಿಕೊಳ್ಳುವುದು. ತರಬೇತಿ ಅವಶ್ಯವಿದ್ದಲ್ಲಿ ಅಂತಹ ಸಿಬ್ಬಂದಿಗಳಿಗೆ ಎಫ್.ಎ.ಕ್ಯೂ ಗ್ರೇಡಿಂಗ್ ತರಬೇತಿ ನೀಡಲು ಖರೀದಿ ಸಂಸ್ಥೆಗಳು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರಾದ ಸುಧಾ ಬಂಡಿ ಅವರು ಮಾತನಾಡಿ ಎಫ್.ಎ.ಕ್ಯೂ ಗುಣಮಟ್ಟದ ಸೂ ರ್ಯಕಾಂತಿ ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ರೂ. 7721 ರಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸರ್ಕಾರ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರಗೆ ನಿಗದಿಪಡಿಸಲಾಗಿದೆ. ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಸಹ ಪ್ರಾರಂಭಿಸಲು ಆದೇಶಿಸಲಾಗಿದೆ. ಸರ್ಕಾರದ ಆದೇಶದನುಸಾರ ನ್ಯಾಫೆಡ್ ಸಂಸ್ಥೆ ಮತ್ತು ಎನ್.ಸಿ.ಸಿ.ಎಫ್. ಸಂಸ್ಥೆಯನ್ನು ಕೇಂದ್ರದ ಖರೀದಿ ಏಜೆನ್ಸಿಯಾಗಿ ಹಾಗೂ ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾ ಮಂಡಳಿ ನಿಯಮಿತ ( ಕೆಓಎಫ್ ) ಬೆಂಗಳೂರು ಇವರನ್ನು ರಾಜ್ಯ ಮಟ್ಟದ ಖರೀದಿ ಏಜೆನ್ಸಿಯನ್ನಾಗಿ ಗುರುತಿಸಲಾಗಿದೆ. ಸೂರ್ಯಕಾಂತಿ ಹುಟ್ಟುವಳಿಯನ್ನು ಖರೀದಿಸಲು ಖರೀದಿ ಕೇಂದ್ರಗಳನ್ನು ತೆರೆಯಲು ಸೂರ್ಯಕಾಂತಿ ಹುಟ್ಟುವಳಿ ಉತ್ಪಾದನಾ ಆಧಾರದ ಮೇಲೆ ಮತ್ತು ರೈತರ ನೋಂದಣಿ ಆಧಾರದ ಮೇಲೆ ಗ್ರಾಮೀಣ ಭಾಗದ ರೈತರಿಗೆ ಅನುಕೂಲವಾಗುವಂತೆ ಎನ್.ಸಿ.ಸಿ.ಎಫ್. ಮಾರ್ಗಸೂಚಿಗಳನ್ವಯ ಹಾಗೂ ತಾಂತ್ರಿಕ ಮತ್ತು ವೈಜ್ಞಾನಿಕ ಸೌಲಭ್ಯದಿಂದ ಕೂಡಿರುವ ಸದೃಡ PACS/ OGCS/TAPCMS/FPO/Agricultural Prodece Co operative Marketing Processing Societies ಸಂಸ್ಥೆಗಳ ಮುಖಾಂತರ ಒಡಂಬಡಿಕೆ ಮಾಡಿಕೊಂಡು 9 ಸ್ಥಳಗಳಲ್ಲಿ ಖರೀದಿ ಕೇಂದ್ರ ತೆರೆಯಲು ತೀರ್ಮಾನಿಸಲಾಯಿತು.

ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಕಾನೂನು ಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಗಾಂಧಿ ಜಯಂತಿ ಅಂಗವಾಗಿ ಸಾಮೂಹಿಕ ಶ್ರಮದಾನ

**ಹಾವೇರಿ:** ಗಾಂಧಿ ಜಯಂತಿ ಅಂಗವಾಗಿ ಮಂಗಳವಾರ ನಗರದ ವಿವಿಧ ರಸ್ತೆಗಳು ಹಾಗೂ ವೃತ್ತಗಳ ಸ್ವಚ್ಛತಾ ಕಾರ್ಯದಲ್ಲಿ ಅಪರ ಜಿಲ್ಲಾಧಿಕಾರಿ ಡಾ.ನಾಗರಾಜ್ ಎಲ್ ಅವರು ಭಾಗಿಗಳಾಗಿ ಶ್ರಮದಾನ ಮಾಡಿದರು.

ಗಾಂಧೀಜಿ ವೃತ್ತದ ಸ್ವಚ್ಛತಾ ಕಾರ್ಯದ ಮೂಲಕ ಶ್ರಮದಾನಕ್ಕೆ ಚಾಲನೆ ನೀಡಲಾಯಿತು, ಮಹಾನ್ ವ್ಯಕ್ತಿಗಳ ಪುತ್ಥಳಿಯ ಸುತ್ತಮುತ್ತ ಕಸ ಹಾಕದಂತೆ ಹಾಗೂ ನಗರ ಸ್ವಚ್ಛತೆ ಬಗ್ಗೆ ಕಾಳಜಿಸಬೇಕು. ಸುಂದರ ನಗರ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಸಾರ್ವಜನಿಕರಿಗೆ ಕರೆ ನೀಡಲಾಯಿತು. ಎಲ್ಲ ಇಲಾಖೆಗಳ ಅಧಿಕಾರಿಗಳು ಹಾಗೂ ನೌಕರರು ಸೇರಿದಂತೆ ಒಂದು ಸಾವಿರಕ್ಕೂ ಅಧಿಕ ಅಧಿಕಾರಿ -ನೌಕರರು ತಂಡ ತಂಡವಾಗಿ ಇಂದಿನ ಶ್ರಮದಾನ ಕಾರ್ಯದಲ್ಲಿ ಪಾಲ್ಗೊಂಡು ಜೆ.ಎಚ್.ಪಟೇಲ್ ವೃತ್ತ, ವಿ.ಕೃ.ಗೋಕಾಕ ವೃತ್ತ, ಶ್ರೀ ಬಸವೇಶ್ವರ ವೃತ್ತ, ಸುಭಾಸ ವೃತ್ತ, ವಿ.ಕೃ. ಗೋಕಾಕ, ಜೆ.ಪಿ.ವೃತ್ತ, ಮಹಾತ್ಮಗಾಂಧಿ ವೃತ್ತ, ಮೈಲಾರ ಮಹದೇವಪ್ಪ ವೃತ್ತ, ಹೊಸಮನಿ ಸಿದ್ದಪ್ಪ ವೃತ್ತ, ಕಿತ್ತೂರ ಚನ್ನಮ್ಮ ವೃತ್ತ, ಮಹರ್ಷಿ ವಾಲ್ಮೀಕಿ ವೃತ್ತ, ನಗರದ ಪ್ರಮುಖ ಬೀದಿಗಳ ಸ್ವಚ್ಛತೆ ಕಾರ್ಯ ನೆರವೇರಿಸಿದರು.



ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಯಾನಂದ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಪಿ.ಆರ್.ಹಾವನೂರ, ತಹಶೀಲ್ದಾರ ಶರಣಮ್ಮ, ನಗರಸಭೆ ಪೌರಾಯುಕ್ತ ಕಾಂತರಾಜು, ವಾರ್ತಾಧಿಕಾರಿ ಭಾರತಿ ಎಚ್, ಜಿಲ್ಲಾಧಿಕಾರಿಗಳ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಪಶು ಸಂಗೋಪನೆ ಇಲಾಖೆ, ಕಂದಾಯ ಇಲಾಖೆ, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖಾ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸ್ವಚ್ಛತಾ ಕಾರ್ಯದಲ್ಲಿ ಭಾಗವಹಿಸಿ ಶ್ರಮದಾನದ ಮೂಲಕ ನಗರ ಸ್ವಚ್ಛತೆ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಿದರು

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :204, Postal Reg No. PMG/KA/NK/BM/135/25-27 / POST AT Vantamury Colony Post Office

ಕರ್ನಾಟಕ ಸರ್ಕಾರ





# ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ 2025

## ಸಾಮಾಜಿಕ ನ್ಯಾಯದ ಅನುಷ್ಠಾನದತ್ತ ಹೊಸ ಆರಂಭ



**ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 07**ರವರೆಗೆ
ಮನೆಮನೆಗೆ ತೆರಳಿ ದತ್ತಾಂಶ ಸಂಗ್ರಹ

## ರಾಜ್ಯದ 2 ಕೋಟಿ ಕುಟುಂಬಗಳ ಸುಮಾರು 7 ಕೋಟಿ ಜನರ ಸಾಮಾಜಿಕ ಹಾಗೂ ಶೈಕ್ಷಣಿಕ ಸ್ಥಿತಿಗತಿಗಳ ವೈಜ್ಞಾನಿಕ ಅಧ್ಯಯನ

**1.75 ಲಕ್ಷ ಶಿಕ್ಷಕರ** ಮೂಲಕ ಸಮೀಕ್ಷೆ ಕಾರ್ಯ, ಸಮೀಕ್ಷೆಗಾಗಿ **ರೂ.420 ಕೋಟಿ** ನಿಗದಿ

ಸಮೀಕ್ಷೆ ಆರಂಭಕ್ಕೆ ಪೂರ್ವದಲ್ಲಿ ಆಶಾ ಕಾರ್ಯಕರ್ತೆಯರಿಂದ ಪ್ರತಿ ಮನೆಗೆ ಸಮೀಕ್ಷಾ ಸಮೂನೆ ಹಂಚಿಕೆ ಮಾಡಲಾಗುವುದು

ಪ್ರತಿ ಮನೆಯ ವಿದ್ಯುತ್ ಮೀಟರ್ ಆಧಾರದಲ್ಲಿ ಮನೆಯ **ಜಿಯೋ ಟ್ಯಾಗ್** ಮಾಡಿ ಯು.ಹೆಚ್.ಐ.ಡಿ ವಿಶೇಷ ಸಂಖ್ಯೆ ನಮೂದಿಸಲಾಗುವುದು.



**60 ಪ್ರಶ್ನೆಗಳ** ಮೂಲಕ ವಸ್ತುನಿಷ್ಠ ದತ್ತಾಂಶ ಸಂಗ್ರಹ ಮಾಡಲಾಗುವುದು

ಪಡಿತರ ಚೀಟಿ ಹಾಗೂ ಆಧಾರ್ ಕಾರ್ಡ್ ಅನ್ನು ಮೊಬೈಲ್ ಸಂಖ್ಯೆಯೊಂದಿಗೆ ಜೋಡಣೆ ಮಾಡಲಾಗುವುದು

ಸಮೀಕ್ಷೆಗೆ ಸಂಬಂಧಿಸಿದ ದೂರು ದಾಖಲು ಮಾಡಲು ಅಥವಾ ಮಾಹಿತಿ ಪಡೆಯಲು ಆಯೋಗದ ಸಹಾಯವಾಣಿ **80507 70004**ಗೆ ಕರೆಮಾಡಿ

ಆನ್ ಲೈನ್ ಮೂಲಕವೂ ಸಮೀಕ್ಷೆಯಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಲಾಗಿದೆ

**ಸಮೀಕ್ಷೆಯಲ್ಲಿ ಪ್ರತಿಯೊಬ್ಬರೂ ಪಾಲ್ಗೊಂಡು, ವಾಸ್ತವ ಹಾಗೂ ಸಮರ್ಪಕವಾದ ಮಾಹಿತಿಯನ್ನು ಒದಗಿಸಿ, ಸಮೀಕ್ಷೆಯನ್ನು ಯಶಸ್ವಿಗೊಳಿಸಿಕೊಡಬೇಕೆಂದು ಕೋರುತ್ತೇವೆ.**

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

ಶಕ್ತಿ ಅನ್ನಭಾಗ್ಯ ಗೃಹ ಜ್ಯೋತಿ ಗೃಹಲಕ್ಷ್ಮಿ ಯುವನಿಧಿ

CMofKarnataka https://dipr.karnataka.gov.in/

"ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು ಪ್ರತಿಯೊಬ್ಬ ಭಾರತೀಯನ ಮೂಲಭೂತ ಕರ್ತವ್ಯ"

ಕರ್ನಾಟಕ ವಾರ್ತೆ